ಸಂಪುಟ: Volume 13 ಸಂಚಿಕೆ: Issue 311 ಪುಟಗಳು Pages 08 ಶುಕ್ರವಾರ 30 ಜನವರಿ 2026 ₹6 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಶರೀರ ಕೃಷಿ ಭೂಮಿಯಾಗಿದೆ. ಮನಸ್ಸು ಕೃಷಿಯಾಗಿದೆ. ಪಾಪ ಪುಣ್ಯಗಳು ಬೀಜಗಳಾಗಿವೆ. ಯಾವ ಬೀಜವನ್ನು ಬಿತ್ತುತ್ತಾನೋ ಅದನ್ನು ಕೊಯ್ಯುತ್ತಾನೆ.

–ತುಳಸೀದಾಸರು

ದಲಿತ ವಿಚಾರ ಸಂಕಿರಣ ಫೆ. 3ರಂದು 4

ಮಕ್ಕಳಿಗೆ ಅರಿವು ಸ್ವಚ್ಛತೆ ತರಬೇತಿ 6

ಶಸ್ತ್ರ ಚಿಕಿತ್ಸಾ ತಜ್ಞರಿಗೆ ತರಬೇತಿಯ ಅಗತ್ಯ 7

## ಹೃದಯಘಾತಕ್ಕೆ ವಿದ್ಯಾರ್ಥಿನಿ ಸಾವು

**ಕುಕನೂರು:** ಪಿಯುಸಿ ಫಸ್ಟ್ ಇಯರ ವಿದ್ಯಾರ್ಥಿನಿ ಹೃದಯಘಾತಕ್ಕೆ ಬಲಿಯಾದ ಘಟನೆ ನಡೆದಿದೆ.



ಕುಕನೂರು ತಾಲೂಕಿನ ರಾವಣಕಿ ಗ್ರಾಮದ ಕಾವ್ಯ ತಂದೆ ಶಿವಪ್ಪ ಚಲವಾದಿ ಎನ್ನುವ 17 ವರ್ಷದ ಕುಕನೂರು ಪಟ್ಟಣದ ಪಿಯುಸಿ ಫಸ್ಟ್ ಇಯರ್ ವಿದ್ಯಾರ್ಥಿ ಸಾವನ್ನಪ್ಪಿದೆ. ಮಂಗಳವಾರ ದಿವಸ ಮನೆಯಲ್ಲಿ ಕೆಲಸ ಮಾಡುವ ಸಂದರ್ಭದಲ್ಲಿ ಕುಸಿದು ಬಿದ್ದು ಸಾವನಪ್ಪಿದೆ ಎಂದು ತಿಳಿದುಬಂದಿದೆ.



ಗೌರವಾನ್ವಿತ ಮಾಜಿ ಪ್ರಧಾನಿಗಳಾದ ಶ್ರೀ ಹೆಚ್.ಡಿ. ದೇವೇಗೌಡರು ಇಂದು ಗೌರವಾನ್ವಿತ ಪ್ರಧಾನಿಗಳಾದ ಶ್ರೀ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

## ಬಸವಣ್ಣನಂತಿದ್ದ ಭೀಮಣ್ಣ ಖಂಡ್ರೆ: ವಾಟಾಳ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಭಾಲ್ಕಿ ಕ್ಷೇತ್ರವನ್ನು 1962ರಿಂದ 4 ಬಾರಿ ಪ್ರತಿನಿಧಿಸಿದ್ದ ಭೀಮಣ್ಣ ಖಂಡ್ರೆ ಅವರು ವಿಧಾನಸಭೆಯಲ್ಲಿ ಬಸವಣ್ಣನ ನಾಡಿನಿಂದ ಬಂದ ಬಸವಣ್ಣನಂತಿದ್ದರು ಎಂದು ಕನ್ನಡ ಚಳವಳಿ ನಾಯಕ ವಾಟಾಳ್ ನಾಗರಾಜ್ ಅಭಿಪ್ರಾಯಪಟ್ಟಿದ್ದಾರೆ.

ಏಕೀಕರಣದ ಸಮಯದಲ್ಲಿ ಬೀದರ್ ಜಿಲ್ಲೆಯನ್ನು ಮೈಸೂರು ರಾಜ್ಯದಲ್ಲಿ ಉಳಿಸಲು ಅವರು ಹೋರಾಡಿದ್ದರು. ಹಾವನೂರು ಆಯೋಗದ ವರದಿಯ ವಿರುದ್ಧ ಅವರು ನಡೆಸಿದ ಹೋರಾಟ ಅವಿಸ್ಮರಣೀಯ, ಸಮಾಜದ ಬಗ್ಗೆ ಅವರಿಗಿದ್ದ ಕಾಳಜಿಗೆ



ಸರಿಸಾಟಿಯೇ ಇಲ್ಲ ಎಂದಿದ್ದಾರೆ. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾಗಿ ಆಯ್ಕೆಯಾದ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.



ರಾಜ್ಯ ಕಬ್ಬು ಬೆಳೆಗಾರರ ರೈತ ಸಂಘದ ಪದಾಧಿಕಾರಿಗಳು ವಿಧಾನಸೌದದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಪತ್ರ ಅರ್ಪಿಸಿದರು.



ಬೆಂಗಳೂರು: ವಿವಿಧ ಸಂಘ ಸಂಸ್ಥೆಗಳು ಸ್ನೇಹ ಹಿತೈಷಿಗಳಿಂದ ಮಾದರಿ ಸಮಾಜಸೇವಕ ಆರ್ ಗಿರಿಧರ್ ರವರಿಗೆ ನುಡಿ ನಮನ ಕಾರ್ಯಕ್ರಮವನ್ನು ಆರ್ ಟಿ ನಗರದ ಆನಂದನಗರ ಎಸ್ ಬಿ ಐ ಲೇಔಟ್ ನಿವಾಸದಲ್ಲಿ ಶ್ರೀಮತಿ ಅನುಸೂಯ ವಿ ಗಿರಿಧರ್‌ರವರು ಆಯೋಜಿಸಿದ್ದರು.



ಹುಮನಬಾದ ಪಟ್ಟಣದ ಶ್ರೀ ವೀರಭದ್ರೇಶ್ವರ ಜಾತ್ರೆ ನಿಮಿತ್ಯ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಬಸವಕಲ್ಯಾಣದ ಆಯುಕ್ತರಾದ ಪ್ರಕಾಶ ಕುದರೆ, ತಹಸೀಲ್ದಾರ್ ಅಂಜುಮ್ ತಬಸುಮ್ ರವರು ಶ್ರೀ ವೀರಭದ್ರೇಶ್ವರರ ಪಲ್ಲಕ್ಕಿ ಉತ್ಸವದಲ್ಲಿ ಭಗವಹಿಸಿ ವಿಶೇಷ ದರ್ಶನ ಪಡೆದು ಪುನಿತರಾದರು.

# ರಾಜಿನಾಮೆಯ ಹೈ ಡ್ರಾಮಾ

## ಹಿರಿಯ ಸಚಿವ ಕೆಜೆ ಜಾರ್ಜ್ ಇದೀಗ ಚರ್ಚೆಗೆ ಗ್ರಾಸ | ಸದನದಲ್ಲಿ ಪ್ರತಿಪಕ್ಷಗಳಿಂದ ಪ್ರತಿಧ್ವನಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಿದ್ದರಾಮಯ್ಯ ಆಪ್ತವಲಯದಲ್ಲಿ ಗುರುತಿಸಿಕೊಂಡಿರುವ ಹಿರಿಯ ಸಚಿವ ಕೆಜೆ ಜಾರ್ಜ್ ಇದೀಗ ಚರ್ಚೆಗೆ ಗ್ರಾಸವಾಗಿದ್ದಾರೆ. ಬೇರೆ ಕಾರಣಕ್ಕೆ ಅವರು ರಾಜೀನಾಮೆ ಕೊಡಲು ಮುಂದಾಗಿದ್ದಾರೆ ಎಂಬ ವಿಚಾರ ರಾಜ್ಯ ರಾಜಕೀಯದಲ್ಲಿ ಹೈಡ್ರಾಮ ಸೃಷ್ಟಿಸಿದೆ. ಕೆಜೆ ಜಾರ್ಜ್ ರಾಜೀನಾಮೆ ವದಂತಿ ರೆಕ್ಕೆಪುಕ್ಕ ಸೇರಿಕೊಂಡ ಹಿನ್ನೆಲೆಯಲ್ಲಿ ಸ್ವತಃ ಕೆಜೆ ಜಾರ್ಜ್ ಅವರೇ ಇದನ್ನು ನಿರಾಕರಿಸಬೇಕಾಗಿ ಬಂದದ್ದು ವಿಶೇಷವಾಗಿದೆ.

**ಸಿಎಂ ಆಪ್ತ ವಲಯದಲ್ಲಿದ್ದರು:** ಕೆಜೆ ಜಾರ್ಜ್ ರಾಜ್ಯ ಸರ್ಕಾರದ ಪ್ರಭಾವಿ ಸಚಿವ. ಸಿದ್ದರಾಮಯ್ಯ ಅವರ ಆಪ್ತವಲಯದಲ್ಲಿ ಗುರುತಿಸಿಕೊಂಡವರು. ಆದರೆ ಸಿಎಂ ಕಚೇರಿಯ ನಡೆಯಿಂದ ಅವರು ಅಸಮಾಧಾನಗೊಂಡಿದ್ದಾರೆ ಎಂಬ ಮಾತುಗಳು ಹರಿದಾಡತೊಡಗಿದ್ದಕ್ಕೆ ವಿಷಯ ತೀವ್ರ ಸ್ವರೂಪ ಪಡೆದುಕೊಂಡಿದೆ. ಬಿಜೆಪಿ ಸದಸ್ಯ ಸುನೀಲ್ ಕುಮಾರ್ ವಿಧಾನಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸಿದ್ದು ಗಮನ ಸೆಳೆದಿದೆ.

**ಪ್ರತಿ ಧ್ವನಿಸಿದ ಪ್ರಸಂಗ:** ಇಂಧನ ಸಚಿವ ಕೆ.ಜೆ ಜಾರ್ಜ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದರೇ, ಈ ವಿಚಾರ ಮಾಧ್ಯಮಗಳಲ್ಲಿ ವರದಿಯಾಗಿ ನಂತರ ಇಂದು ವಿಧಾನಸಭೆಯಲ್ಲಿ ಕೂಡ ಪ್ರತಿಧ್ವನಿಸಿದ ಪ್ರಸಂಗ ನಡೆಯಿತು.



### ರಾಜಿ ನಾಮೆಯ ವದಂತಿ..?

ಕೆಜೆ ಜಾರ್ಜ್ ಅವರು ರಾಜೀನಾಮೆ ಕೊಡಲು ಮುಂದಾಗಿದ್ದಾರೆ ಎಂಬ ಸುದ್ದಿ ಬರುತ್ತಿದೆ, ಇದು ನಿಜವೇ? ಎಂದು ಪ್ರಶ್ನಿಸಿದ್ದರು. ಆದರೆ ಸದನದಲ್ಲಿ ಸ್ವತಃ ಜಾರ್ಜ್ ಇದನ್ನು ನಿರಾಕರಿಸಿದ್ದರು. ಹಾಗಿದ್ದರೂ ರಾಜೀನಾಮೆ ಸುದ್ದಿಯ ಸುತ್ತ ಸಾಕಷ್ಟು ವಿಚಾರಗಳು ಹರಿದಾಡತೊಡಗಿವೆ. ಕೆಲವು ಮೂಲಗಳ ಪ್ರಕಾರ, ಹಿರಿಯ ಐಎಎಸ್ ಅಧಿಕಾರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಕಚೇರಿಯ ನಡೆಗೆ ಜಾರ್ಜ್ ಅಸಮಾಧಾನಗೊಂಡಿದ್ದಾರೆ ಎಂಬ ಮಾಹಿತಿ ಇದೆ.

### ಪೊನ್ನಣ್ಣಮನವೊಲಿಸಿದ್ದರೆ?

ಇಂಧನ ಇಲಾಖೆಯ ಅಧಿಕಾರಿಗಳ ವರ್ಗಾವಣೆ ವಿಚಾರಕ್ಕೆ ವಿಶ್ವಾಸಕ್ಕೆ ಪಡೆಯದೆ ಕ್ರಮ ಕೈಗೊಳ್ಳಲಾಗಿದೆ ಎಂಬ ಕಾರಣಕ್ಕೆ ಅಸಮಾಧಾನಗೊಂಡು ಜಾರ್ಜ್ ಸಿಎಂಗೆ ರಾಜೀನಾಮೆ ಪತ್ರ ನೀಡಲು ಮುಂದಾಗಿದ್ದರು. ಆಗ ಸಿಎಂ ಅವರ ಕಾನೂನು ಸಲಹೆಗಾರ ಪೊನ್ನಣ್ಣ ಜಾರ್ಜ್ ಮನವೊಲಿಸಿದ್ದರು ಎಂಬ ವಿಚಾರ ವರದಿಯಾಗಿದೆ. ಈ ಬಗ್ಗೆ ವಿಧಾನಸಭೆಯಲ್ಲಿ ಸ್ವತಃ ಕೆಜೆ ಜಾರ್ಜ್ ಸ್ಪಷ್ಟನೆ ನೀಡಿದ್ದಾರೆ.

### ವದಂತಿ ತಳ್ಳಿಹಾಕಿದ ಜಾರ್ಜ್

ಪ್ರಶ್ನೋತ್ತರ ಅವಧಿಯ ಬಳಿಕ ಈ ವಿಚಾರವಾಗಿ ಬಿಜೆಪಿ ಸದಸ್ಯ ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸಿ, ಸಿಎಂ ಪುತಯ್ರ ಹಸ್ತಕ್ಷೇಪದ ಕಾರಣಕ್ಕೆ ರಾಜೀನಾಮೆ ಜಾರ್ಜ್ ಕೊಟ್ಟಿದ್ದಾರೆ ಎಂಬ ಸುದ್ದಿ ಬಗ್ಗೆ ಸ್ಪಷ್ಟನೆ ಕೊಡಿ ಎಂದು ಕೇಳಿದ್ದಕ್ಕೆ, ನಾನು ಮಾಧ್ಯಮಗಳಿಗೆ ಹೇಳಿದ್ದೇನಾ? ನನಗೆ ಸಿಎಂ ಮೇಲೆ ಸಂಪೂರ್ಣ ನಂಬಿಕೆ ಇದೆ. ಈ ಮಾಹಿತಿ ಸತ್ಯಕ್ಕೆ ದೂರವಾಗಿದೆ ಎಂದು ಜಾಜ್ ತಳ್ಳಿಹಾಕಿದ್ದಾರೆ.

### ಫೆ.4ರವರೆಗೆ ಅಧಿವೇಶನ

ರಾಜ್ಯ ವಿಧಾನಮಂಡಲದ ಅಧಿವೇಶನವನ್ನು ಫೆ.4 ರವರೆಗೆ, ಅಂದರೆ ಇನ್ನೂ ನಾಲ್ಕು ದಿನಗಳವರೆಗೆ ವಿಸ್ತರಿಸಲಾಗುವುದು ಎಂದು ಸ್ಪೀಕರ್ ಯು ಟಿ ಖಾದರ್ ಪ್ರಕಟಿಸಿದ್ದಾರೆ. ಜ.22 ರಿಂದ ಪ್ರಾರಂಭವಾದ ಜಂಟಿ ಅಧಿವೇಶನ ಜ.31ಕ್ಕೆ ಅಂತ್ಯವಾಗಬೇಕಿತ್ತು. ಆದರೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಮನರೇಗಾ ಕಾಯ್ದೆ ಕುರಿತು ಸಮಗ್ರ ಚರ್ಚೆ ನಡೆಸಲು ಅಧಿವೇಶನ ವಿಸ್ತರಿಸುವ ಬಗ್ಗೆ ಸಿಎಂ ಒಲವು ವ್ಯಕ್ತಪಡಿಸಿದ್ದರು.

### ಯತೀಂದ್ರನಹಸ್ತಕ್ಷೇಪ..?

ಇಂಧನ ಇಲಾಖೆಯ ಕೆಲವು ಅಧಿಕಾರಿಗಳನ್ನು ವರ್ಗಾವಣೆ ಮಾಡಲು ಸಿಎಂ ಕಚೇರಿ ಮುಂದಾಗಿತ್ತು. ಸಿಎಂ ಪುತ್ರ ಯತೀಂದ್ರ ಸಿದ್ದರಾಮಯ್ಯ ಇಂಧನ ಇಲಾಖೆ ಆಡಳಿತದಲ್ಲಿ ತೀವ್ರ ಹಸ್ತಕ್ಷೇಪ ಮಾಡುತ್ತಿದ್ದರು. ಇದರಿಂದ ಅಸಮಾಧಾನಗೊಂಡ ಕೆಜೆ ಜಾರ್ಜ್ ಸಿಎಂ ನಿವಾಸಕ್ಕೆ ತೆರಳಿ ಪ್ರಶ್ನಿಸಿದ್ದರು. ಅಲ್ಲದೆ ಸಚಿವ ಸಂಪುಟ ಸಭೆಗೂ ಗೈರಾಗಿದ್ದರು ಎಂದು ಹೇಳಲಾಗಿತ್ತು.

## ಕಾಮ್ರೆಡ್ ಸುಬ್ಬಾರಾವ್ ನಿಧನಕ್ಕೆ ಸಿಎಂ ಸಂತಾಪ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕಾರ್ಮಿಕರ ಹೋರಾಟದಲ್ಲಿ ತಮ್ಮ ಜೀವಿತದ ಕೊನೆಕ್ಷಣದವರೆಗೂ ಸಕ್ರಿಯರಾಗಿದ್ದ ಅನಂತ ಸುಬ್ಬಾರಾವ್ ಅವರೊಬ್ಬ ಬದ್ಧತೆಯ ಸಿಪಿಐ ನಾಯಕರಾಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ದಿ. ಕಾಮ್ರೆಡ್ ಎಚ್‌ವಿ ಅನಂತ ಸುಬ್ಬರಾವ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ಕಾಮ್ರೆಡ್ ಅನಂತ ಸುಬ್ಬರಾವ್ ಅವರು ಕಾರ್ಮಿಕರ ಧ್ವನಿಯಾಗಿ ಹಲವು



ಹೋರಾಟಗಳಲ್ಲಿ ಸಕ್ರಿಯರಾಗಿದ್ದರು. ಬದ್ಧತೆಯ ಜಾತ್ಯಾತೀತ ಹಾಗೂ ಸಿಪಿಐ ನಾಯಕರಾಗಿದ್ದರು. ಅವರ ಸಾವಿನಿಂದ ರಾಜ್ಯಕ್ಕೆ ನಷ್ಟವುಂಟಾಗಿದ್ದು, ಅವರ ಆತ್ಮಕ್ಕೆ ಶಾಂತಿಯನ್ನು ನೀಡಲಿ ಎಂದು ಪ್ರಾರ್ಥಿಸುವುದಾಗಿ ನುಡಿದಿದ್ದಾರೆ.

## ಕಾಂಗ್ರೆಸ್‌ನಿಂದ ಜನರನ್ನು ಎತ್ತಿ ಕಟ್ಟುವ ಕಾರ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಕಾಂಗ್ರೆಸ್ ಸರಕಾರ ಜಾಹೀರಾತಿನಲ್ಲಿ ಎಲ್ಲ ಸುಳ್ಳು ಮಾಹಿತಿಯನ್ನು ನೀಡುವ ಕೆಲಸವನ್ನು ಮಾಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಟೀಕಿಸಿದ್ದಾರೆ.



ಮಾಧ್ಯಮಗಳ ಜೊತೆ ಇಂದು ಮಾತನಾಡಿ, ಇದೇ ಜಾಹೀರಾತನ್ನು ಕಾಂಗ್ರೆಸ್ ಪಕ್ಷದ ವತಿಯಿಂದ ನೀಡಿದ್ದರೆ ನಮ್ಮ ವಿರೋಧ ಇರಲಿಲ್ಲ. ರಾಜ್ಯದ ತೆರಿಗೆದಾರರ ಹಣವನ್ನು ದುರುಪಯೋಗ ಮಾಡಿ ಕೇಂದ್ರ ಸರ್ಕಾರದ ವಿರುದ್ಧ ಜನರನ್ನು ಎತ್ತಿ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ಇದು ಅಕ್ಷಮ್ಯ ಅಪರಾಧ ಎಂದು ಕಿಡಿಕಾರಿದ್ದಾರೆ.

ಕಾಂಗ್ರೆಸ್ಸಿನವರಿಗೆ ಗಾಂಧಿಯವರ ಬಗ್ಗೆ ಗೌರವ ಇಲ್ಲ. ಇವತ್ತು ಕೊಟ್ಟಿರುವ ಜಾಹೀರಾತಿನ ಮೂಲಕ ಅಕ್ಷರಶಃ ಸಂಪೂರ್ಣ ತಪ್ಪು ಮಾಹಿತಿಯನ್ನು ರಾಜ್ಯದ ಜನತೆಗೆ ಕೊಡುವ ಕೆಲಸಕ್ಕೆ ಕಾಂಗ್ರೆಸ್ ಸರಕಾರ ಕೈಹಾಕಿದೆ. ಈ ಜಾಹೀರಾತಿನ ಮುಖೇನ ಕಾಂಗ್ರೆಸ್ ಸರಕಾರವು ರಾಜ್ಯದಲ್ಲಿ ಅರಾಜಕತೆ ಸೃಷ್ಟಿ ಮಾಡುವ ದುಸ್ಸಾಹಸಕ್ಕೆ ಕೈಹಾಕಿದೆ ಎಂದು ಖಂಡಿಸಿದ್ದಾರೆ.

## ಭಾರತ–ಕೆನಡಾ: ರಚನಾತ್ಮಕ ಸಹಕಾರ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ನಿರ್ಣಾಯಕ ಅಪರೂಪದ ಖನಿಜಗಳು, ಇವಿ ಚಲನಶೀಲತೆ, ಉತ್ಪಾದನೆ ಮತ್ತು ಸುಸ್ಥಿರ ಕೈಗಾರಿಕಾ ಅಭಿವೃದ್ಧಿ ಕ್ಷೇತ್ರಗಳಲ್ಲಿನ ಸಹಕಾರವನ್ನು ಬಲಪಡಿಸಲು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕೆನಡಾದ ನೈಸರ್ಗಿಕ ಸಂಪನ್ಮೂಲಗಳ ಖಾತೆ ಸಚಿವ ಟಿಮ್ ಹಾಡ್ಗಸನ್ ನೇತೃತ್ವದ



ಉನ್ನತ ಮಟ್ಟದ ನಿಯೋಗದೊಂದಿಗೆ ಮಹತ್ವದ ದ್ವಿಪಕ್ಷೀಯ ಮಾತುಕತೆ ನಡೆಸಿದ್ದಾರೆ.

ನವದೆಹಲಿಯ ಉದ್ಯೋಗ ಭವನದಲ್ಲಿ ನಡೆದ ದ್ವಿಪಕ್ಷೀಯ ಸಭೆಯಲ್ಲಿ ಉಭಯ ಸಚಿವರು, ಎರಡೂ ದೇಶಗಳ ನಡುವಿನ ಕೈಗಾರಿಕೆ ಕ್ಷೇತ್ರದಲ್ಲಿ ಹೊಂದಬಹುದಾದ ಸಗಕಾರಗಳ ಬಗ್ಗೆ ಪರಸ್ಪರ ಚರ್ಚಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯತಂತ್ರದ ಭಾಗವಾಗಿ ಹಲವಾರು ಕ್ಷೇತ್ರಗಳಲ್ಲಿ ಸುಸ್ಥಿರ ಬೆಳವಣಿಗೆ, ತಾಂತ್ರಿಕ ನಾಯಕತ್ವ ಮತ್ತು ಸ್ವಾವಲಂಬನೆಗೆ ಒತ್ತು ನೀಡುವ ಬಗ್ಗೆ ಕುಮಾರಸ್ವಾಮಿ ಅವರು ಕೆನಡಾ ಸಚಿವರೊಂದಿಗೆ ಮಾತುಕತೆ ನಡೆಸಿದ್ದಾರೆ. ಭಾರತದ ಉಕ್ಕು ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ದೀರ್ಘಕಾಲೀನ ಇಂಧನ ಭದ್ರತೆಯನ್ನು ಬಲಪಡಿಸಲು ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮ (ಎನ್‌ಎಂಡಿಸಿ) ಕೆನಡಾದಲ್ಲಿ ಕಲ್ಲಿದ್ದಲು ನಿಕ್ಷೇಪಗಳನ್ನು ಸಕ್ರಿಯವಾಗಿ ಅನ್ವೇಷಿಸುತ್ತಿದೆ ಎಂದಿದ್ದಾರೆ.

## ಕಳಕಪ್ಪ ಕಂಬಳಿಗೆ ರಾಜ್ಯಮಟ್ಟದ ಪ್ರಶಸ್ತಿ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆ ಕುಕನೂರು ಪಟ್ಟಣದ ಸಮಾಜಮುಖಿ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವ ಕಳಕಪ್ಪ ಕಂಬಳಿ ಅವರಿಗೆ ರಾಜ್ಯಮಟ್ಟದ ಕರ್ನಾಟಕ ಸಾಧಕ ಶ್ರೇಷ್ಠ ರತ್ನ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಗಿದೆ.

ಕರಾವಳಿಯ ಭಟ್ಕಳ ನಗರದ ನಾಗಯ್ಯ ಕ್ಷೇತ್ರ ಸಭಾಭವನದಲ್ಲಿ ಕರ್ನಾಟಕ ಕಾರ್ಯ ನಿರ್ವಾಹಕ ಪತ್ರಕರ್ತರ ದ್ವನಿ (ರಿ) ಬೆಂಗಳೂರು ಹಾಗೂ ಭಟ್ಕಳ ತಾಲೂಕ ಘಟಕದ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಪತ್ರಕರ್ತರ ವಿಚಾರ ಸಂಕಿರಣ ಮತ್ತು ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಜ್ಯದಲ್ಲಿ ಉತ್ತಮ ಸಮಾಜ ಸೇವೆ ಮಾಡಿದ ಮಹನೀರನ್ನು ಗುರುತಿಸಿ ಗೌರವಿಸುವ ದೃಷ್ಟಿಯಿಂದ ಕುಕನೂರು ಪಟ್ಟಣದ ಕಳಕಪ್ಪ ಕಂಬಳಿ ಅವರಿಗೆ ಅವರ ನಿರಂತರ ಸಮಾಜಮುಖಿ ಕಾರ್ಯ, ಶೋಷಿತರ ಸೇವೆ ಹಾಗೂ ಜನಪರ ಕಾಳಜಿಯನ್ನು ಗುರುತಿಸಿ ಕರ್ನಾಟಕ ಸಾಧಕ ಶ್ರೇಷ್ಠ ರತ್ನ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು.

## ಸರ್ಕಾರಕ್ಕೆ ಗುತ್ತಿಗೆದಾರರು ಸವಾಲ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾಮಗಾರಿಗಳ ಬಾಕಿ ಮೊತ್ತವನ್ನು ಮಾ.5ರೊಳಗೆ ಬಿಡುಗಡೆ ಮಾಡದಿದ್ದರೆ ರಾಜ್ಯಾದ್ಯಂತ ಕಾಮಗಾರಿಗಳನ್ನು ಸ್ಥಗಿತಗೊಳಿಸುವುದಾಗಿ ರಾಜ್ಯ ಗುತ್ತಿಗೆದಾರರ ಸಂಘ ಸರ್ಕಾರಕ್ಕೆ ಸವಾಲ್ ಹಾಕಿದೆ. ಒಂದು ವೇಳೆ ಬಾಕಿ ಇರುವ 38 ಸಾವಿರ ಕೋಟಿ ಬಾಕಿ ಬಿಲ್ ಮೊತ್ತವನ್ನು ನಿಗದಿತ ಸಮಯದೊಳಗೆ ಪಾವತಿ ಮಾಡದಿದ್ದರೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಪತ್ರ ಬರೆಯುವುದಾಗಿ ಗುತ್ತಿಗೆದಾರರ ಸಂಘ ಎಚ್ಚರಿಸಿದೆ. ಈ ಕುರಿತು ಸುದ್ದಿಗೋಷ್ಠಿ ನಡೆಸಿದ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ, ಕಳೆದ ಎರಡುವರೆ ವರ್ಷದಿಂದ ಸರ್ಕಾರ ಬಾಕಿ ಬಿಲ್ ಹಣ ಪಾವತಿಗೆ ಹಿಂದೇಟು ಹಾಕುತ್ತಿದೆ. ರಾಜ್ಯ ಗುತ್ತಿಗೆದಾರರಿಗೆ ಸುಮಾರು 38 ಸಾವಿರ ಕೋಟಿ ಬಾಕಿ ಹಣ ಉಳಿಸಿಕೊಂಡಿದೆ. ಇತ್ತ ಜಿಬಿಎ ವ್ಯಾಪ್ತಿಯ ಗುತ್ತಿಗೆದಾರರಿಗೆ ಸುಮಾರು 2.900 ಕೋಟಿ ಬಾಕಿ ಹಣ ಉಳಿಸಿಕೊಂಡಿದೆ. ಈಗಾಗಲೇ ಸರ್ಕಾರಕ್ಕೆ ಅನೇಕ ಬಾರಿ ಮನವಿ ಮಾಡಿದರೂ ಕೂಡ ಬಾಕಿ ಹಣ ಬಿಡುಗಡೆ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಿದ್ದರಾಮಯ್ಯನೇತೃತ್ವದ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದು ಎರಡೂವರೆ ವರ್ಷ ಕಳೆದರೂ ಕರ್ನಾಟಕ ರಾಜ್ಯ ಗುತ್ತಿಗೆದಾರರ ಹಲವಾರು ಸಮಸ್ಯೆಗಳು ಇದುವರೆಗೂ ಕಾರ್ಯರೂಪಕ್ಕೆ ಬಂದಿಲ್ಲ. ಕಲ್ಯಾಣ ಕರ್ನಾಟಕಕ್ಕೆ ಅನ್ಯಾಯ ಅಗಿದೆ. ಕಲ್ಯಾಣ ಕರ್ನಾಟಕದ ಶೇ.70 ಶಾಸಕರಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಅನ್ಯಾಯ ಮಾಡಿದ್ದಾರೆ. ಯಾವುದೇ ಟೆಂಡರ್ ಕರೆಯದೆ ದ್ರೋಹ ಬಗೆದಿದ್ದಾರೆ ಎಂದರು.

## ರಾಜ್ಯದಲ್ಲಿ ಅಧಿಕಾರಿಗಳಿಗೆ, ಗುತ್ತಿಗೆದಾರರಿಗೆ ಎಲ್ಲಿಲ್ಲದ ಕಿರುಕುಳ ಆಗುತ್ತಿದೆ: ಆರ್ ಅಶೋಕ್

# ಕರ್ನಾಟಕ ಮಾಧ್ಯಮ ಶ್ರೇಷ್ಠ ರತ್ನ ರಾಜ್ಯ ಪ್ರಶಸ್ತಿ ಪ್ರದಾನ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ಬೆಂಗಳೂರು ಹಾಗೂ ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕು ಘಟಕದಸಹಯೋಗದೊಂದಿಗೆಆಯೋಜಿಸಿದ್ದ ಒಂದು ದಿನದ ರಾಜ್ಯಮಟ್ಟದ ಪತ್ರಕರ್ತರ ವಿಚಾರ ಸಂಕಿರಣ ಮತ್ತು ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ಬೀದರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ ಶಾಂತ ಕುಮಾರ್ ಕೆ. ನಾಟೇಕರ್ ರವರಿಗೆ 2026ನೇ ಸಾಲಿನ 'ಕರ್ನಾಟಕ ಮಾಧ್ಯಮ ಶ್ರೇಷ್ಠ ರತ್ನ ರಾಜ್ಯ ಪ್ರಶಸ್ತಿ'ಯನ್ನು ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಪರಮಪೂಜ್ಯ ಶ್ರೀಶ್ರೀಶ್ರೀ ಮಾರುತಿ ಗುರುಜಿರವರು ಧರ್ಮಾಧಿಕಾರಿಗಳು, ಶ್ರೀ ವಿಶ್ವವೀರಾಂಜನೇಯ ಮಹಾಸಂಸ್ಥಾನಂ, ಹೇಮಪುರ ಮಹಾಪೀಠಮ್, ಶ್ರೀಕ್ಷೇತ್ರ ಬಂಗಾರಮಕ್ಕಿ, ಹೊನ್ನಾವರ, ಕರ್ನಾಟಕ ಸರ್ಕಾರದ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್. ವೈದ್ಯ, ಕಾ.ನಿ.ಪ.ಧ್ವನಿ ಸಂಘಟನೆಯ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ, ಮಾಜಿ ಸಚಿವ ಶ್ರೀ ಶಿವಾನಂದ ನಾಯ್ಕ, ಮಾಜಿ ಶಾಸಕರು, ಭಟ್ಕಳ ತಾಲೂಕು ಘಟಕ ಅಧ್ಯಕ್ಷ ಶಂಕರ ನಾಯ್ಕ, ಪ್ರಮುಖ ಜನಪ್ರತಿನಿಧಿಗಳು, ಹಿರಿಯ ಪತ್ರಕರ್ತರಾದ ಜಗಳೂರು ಲಕ್ಷ್ಮಣರಾವ್, ಗಂಗಾಧರ್ ಮೊದಲಿಯಾರ್ ಹಾಗೂ ಸಂಘದ ಪದಾಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

# ಎಸ್ ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರ ಆಯ್ಕೆ

**ಮಲ್ಲಮ್ಮ ನುಡಿ ವಾರ್ತೆ ಬೀದರ್**



ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಖಆಒಅ) ಎಂಬುದು ಸರ್ಕಾರಿ ಶಾಲೆಗಳ ಸುಧಾರಣೆ, ಹಾಗೂ ಶಾಲೆಯ ಭೌತಿಕ ಮೂಲಸೌಕರ್ಯ, ಶೈಕ್ಷಣಿಕ ಗುಣಮಟ್ಟ, ಶಿಕ್ಷಕರ ಹಾಜರಾತಿ ಮತ್ತು ಬಜೆಟ್ ನಿರ್ವಹಣೆಯ ಜವಾಬ್ದಾರಿಯನ್ನು ಅದಕ್ಕೆ ಎಸ್ ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರು ಸೇರಿ 18 ಜನರ ಸಮಿತಿ ಹೊಂದಿರುತ್ತದೆ,

ನೂತನವಾಗಿ ಅಧ್ಯಕ್ಷರಾಗಿ ಬಸವರಾಜ ತಂದೆ ಗುಂಡಪ್ಪಾ, ಹಾಗೂ ಉಪಾಧ್ಯಕ್ಷರಾಗಿ ಮಂಗಲಾ ಓಂಕಾರ ಅವರನ್ನು ಎಲ್ಲಾ18 ಸದಸ್ಯರ ಸಮಕ್ಷೇಮಸಂತೆ ಆಯ್ಕೆ ಮಾಡಲಾಗಿದೆ,ಸದಸ್ಯರಾದ ಪ್ರಶಾಂತ, ಈರಪ್ಪಝುರೆಪ್ಪಾ,ವಿನೋದ್ ದೇವಜಿ, ಶಿವಕುಮಾರ ಶಿವರಾಜ್, ಎಂ ಡಿ ಚಾಂದಪಾಶ,ನಂದುಕುಮಾರನಾಗಶೆಟ್ಟಿ ಮಂಡಗಿ, ಪ್ರಕಾಶ ರಾಚಪ್ಪ, ಸಂಗಪ್ಪಾ ನರಸಪ್ಪಾ, ಸುನೀತಾ ಸಂತೋಷ್, ಆಶಾ ಅರ್ಜುನ್, ಸುಧಾರಾಣಿ ವಿಜಯಕುಮಾರ,ಮಂಜುಳಾಭಾನುದಾಸ್, ಸವಿತಾ ಶಿವಾನಂದ,ರೇಣುಕಾ ಗಣೇಶ,ಫರಾಹಾನ ಬೇಗಂ, ಸಂಗಮಾ ಕವಿರಾಜ್,ಸದಸ್ಯರಾಗಿ ಆಯ್ಕೆ ಯಾಗಿದ್ದಾರೆ, ಪದ ನಿಮಿತ್ಯ ಸದಸ್ಯರುಗಳಾದ ಮುಖ್ಯಗುರುಗಳಾದ ಅನ್ನಪೂರ್ಣ, ಜಗದೇವಿ ಅಂಗನವಾಡಿ ಕಾರ್ಯಕರ್ತೆ, ಸುಮಂಗಲಾ ಆರೋಗ್ಯ ಕಾರ್ಯಕರ್ತ, ಶ್ರೀನಿವಾಸ ಈಶ್ವರ ಸ್ಥಳೀಯ ಜನಪ್ರತಿನಿಧಿ ,ಸುರೇಶ್ ದೈಹಿಕ ಶಿಕ್ಷಕರು, ಸಿದ್ದಾರ್ಥ ನಾಗಪ್ಪ ವಿದ್ಯಾರ್ಥಿ, ಅನೇಕ ಪೋಷಕರು ಗ್ರಾಮಸ್ಥರು ಭಾಗವಹಿಸಿದರು,

# ನಿಜಶರಣ ಅಂಬಿಗರ ಚೌಡಯ್ಯಾ ಜಯಂತಿ, ಜಾತ್ರಾಮಹೋತ್ಸವ ಸಂಪನ್ನ



• **ಮಲ್ಲಮ್ಮ ನುಡಿ ವಾರ್ತೆ ,ಹುಮನಾಬಾದ್ :**

ತಾಲ್ಲೂಕಿನಹುಡಗಿ(ರಾಮನಗರ)ನಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯಾ ನವರ ಜಯಂತಿ ಹಾಗೂ ಜಾತ್ರಾ ಮಹೋತ್ಸವ ಈಚೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಸಂಪನ್ನಗೊಂಡಿತ್ತು. ಜಾತ್ರಾ ಮಹೋತ್ಸವದ ಅಂಗವಾಗಿ ಈಚೆಗೆ ನಡೆದ ಧರ್ಮ ಸಭೆಯನ್ನು ಶಾಸಕ ಡಾ.ಸಿದ್ದಲಿಂಗಪ್ಪಾ ಪಾಟೀಲ ಅವರು ಉದ್ಘಾಟಿಸಿ ಮಾತನಾಡಿ, ಎಲ್ಲರು ಕೈಜೋಡಿಸಿದಾಗ ಮಾತ್ರ ಅಭಿವೃದ್ಧಿ ಮತ್ತು ಸಮಾಜ ಕಟ್ಟಲು ಸಾಧ್ಯವಾಗುತ್ತದೆ, ಕೊಲಿ ಸಮಾಜದ ಸಮುದಾಯ ಭವನಕ್ಕೆ 1 ಕೋಟಿ ಅನುದಾನ ಕೊಟ್ಟಿದ್ದು, ಶೀಘ್ರವೆ ಕೆಲಸ ಪ್ರಾರಂಭವಾಗುತ್ತದೆ, ಕೊಳಿವಾಡಾ, ಸಮುದಾಯ ಕಲ್ಯಾಣ ಮಂಟಪ 15 ಲಕ್ಷ, ಹಳ್ಳಿಖೇಡ (ವಾಡಿ) ಸಮುದಾಯ ಭವನದ ಮೇಲ್ಛಾವಣಿ, ಸೇರಿದಂತೆ ಸಮುದಾಯದ ವಿವಿಧ ಅಭಿವೃದ್ಧಿ, ಕಾಮಗಾರಿಗೆ ಹೆಚ್ಚಿನ ಅನುದಾನ ವದಗಿಸಿದ್ದೇನೆ, ಎಂದರು. ಅಧಿಕಾರಿ ಶಾಶ್ವತವಲ್ಲ ಅಧಿಕಾರಿ ಇರುವವರೆಗೂ ಸಮಾಜ ಮುಖಿ ಕಾರ್ಯಗಳು ಮಾಡಬೇಕು, ಎಂದ ಅವರು ಕೊಲಿ ಸಮಾಜದ ಜನ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜತೆಗೆ ಉತ್ತಮ ಸಂಸ್ಕ್ರರ ಕೊಡಬೇಕು ಎಂದರು.

ಹುಡಗಿ (ರಾಮನಗರ) ವಾಲ್ಮೀಕಿ ಮಂದಿರದ ಪೂಜ್ಯ ರಾಜಶೇಖರ್ ಗುರುಜಿ ಅವರು ಸಾನಿಧ್ಯ ವಹಿಸಿ ಮಾತನಾಡಿ, ಸಮಾಜದ ಜನ ಧರ್ಮದ ದಾರಿಯಲ್ಲಿ ನಡೆದು, ಪುಣ್ಯದ ಕಾರ್ಯಗಳನ್ನು ಮಾಡುವ ಗುಣಧರ್ಮ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಬಸವಕಲ್ಯಾಣ ರತ್ನಾಕರ ಶ್ರೀಗಳು, ಹುಡಗಿ ಮಾತೆ ಮಾಣಿಕೇಶ್ವರಿ ಆಶ್ರಮದ ಶಾಂತಮ್ಮ ತಾಯಿ, ಬಬಲೇಶ್ವರ ನಿಜಲಿಂಗಯ್ಯಾ ಶಾಸ್ತ್ರಿ,

ಟೋಕ್ರಿ ಕೊಲಿ ಸಮಾಜದ ಜಿಲ್ಲಾಧ್ಯಕ್ಷ ಜಗನ್ನಾಥ ಜಮಾದಾರ, ಗಂಗಾಮತ ಟೋಕ್ರಿ ಕೊಲಿ ಸಮಾಜ ಸಂಘದ ತಾಲ್ಲೂಕು ಅಧ್ಯಕ್ಷ ನಾಗಭೂಷಣ ಸಂಗಮ ಅಖೀಲ

ಭಾರತ ಟೋಕ್ರಿ ಕೊಲಿ ಸಮಾಜದ ಜಿಲ್ಲಾಧ್ಯಕ್ಷ ಅಶೋಕ ಹಣಕುಣಿ ಅವರು ಮಾತನಾಡಿದರು. ಉಮರ್ಗಾ ಖ್ಯಾತ ತಬಲಾ ಕಲಾವಿದ ಶಿವಕುಮಾರ ಹಲಕರ್ಟಿ, ಮಳಸಾಪುರ ರಾಜಕುಮಾರ ಉಪ್ಪಾರ. ರಾಜಕುಮಾರ ಚನ್ನೂರ ಸಂಗಡಿಗರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಪ್ರಮುಖರಾದ ಅರುಣಕುಮಾರ ಬಾವಗಿ, ಅಮಿತ್ ಚಿಂಚೋಳಿಕರ್, ಮಾರುತಿ ಸರ್, ಶಣ್ಮುಖಪ್ಪಾ ಶೇಖಾಪುರ, ವೀರಣ್ಣಾ ಪದ್ಮಾ, ಚನ್ನವೀರ ಜಮಾದಾರ್, ನಾಗಪ್ಪಾ ಚೌಳೆಕರ್, ಇದ್ದರು

# ಪ್ರತಿಯೊಬ್ಬರು ಸಂಚಾರ ನಿಯಮಗಳು ಪಾಲಿಸಬೇಕು

## ಜಾಫರ್ ಸಾದಿಕ್




• **ಮಲ್ಲಮ್ಮ ನುಡಿ ವಾರ್ತೆ,ಚಿಟಗುಪ್ಪ:**

ಪ್ರತಿಯೊಬ್ಬರು ಸಂಚಾರ ನಿಯಮಗಳನ್ನು ಪಾಲಿಸುವುದರಿಂದ ನಾವು ರಸ್ತೆ ಅಪಘಾತಗಳನ್ನು ತಪ್ಪಿಸಬಹುದು, ಸುರಕ್ಷಿತ ಪ್ರಯಾಣ ಎಲ್ಲಾ ವಾಹನ ಚಾಲಕರ ಗುರಿಯಾಗಿರಬೇಕೆಂದು ಭಾಲ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಇಲಾಖೆಯ ಸಹಾಯಕ ಸಾರಿಗೆ ಅಧಿಕಾರಿ ಮಹಮ್ಮದ್ ಜಾಫರ್ ಸಾದಿಕ್ ಹೇಳಿದರು. ಗುರುವಾರ ಪಟ್ಟಣದ ಜ್ಞಾನ ಗಂಗಾ ಪ್ರೌಢಯಲ್ಲಿ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಯೂ ಸಮಾಜದ ಆಸ್ತಿ. ನಿಮ್ಮ ಶಿಕ್ಷಣದ ಫಲ ಸಮುದಾಯಕ್ಕೆ ದೊರಕಬೇಕಾದರೆ ನಿಮ್ಮೆಲ್ಲರ ಜೀವಗಳು ಸುರಕ್ಷಿತವಾಗಿರಬೇಕು. ಪ್ರತಿಯೊಬ್ಬ ವಾಹನ ಚಾಲಕರೂ ತಮ್ಮ ಸುರಕ್ಷತೆಯ ಜೊತೆಗೆ ಇತರರ ಸುರಕ್ಷತೆಯ ಕಡೆಗೂ ಎಚ್ಚರ ವಹಿಸಬೇಕು. ಹುಟ್ಟಿದ ಪ್ರತಿಯೊಂದು ಜೀವಿಯೂ ಅಮೂಲ್ಯ. ಪ್ರತಿಯೊಬ್ಬರಿಗೂ ಒಂದೊಂದು ಕುಟುಂಬವಿದೆ ಎನ್ನುವ ಅರಿವಿರಬೇಕೆಂದರು. ಸಂಚಾರ ನಿಯಮಗಳ ಪಾಲನೆಯಿಂದ ಎಲ್ಲರೂ ಸುರಕ್ಷಿತವಾಗಿ ನಮ್ಮ ನಮ್ಮ ಮನೆಗಳನ್ನು ತಲುಪಬಹುದು ಡ್ರೈವಿಂಗ್ ಲೈಸೆನ್ಸ್ ಇಲ್ಲದೆ ಯಾವುದೇ ಕಾರಣಕ್ಕೂ ವಾಹನ ಚಲಾಯಿಸಬೇಡಿ. ಬೈಕ್ ಚಲಾಯಿಸುವ ವೇಳೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ. ತ್ರಿಬ್ಬಲ್ ರೈಡಿಂಗ್ ಮಾಡಬೇಡಿ. ನೀವು ನಿಮ್ಮ ವಾಹನವೇರುವ ಮುನ್ನ ಅದು ಸುಸ್ಥಿತಿಯಲ್ಲಿ ಇರುವುದನ್ನು ಖಚಿತ ಪಡಿಸಿಕೊಳ್ಳಿ. ವಾಹನಗಳಿಗೆ ಕಡ್ಡಾಯ ವಿಮೆ ಮಾಡಿಸಬೇಕು, ಕಾರು ಚಾಲನೆಯ ವೇಳೆ ಸೀಟ್ ಬೆಲ್ಟ್ ಬಳಸಬೇಕೆಂದು ಹೇಳಿದರು. ಎಎಸ್ಐ ಭೀಮರಾವ ರಾಠೋಡ ಮಾತನಾಡಿ, 18 ವರ್ಷದೊಳಗಿನ ಮಕ್ಕಳು ವಾಹನ ಚಲಾಯಿಸಿದರೆ ಅವರ ಪೋಷಕರಿಗೆ– 25 ಸಾವಿರ ದಂಡ ವಿಧಿಸಲಾಗುತ್ತದೆ. ಒಂದು ವೇಳೆ ಅಪಘಾತದಲ್ಲಿ ಕೂಲಿ ಕಾರ್ಮಿಕರು ಮೃತಪಟ್ಟರೆ ಮತ್ತು ಗಾಯಗೊಂಡರೆ ಕಾನೂನುಬದ್ಧವಾಗಿ –10 ಲಕ್ಷಕ್ಕೂ ಹೆಚ್ಚು ಪರಿಹಾರ ಸಿಗುವ ಅವಕಾಶವಿದ್ದರೂ,

ನಿಯಮ ಪಾಲನೆ ಮಾಡಿ ಜೀವ ಉಳಿಸಲು ಮೊದಲ ಆದ್ಯತೆ ನೀಡಬೇಕು' ಎಂದರು. ಶಾಲೆಯ ಆಡಳಿತ ಮಂಡಳಿಯ ಅಧ್ಯಕ್ಷ ಸುರೇಶ ಚೌದರಿ ಮಾತನಾಡಿ, ಮನುಷ್ಯನ ಜೀವ ಅತ್ಯಾಮೂಲ್ಯವಾದದ್ದು, ಅಜೀವವನ್ನು ಯಾವುದೇ ರೀತಿಯ ಅಪಘಾತಕ್ಕೆ ಒಳಗಾಗದೇ ನಿಮ್ಮ ಜೀವವನ್ನು ಕೊನೆವರೆಗೂ ನಿಮ್ಮ ಕುಟುಂಬದ ಜೊತೆಗೆ ನಡೆಸಲು ಕಾನೂನು ನಿಯಮಗಳ ಪಾಲನೆ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ಪತ್ರಕರ್ತ ರಾಜಕುಮಾರ್ ಆರ್. ಹಡಪದ, ಮಹಾದೇವ ಹಿರಸ್ಕರ್, ಶಾರದಾ ಚೌದರಿ, ಮಹಮ್ಮದ್ ಖಾಲೆದ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಿಕ್ಷಕಿ ಸುಜಾತಾ ನಿರೂಪಿಸಿ ವಂದಿಸಿದರು.

# ಸ್ಪರ್ಶ ಕುಷ್ಟರೊಗ ಕಾರ್ಯಕ್ರಮದ ಜಾಗೃತಿ ಅಭಿಯಾನ

## ತಹಸೀಲ್ದಾರ್ ದೇಸಾಯಿ




ಸಿಂಧನೂರು

ಶತ ಶತಮಾನಗಳಿಂದ ಇಂದಿಗೂ ಸಮುದಾಯದಲ್ಲಿರುವ ಕುಷ್ಠರೋಗವನ್ನು ನಿರ್ಮೂಲನೆ ಮಾಡಲು ದೇಹದ ಮೇಲಿನ ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ತಾಮ್ರ ಬಣ್ಣದ ಮಚ್ಚೆಗಳು ಹಾಗೂ ನರ ಮತ್ತು ಚರ್ಮದ ಕಾಯಿಲೆಯಾಗಿದ್ದು ಇದನ್ನು ಮಾತ್ರೆಗಳ ಮೂಲಕ ಸಂಪೂರ್ಣ ಗುಣಪಡಿಸುವುದು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತ ಚಿಕಿತ್ಸೆ ಲಭ್ಯವಿರುತ್ತದೆ ಹೆಚ್ಚಿನ ಜಾಗೃತಿಯನ್ನು ಸಮುದಾಯಕ್ಕೆ ತಲುಪುವಂತೆ ಹೆಚ್ಚು ಹೆಚ್ಚು ಪ್ರಚೂರು ಪಡಿಸಲು ತಾಲೂಕು ದಂಡಾಧಿಕಾರಿಗಳು ತಿಳಿಸಿದರು.

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕುಷ್ಟರೋಗ ನಿರ್ಮೂಲನ ಕಾರ್ಯಕ್ರಮದಡಿ ಜನವರಿ 30 ರಿಂದ ಫೆಬ್ರುವರಿ 13 ರವರೆಗೆ ಕಾರ್ಯಕ್ರಮ ನಡೆಯಲಿದ್ದು ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನದ ಕುರಿತು ತಾಲೂಕು ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತ ಶಾಪ ದಿಂದ ಬರುತ್ತದೆ ಎಂಬ ತಪ್ಪು ನಂಬಿಕೆಯನ್ನು ಹೋಗಲಾಡಿಸಿ ಇದು ಮೈಕ್ರೋ ಬ್ಯಾಕ್ಟೀರಿಯಾ ಲೆಪ್ರೆ ಎಂಬ ಸೂಕ್ಷ್ಮಾಣು ಜೀವಿಯಿಂದ ಬರುವ ಹಾಗೂ ಕಾಯಿಲೆ ಹೊಂದಿದ ವ್ಯಕ್ತಿ ಕೆಮ್ಮಿದಾಗ ಸೀನಿದಾಗ ಬ್ಯಾಕ್ಟೀರಿಯಾವು ಉಸಿರಿನ ಮೂಲಕ ಜೊತೆಯಾಗಿರುವವರಿಗೆ ದೀರ್ಘಾವಧಿಯಲ್ಲಿ ಬರುವ ಕಾಯಿಲೆಯಾಗಿದೆ.

ಸ್ಪರ್ಶ ವಿಲ್ಲದ ಮಚ್ಚೆಗಳು ಕಂಡು ಬಂದರೆ ತಕ್ಷಣವೇ ವೈದ್ಯರ ಬಳಿ ಪರೀಕ್ಷೆ ಮಾಡಿಸಿ ಖಚಿತಪಡಿಸಿಕೊಳ್ಳಿ ದೇಹದ ಮೇಲಿನ ಮಚ್ಚೆಗಳ ಆಧಾರದ ಮೇಲೆ ಆರು ತಿಂಗಳಿನಿಂದ ಒಂದು ವರ್ಷ ಉಚಿತವಾದ ಚಿಕಿತ್ಸೆಯೊಂದಿಗೆ ಸಂಪೂರ್ಣ ವಾಸಿಯಾಗುತ್ತದೆ ಎಂಬುದನ್ನು ಮನವರಿಕೆ ಮಾಡಿ ಎಂದರು ನಂತರ ಬೇರೆ ಬೇರೆ ಇಲಾಖೆಯ ಸಹಯೋಗದಲ್ಲಿ ಗ್ರಾಮಗಳಲ್ಲಿ, ಶಾಲೆಗಳಲ್ಲಿ ಮಕ್ಕಳಿಗೆ, ಗ್ರಾಮ ಪಂಚಾಯತ್ ಸದಸ್ಯರಿಗೆ ಸ್ತ್ರೀಶಕ್ತಿ ಸಂಘ ಯುವಕ ಯುವತಿ ಸಂಘ ವಿವಿಧ ಸಂಸ್ಥೆಗಳ ಸದಸ್ಯರಿಗೆ ಹೆಚ್ಚಿನ ಜಾಗೃತಿ ನೀಡಿ ಎಂದ ತಿಸಿದರು. ಭಿತ್ತಿಪತ್ರ(ಪೋಸ್ಟರ್ )ಗಳನ್ನು ಬಿಡುಗಡೆಗೊಳಿಸಿ ಅತಿ ಹೆಚ್ಚು ಪ್ರಚಾರ ಮಾಡಿ ಎಂದು ತಿಳಿಸಿದರು.

ಈ ರೋಗವು ಬಡವರು ಶ್ರೀಮಂತರು ಗಂಡು ಹೆಣ್ಣು ಎಂಬ ಭೇದ ಭಾವವಿಲ್ಲದೆ ಯಾರಿಗಾದರೂ ಬರಬಹುದು ರೋಗವನ್ನು ಪ್ರಾರಂಭದ ಲಕ್ಷಣಗಳಿದ್ದಾಗ ಕಂಡುಹಿಡಿದು ಚಿಕಿತ್ಸೆಗೆ ಒಳಪಡಿಸಿದರೆ ಅಂಗವಿಕಲತೆ ಆಗುವುದಿಲ್ಲ ಗುಣಮುಖ ಹೊಂದಿದ ಅಂಗವಿಕಲ ಕುಷ್ಟರೋಗಗಳನ್ನು ಆರ್‌ಸಿಎಸ್(ಖಅಖ) ಚಿಕಿತ್ಸೆಯಿಂದ ಸರಿಪಡಿಸಲಾಗುವುದು ಕುಷ್ಟರೋಗವನ್ನು ಬಹು ಔಷಧೀಯ ಚಿಕಿತ್ಸೆಯು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ತೆರೆಯುತ್ತದೆ ಕ್ರಮಬದ್ಧವಾದ ಚಿಕಿತ್ಸೆ ಮತ್ತು ಸ್ವಯಂ ಆರೈಕೆಯಿಂದ ಅಂಗವಿಕಲತೆಯನ್ನು ತಡೆಗಟ್ಟಬಹುದು ಕುಷ್ಟರೋಗ ನಿರ್ಮೂಲನೆಯಲ್ಲಿ ಸಮಾಜ ಪಾತ್ರ ಮುಖ್ಯವಾಗಿರುತ್ತದೆ ,ಎಂದು ಈ ಕುಷ್ಟರೋಗಕ್ಕೆ ತುತ್ತಾದ ವ್ಯಕ್ತಿ ಸಮಾಜಕ್ಕ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಈ ಕಾರ್ಯಕ್ರಮದಲ್ಲಿ ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು ಚಂದ್ರಶೇಖರ್ ಅಧಿಕಾರಿಗಳು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸಿಂಧನೂರ್, ಲಿಂಗನಗೌಡರು ಶಿಶು ಅಭಿವೃದ್ಧಿ ಅಧಿಕಾರಿಗಳು ಸಿಂಧನೂರ್, ನಗರ ಸಭೆ ಪೌರಾಯುಕ್ತರು ಪಾಂಡುರಂಗ ಇಟಗಿ, ಬಸಲಿಂಗಪ್ಪ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಅಮರ ಗುಂಡಪ್ಪ ಂಆ, ಐ ಆ ಅಂಗಡಿ ಸಮಾಜ ಕಲ್ಯಾಣ್ ಅಧಿಕಾರಿಗಳು ಸಿಂಧನೂರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಶೂ ಮತ್ತು ಸಾಕ್ಸ್ ವಿತರಣೆ



• **ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:**

ತಾಲೂಕಿನ ಡಿಗ್ಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ವಿದ್ಯಾರ್ಥಿಗಳಿಗೆ ಉಚಿತ ಶೂ ಹಾಗೂ ಸಾಕ್ಸ್ ವಿತರಣಾ ಸಮಾರಂಭ ಯಶಸ್ವಿಯಾಗಿ ಜರುಗಿತು.

ಕಾರ್ಯಕ್ರಮ ಉದ್ಘಾಟಕ್ಕಾರಾಗಿ ಕಲ್ಯಾಣ ಕರ್ನಾಟಕ ರತ್ನ ಪ್ರಶಸ್ತಿ ಸ್ವಿಕೃತ ಪ್ರೊ. ಎಸ್. ಎಸ್. ರಾಂಪುರೆ ಮಾತನಾಡಿ, ಇಂದಿನ ಯುಗದಲ್ಲಿ ಮಕ್ಕಳಿಗೆ ಕೇವಲ ಶಿಕ್ಷಣವಷ್ಟೇ ಅಲ್ಲದೆ, ಅವರ ಉತ್ತಮ ನಡಿಗೆ ಮತ್ತು ಆರೋಗ್ಯಕ್ಕೆ ಪೂರಕವಾದ ಸೌಲಭ್ಯಗಳು ಅಗತ್ಯಗಳು ಪ್ರಮುಖ ಪಾತ್ರ ವಹಿಸುತ್ತವೆ. ಸರಕಾರದ ಅನೇಕ ಯೋಜನೆಯಲ್ಲಿ ಉಚಿತ ಶೂ ಹಾಗೂ ಸಾಕ್ಸ್ ವಿತರಣೆ ಒಂದಾಗಿದೆ ಎಂದು ಹೇಳಿದರು. ನಾನು ಇದೆ ಶಾಲೆಯಲ್ಲಿ ಅಂದಿನ ಕಷ್ಟ ದಿನಮಾನಗಳಲ್ಲಿ ಕಲಿತು ಉಪನ್ಯಾಸಕರಾಗಿ, ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದಾನೆ, ಬಡ ಮಕ್ಕಳು ಶಿಕ್ಷಣಕ್ಕಾಗಿ ಸಹಾಯ ಮಾಡುತ್ತಿದ್ದು, ಶಿಕ್ಷಣಕ್ಕೆ ಯಾವುದಾದರು ಮಕ್ಕಳಿಗೆ ಹಣದ ತೊಂದರೆ ಆಗುತ್ತಿದ್ದಾರೆ ಅಂತಹ ಮಕ್ಕಳನ್ನು ನನ್ನ ಗಮನಕ್ಕೆ ತನ್ನಿ ಅವರಿಗೆ ಸಹಾಯ ಹಸ್ತ ನೀಡುತ್ತೇನೆ ಎಂದು ಶಾಲಾ ಆಡಳಿತ ಮಂಡಳಿಯರಿಗೆ ತಿಳಿಸಿದ್ದರು.

ಸರಕಾರ ಪ್ರತಿನಿಧಿಯಾಗಿ ಸ್ಥಳೀಯ ಸಿ.ಆರ್.ಪಿ. ಶಿವಕುಮಾರ ಹೊನ್ನಾಳೆ ಮಾತನಾಡಿ, ತಾಲೂಕಿನ ಪ್ರಮುಖ ಶಾಲೆಯಲ್ಲಿ ಡಿಗ್ಗಿ ಶಾಲೆ ಒಂದಾಗಿದು, ಮಕ್ಕಳು ಸರಕಾರದಿಂದ ಬರುವ ಎಲ್ಲಾ ಸೌಲಭ್ಯ ಲಾಭ ತೆಗೆದುಕೊಂಡು ಉತ್ತಮ ಸಾಧನೆ ಮಾಡಬೇಕೆಂದು ತಿಳಿಸಿದ್ದರು ಮತ್ತು ಮುಂಬರುವ ದಿನಗಳಲ್ಲಿ ಶಾಲೆಯ ಸರ್ವೋತೋಮುಖ ಅಭಿವೃದ್ಧಿ ಕಾರ್ಯಕ್ಕೆ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಮುಖ್ಯ ಅತಿಥಿ ಮಡಿವಾಳಪ್ಪ ಮುರ್ಕೆ ಮಾತನಾಡಿ, ಶಿಕ್ಷಣಕ್ಕೆ ಪ್ರೋತ್ಸಾಹಕ್ಕಾಗಿ ಸರಕಾರ ಹತ್ತು ಹಲವು ಯೋಜನೆ ನೀಡುತ್ತಿದೆ. ಸರಕಾರಿ ಶಾಲೆಯಲ್ಲಿ ನೂರಿತ ಶಿಕ್ಷಕರಿಂದ ಶಿಕ್ಷಣ ನೀಡಲಾಗುವುದು, ಮಕ್ಕಳು ಇದರ ಸದುಪಯೋಗ ಪಡೆದು ಕೊಳ್ಳಬೇಕು ಎಂದು ತಿಳಿಸಿದರು.

ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಸಂತೋಷ ಬನವಾಸೆ ಮಾತನಾಡಿದರು. ಕಲ್ಯಾಣ ಕರ್ನಾಟಕ ರತ್ನ ಪ್ರಶಸ್ತಿಗೆ ಪಾತ್ರರಾದ ಪ್ರೊ. ಎಸ್. ಎಸ್. ರಾಂಪುರೆ ಅವರಿಗೆ ಆಡಳಿತ ಮಂಡಳಿ ವತಿಯಿಂದ ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸೂರ್ಯಕಾಂತ ಬಿರಾದಾರ, ಶೂ ಕಂಪನಿ ಪ್ರತಿನಿಧಿ ರಾಜಕುಮಾರ ಕಾಂಬ್ಳೆ, ಮುಖ್ಯಗುರು ಸಂತೋಷ ಬಿರಾದಾರ, ವಿಜಯಲಕ್ಷ್ಮಿ ಪಾಟೀಲ, ಸತೀಶ ಕುಲಾಲ, ಮಂಗಲಾ ಸೇನ, ಪಾಲಕರದ ದಯಾನಂದ, ಪಿಂಟು, ಪತ್ರಕರ್ತ ಪರಮೇಶ ರಾಂಪುರೆ ಸೇರಿದಂತೆ ಶಾಲೆ ಮಕ್ಕಳು ಉಪಸ್ಥಿತರಿದ್ದರು.



ಕಮಲನಗರ:ಮಲ್ಲಮ್ಮ ನುಡಿ ದಿನ ಪತ್ರಿಕೆ ಹೊರ ತಂದ ವಿಶಿಷ್ಟ ಕ್ಯಾಲೆಂಡರರನ್ನು ಕಮಲನಗರ ಶ್ರೀ ಗುರಪ್ಪಾ ಟೊಣ್ಣೆ ಪ್ರಾಥಮಿಕ ಶಾಲೆ ಹಾಗೂ ಚನ್ನಬಸವ ಪಟ್ಟದ್ದೇವರ ಪ್ರೌಢಶಾಲೆ ಮತ್ತು ಗುರು ಕಾರುಣ್ಯ ಪಬ್ಲಿಕ ಶಾಲೆ ಸಂಯುಕ್ತ ಶಾಲೆಯ ಆಡಳಿತಾಧಿಕಾರಿ ಶ್ರೀ ಚನ್ನಬಸವ ಘಾಳೆ ಸರ್ ಅವರಿಗೆ ಕ್ಯಾಲೆಂಡರ್ ನೀಡಿ ಹೊಸ ವರ್ಷ 2026ರ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಕಮಲನಗರ ತಾಲೂಕ ವರದಿಗಾರ ಪರಮೇಶ ರಾಂಪುರೆ ಮತ್ತು ಕಮಲನಗರ ತಾಲೂಕ 'ಕರ್ನಾಟಕ ಚುಟುಕ ಸಾಹಿತ್ಯ' ಅಧ್ಯಕ್ಷರಾದ ಸಂಗಮೇಶ್ವರ ಮುರ್ಕೆ ಅವರು ಇದ್ದರು.

# ಕನ್ನಡ ಕಾವ್ಯ ಮತ್ತು ಕಾವ್ಯ ಮೀಮಾಂಸೆಯ ಕ್ಷೇತ್ರಕ್ಕೆ ಜಿ.ಎಸ್.ಎಸ್ ಕೊಡುಗೆ ಅಪಾರ

## ಡಾ.ರಮೇಶ ಮೂಲಗೆ




• **ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:**

ಕನ್ನಡ ಕಾವ್ಯ ಮತ್ತು ಕಾವ್ಯ ಮೀಮಾಂಸೆಯ ಕ್ಷೇತ್ರಕ್ಕೆ ಜಿ.ಎಸ್.ಎಸ್ ಕೊಡುಗೆ ಅಪಾರ. ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯಮೀಮಾಂಸೆ ಕುರಿತ ಅವರ ದೃಷ್ಟಿಕೋನ ಶ್ರೇಷ್ಠಮಟ್ಟದ್ದು ಎಂದು ಮಹಾರಾಷ್ಟ್ರದ ಉದಯಗಿರಿ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ.ರಮೇಶ ಮೂಲಗೆ ಹೇಳಿದರು.

ಪಟ್ಟಣದ ಡಾ.ಚನ್ನಬಸವಪಟ್ಟದ್ದೇವರು ಪ್ರೌಢ ಶಾಲೆಯ ಸಭಾಂಗಣದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಚಕೋರ ಸಾಹಿತ್ಯ ವಿಚಾರ ವೇದಿಕೆ ಸಹಯೋಗದಲ್ಲಿ ಗುರುವಾರ ಜಿ.ಎಸ್.ಶಿವರುದ್ರಪ್ಪ ಅವರ ಕನ್ನಡ ಸಾಹಿತ್ಯದಲ್ಲಿ ಸೌಂದರ್ಯ ಮೀಮಾಂಸೆ ಕುರಿತು ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವೋದಯದ ಸಂದರ್ಭದಲ್ಲಿ ರಮ್ಯ ಕವಿತೆಗಳ ಮೂಲಕ ಕಾವ್ಯಯಾನ ಆರಂಭಿಸಿದ ಅವರು ನಂತರ ತಮ್ಮದೇ ಆದ ಭಿನ್ನ ಕಾವ್ಯಮಾರ್ಗವನ್ನು ರೂಪಿಸಿಕೊಂಡರು. ಎಪ್ಪತ್ತರ ದಶಕದಲ್ಲಿ ಜಿ.ಎಸ್.ಎಸ್ ಹೋರಾಟಗಾರರಿಗೆ ಸ್ಫೂರ್ತಿಯಾಗಿದ್ದರು. ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ಹೋರಾಟದ ಮಾರ್ಗವನ್ನು ತೋರಿಸಿದವರು ಅವರು. ಆಧುನಿಕ ಜೀವನ ಶೈಲಿಯ ಯಾಂತ್ರಿಕ ಬುದುಕನ್ನು ಅವರು ತಮ್ಮ ಮುಂಬೈ ಜಾತಕ ಕವನದಲ್ಲಿ ಮನಮುಟ್ಟುವಂತೆ ನಿರೂಪಿಸಿದ್ದಾರೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಹಸೀಲ್ದಾರ್ ಅಮಿತಕುಮಾರ ಕುಲಕರ್ಣಿ, ಕನ್ನಡ ಸಾಹಿತ್ಯ ಪರಂಪರೆ ಶ್ರೇಷ್ಠವಾದದ್ದು. ಉದಯೋನ್ಮುಖ ಕವಿಗಳು ಹಳೆಯ ಕಾವ್ಯಗಳನ್ನು ಅಧ್ಯಯನ ಮಾಡುವುದರಿಂದ ಜ್ಞಾನದ ಹರಿವು ಹೆಚ್ಚುತ್ತದೆ ಎಂದರು.

**ಪ್ರಾಸ್ತವಿಕ ನುಡಿ**

ಕಸಾಪ ತಾಲೂಕು ಅಧ್ಯಕ್ಷ ಪ್ರಶಾಂತ ಮಠಪತಿ ನುಡಿದರು, ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯ ಮೀಮಾಂಸೆಯ ಸೇತುವಂತೆ ಜಿ.ಎಸ್.ಎಸ್ ಕೆಲಸ ಮಾಡಿದ್ದಾರೆ. ಜತೆಗೆ ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯಮೀಮಾಂಸೆಯ ಸಾಮ್ಯತೆಗಳನ್ನು ಅವರು ಗುರುತಿಸಿದರು. ಅವರು ಕನ್ನಡ ಸಾಹಿತ್ಯದಲ್ಲಿ ವಿಮರ್ಶೆಯ ದೃಷ್ಟಿಕೋನವನ್ನು ಬೆಳೆಸಿದ ಕವಿ ಹೃದಯಿ ವಿದ್ವಾಂಸರಾಗಿದ್ದರು ಎಂದರು.

ತಾಪಂ ಇಒ ಹಣಮಂತರಾಯ ಕೌಟಗೆ ಮಾತನಾಡಿ, ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಜಿ.ಎಸ್.ಎಸ್ ಕವಿಯಾಗಿಯೂ, ವಿದ್ವಾಂಸರಾಗಿಯೂ ಗುರುತಿಸಿಕೊಂಡವರು. ಅವರು ಕೇವಲ ವ್ಯಕ್ತಿಗಳನ್ನು ಬೆಳೆಸದೆ ಸಮುದಾಯವನ್ನು ಕಟ್ಟುವ ಪ್ರಯತ್ನ ಮಾಡಿದರು. ಪ್ರಸ್ತುತ ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಗಂಭೀರವಾದ ಸಂಶೋಧನೆ ನಡೆಯಬೇಕು ಎಂದರು. ಮಹಾಲಿಂಗ ದೇವರು ದಿವ್ಯಾ ಸಾನಿಧ್ಯ ವಹಿಸಿ ಮಾತನಾಡಿದರು,

ಕನ್ನಡ ಜಂಗಮರಾಗಿದ್ದ ಲಿಂಗೈಕ್ಯ ಡಾ.ಚನ್ನಬಸವ ಪಟ್ಟದ್ದೇವರು ಅವರ ಜನ್ಮಸ್ಥಳ ಗಡಿಭಾಗದ ಕಮಲನಗರದಲ್ಲಿ ಸಾಹಿತಿಗಳ, ಕವಿಗಳ ಕುರಿತು, ಕನ್ನಡ ಸಾಹಿತ್ಯದ ಶ್ರೇಷ್ಠತೆಯನ್ನು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವಂತಹ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸುತ್ತ ಬರುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಹೇಳಿದರು.

ಡಾ.ರಮೇಶ ಮೂಲಗೆ ಚಕೋರ ಸಾಹಿತ್ಯ ವಿಚಾರ ವೇದಿಕೆ ಜಿಲ್ಲಾ ಸಂಚಾಲಕಿ ಡಾ.ಮಕ್ತುಂಬಿ ಎಂ, ಎಎಸ್ಐ ಆಶಾ ರಾಠೋಡ ಮಾತನಾಡಿದರು. ಭಾಲ್ಕಿ ಹಿರೇಮಠದ ಪೂಜ್ಯ ಮಹಾಲಿಂಗ ದೇವರು ದಿವ್ಯ ಸಾನಿಧ್ಯ ವಹಿಸಿದ್ದರು. ಆಡಳಿತ ಅಧಿಕಾರಿ ಚನ್ನಬಸವ ಘಾಳೆ ಅಧ್ಯಕ್ಷತೆ ವಹಿಸಿದ್ದರು. ಕಸಾಪ ಗೌರವಾಧ್ಯಕ್ಷ ಪ್ರೊ.ಎಸ್. ಎನ್.ಶಿವಣಕರ, ಉಪಾಧ್ಯಕ್ಷ ಧನರಾಜ ಭವರಾ, ಮಡಿವಾಳಪ್ಪ ಮಹಾಜನ, ಸಂತೋಷ ಸುಲಾಕೆ, ತಾಪಂ ಮಾಜಿ ಅಧ್ಯಕ್ಷ ಶ್ರೀರಂಗ ಪರಿಹಾರ, ಸೇರಿದಂತೆ ಅನೇಕರು ಇದ್ದರು.

# ವಾಲ್ಮೀಕಿ ಸಮಾಜದ ಶಾಸಕರ ಮನೆ ಮುಂದೆ ಧರಣಿ: ಮರೆಪ್ಪ ನಾಯಕ ಹೇಳಿಕೆ.



ಮಲ್ಲಮ್ಮನುಡಿವಾರ್ತೆಯಾದಗಿರಿ.

ರಾಜ್ಯದಲ್ಲಿ ವಾಲ್ಮೀಕಿ ನಾಯಕ ಸಮುದಾಯದ ಹೆಸರಲ್ಲಿ ನಕಲಿ ಜಾತಿ ಪ್ರಮಾಣಪತ್ರಗಳು ವಿತರಣೆಯಾಗುತ್ತಿದ್ದು, ಇದ–ರಿಂದ ಮೂಲ ಜಾತಿ ಜನಾಂಗಕ್ಕೆ ಅನ್ಯಾಯವಾಗುತ್ತಿದೆ ಎಂದು ಉತ್ತರ ಕರ್ನಾಟಕ ಭಾಗದ ವಾಲ್ಮೀಕಿ ನಾಯಕ ಸಮಾಜದ ಅಧ್ಯಕ್ಷ ಮರೆಪ್ಪ ನಾಯಕ ಮಗದಂಪುರ ಆರೋಪಿಸಿದರು,ಪರಿಶಿಷ್ಟಪಂಗಡದ ಪರಿವಾರ, ನಾಯ್ಕಡ ಮತ್ತು ತಳವಾರ ಹೆಸರಿನ ಮೇಲೆ ಉತ್ತರ ಕರ್ನಾಟಕ ಭಾಗದಲ್ಲಿ ಸುಮಾರು ಎರಡುವರೆ ಲಕ್ಷ ನಕಲಿ ಜಾತಿ ಪ್ರಮಾಣಪತ್ರಗಳು ವಿತರಣೆ ಮಾಡಲಾಗಿದೆ. ಹೀಗಿದ್ದರೂ ರಾಜ್ಯ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ರಾಜ್ಯದ ಮುಖ್ಯಮಂತ್ರಿ ಹೆಸರಿಗೆ ಮಾತ್ರ ತಾವು ಅಹಿಂದ ಪರವಾಗಿದ್ದೇನೆ ಎಂದು ಹೇಳುತ್ತಾರೆ. ಆದರೆ ನಿಜವಾಗಲು ನಮ್ಮಜಾತಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಗುರವಾರ ಸುದ್ದಿಗೋಷ್ಟಿಯಲ್ಲಿ ಆರೋಪಿಸಿದರು.ವಾಲ್ಮೀಕಿಅಭಿವೃದ್ಧಿ ನಿಗಮದಲ್ಲಿದ್ದ ಸುಮಾರು 11 ಸಾವಿರ ಕೋಟಿ ಅನುದಾನವನ್ನು ಕೊಳ್ಳೆಹೊಡೆಯಲಾಗಿದೆ. ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ ಸಚಿವ ಈಗಾಗಲೇ ತಮ್ಮ ಸ್ಥಾನ ಕಳೆದುಕೊಂಡಿದ್ದಾರೆ. ಈ ಖಾತೆ ಮುಖ್ಯಮಂತ್ರಿಗಳ ಬಳಿಯೇ ಇದ್ದರೂ ನಿಯಮಕ್ಕೆ ಅನುದಾನ ಬಿಡುಗಡೆ ಮಾಡುತ್ತಿಲ್ಲ. ಇದರಿಂದ ಇಲಾಖೆಯಲ್ಲಿನ ಅಧಿಕಾರಿಗಳಿಗೆ ವೇತನ ಸಿಗದ ಪರಿಸ್ಥಿತಿ ಇದೆ ಎಂದು ಹರಿಹಾಯ್ದರು. ನಮ್ಮ ಸಮುದಾಯದಪ್ರಮುಖ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ನಮ್ಮ ಸಮುದಾಯದ ದೇವದುರ್ಗ, ಸುರಪುರ,ರಾಯಚೂರುಗ್ರಾಮೀಣ, ಮಾನ್ವಿ ಹಾಗು ಮಸ್ಕಿ ಕ್ಷೇತ್ರದ ಶಾಸಕರ ಮನೆಗಳ ಮುಂದೆ ಫೆ.2 ರಿಂದ ಮೊದಲ ಹಂತದಲ್ಲಿ ಒಂದು ದಿನದ ಧರಣಿ ನಡೆಸಲು ತೀರ್ಮಾನಿಸುತ್ತಿದ್ದೇವೆ ಎಂದು ಹೇಳಿದರು. ಪ್ರಮುಖರಾದ ಶ್ರವಣ ಕುಮಾರ ನಾಯಕ, ಸಿದ್ದಲಿಂಗಪ್ಪ ನಾಯಕ,ಸಾಹೇಬಗೌಡಗೌಡಗೇರಾ, ದೊಡ್ಡಯ್ಯ ನಾಯಕ, ಶರಣಪ್ಪ ಜಾಕನಳ್ಳಿ, ಶಿವು ಹುಲಕಲ, ಯಲ್ಲಪ್ಪ ನಾಯಕ, ಕಾಶಪ್ಪ ದೊರೆ ಇದ್ದರು.

# ಫೆ.1ರಂದು ತಿಂಥಣಿ ಬ್ರಿಡ್ಜ್ ಸಿದ್ದರಾಮನಂದ ಪುರಿ ಸ್ವಾಮೀಜಿ ಪುಣ್ಯರಾದನೆ.

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಕಾಗಿನೆಲೆ ತಿಂಥಣಿ ಬ್ರಿಡ್ಜ್ ನ್ ಕನಕ ಗುರು ಪೀಠದ ಪರಮ ಪೂಜ್ಯ ಲಿಂಗೈಕ್ಯ ಸಿದ್ದರಾಮನಂದ ಪುರಿ ಮಾಹಾಸ್ವಾಮಿಗಳ ಪುಣ್ಯರಾಧನೆ ಕಾರ್ಯಕ್ರಮವು ಫೆ.1ರಂದು ಸುರಪೂರ ಸಮಿಪದ ತಿಂಥಣಿ ಬ್ರಿಡ್ಜ್ ನ್ ಕನಕ ಗುರುಪೀಠದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕುರುಬ ಸಂಘದ ಯಾದಗಿರಿ ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರ ತಿಳಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ



ನೀಡಿರುವ ಅವರು ಕನಕ ಗುರು ಪೀಠದ ಸಿದ್ದರಾಮನಂದ ಪುರಿ ಸ್ವಾಮೀಜಿಯವರು ಜ 15.ರಂದು ನಿಧನರಾಗಿದ್ದು ಶ್ರೀಗಳ ಪುಣ್ಯರಾಧನೆ ಕಾರ್ಯಕ್ರಮವನ್ನು ಫೆ.1ರಂದು ಆಯೋಜಿಸಲಾಗಿದ್ದು ಈ ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿ ಸೇರಿದಂತೆ ಹಲವು ಸಚಿವರು ಶಾಸಕರು ರಾಷ್ಟ ಮತ್ತು ರಾಜ್ಯಮಟ್ಟದ ವಿವಿಧ ಪಕ್ಷಗಳ ಮುಖಂಡರು ವಿವಿಧ ಮಠಾಧೀಶರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಹಾಲುಮತ ಸಮಾಜ ಮತ್ತು ಭಕ್ತ ವೃಂದದವರು ಇನ್ನಿತರ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ. ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರ ಕನಕ ಗುರು ಪೀಠದ ಯಾದಗಿರಿ ತಾಲೂಕು ಅಧ್ಯಕ್ಷ ಬೀರಲಿಂಗ ಪೂಜಾರಿ ಮುಂಡರಗಿ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಯ್ಯ ಮಗ್ಗ, ಜಿಲ್ಲಾ ಕಾರ್ಯಧ್ಯಕ್ಷ ಹಣಮಂತ್ರಾರಾಯಗೌಡ ಪೊ. ಪಾ.ತೇಕರಾಳ,ಜಿಲ್ಲಾ ಖಜಾಂಚಿ ಕೃಷ್ಣಪ್ಪ ಪೂಜಾರಿ,ಕುರುಬ ಸಂಘದ ಯಾದಗಿರಿ ತಾಲೂಕು ಅಧ್ಯಕ್ಷ ಸೂರ್ಯಕಾಂತ ಅಲಿಪುರ,ಯುವ ಮುಖಂಡ ಬೀರೇಶ್ ಚಿರತೆನೂರ್ ಕೋರಿದ್ದಾರೆ.

# ಸಂಭ್ರಮದಿ ಜರುಗಿದ ಗೋನಾಲ ದುರ್ಗಾದೇವಿ ಮಾಹರಥೋತ್ಸವ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಪ್ರತಿವರ್ಷದಂತೆ ಈ ವರ್ಷವೂ ಕಲ್ಯಾಣ ಕರ್ನಾಟಕ ಭಾಗದ ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಪ್ರಸಿದ್ಧ ಕ್ಷೇತ್ರವಾದ ಗೋನಾಲ ಗ್ರಾಮದ ಆದಿಶಕ್ತಿ ಶ್ರೀ ದುರ್ಗಾದೇವಿಯ ಜಾತ್ರೆಯು ಜ 28.ರಂದು ಅತ್ಯಂತ ಸಂಭ್ರಮದಿಂದ ಜರುಗಿತು. ಬೆಳಿಗ್ಗೆ 4.ಗಂಟೆಗೆ ಕೈಯಿಂದ ಪಾಯಸ ತಿರುಗಿಸುವ ಪವಾಡ ಕಾರ್ಯಕ್ರಮದ ನಂತರ ಬೆಳಗ್ಗೆ 9:00 ಗಂಟೆಯಿಂದ ಮಧ್ಯಾಹ್ನ 1.ಗಂಟೆಯವರೆಗೆ ಮಕ್ಕಳ ಜವಳಾ ಕಾರ್ಯ ನಡೆದವು ನಂತರ ಸಾಯಂಕಾಲ 5:30ಕ್ಕೆ ಶ್ರೀ ದುರ್ಗಾ ದೇವಿಯ ಮಹಾ ರಥೋತ್ಸವ ಅತ್ಯಂತ ಸಡಗರ ಸಂಭ್ರಮದಿಂದ ಜರಗಿತು. ರಥಕ್ಕೆ ಫಲ ಪುಷ್ಪೂ ಹೂವು ಹಣ್ಣುಗಳಿಂದ ಅಲಂಕರಿಸಲಾಗಿತ್ತು. ರಥೋತ್ಸವಕ್ಕೆ ಭಕ್ತರು ಉತ್ತತ್ತಿ ಬಾಳೆಹಣ್ಣು ಎಸೆದು ಭಕ್ತಿ ಸಮರ್ಪಿಸಿದರು.ರಥೋತ್ಸವದ ನಂತರ ಜೋಗುತಿ ಕುಣಿತ ರಾತ್ರಿ ಭಜನಾ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜಿಸಲಾಗಿತ್ತು.ಈ ಜಾತ್ರಾ ಮಹೋತ್ಸವಕ್ಕೆ ಕರ್ನಾಟಕ ಸೇರಿದಂತೆ ಆಂಧ್ರ ,ತೆಲಂಗಾಣ, ಮಹಾರಾಷ್ಟ ,ಗುಜರಾತ್, ಹಾಗೂ ಇನ್ನಿತರ ಭಾಗಗಳಿಂದ ಜನಪ್ರತಿನಿಧಿಗಳು ವಿವಿಧ ಪಕ್ಷದ ರಾಜಕೀಯ ಮುಖಂಡರು ಸುತ್ತಮುತ್ತಲು ಗ್ರಾಮದ ಭಕ್ತಾದಿಗಳು ಭಾಗವಹಿಸಿದ್ದರು.ಜಾತ್ರೆಯಲ್ಲಿ ಬೆಂಡು ಬೇತಾಸು ಮಂಡಾಳು ಜಿಲೇಬಿ ಬಜಿ ಖರಿದಿ ಮಕ್ಕಳ ಆಟಿಕೆ ಸಾಮಾನುಗಳ ವ್ಯಾಪಾರ ಜೋರಾಗಿತ್ತು ಮಕ್ಕಳು ಜೋಕಾಲಿ ತೊಟ್ಟಿಲಿನಲ್ಲಿ ಕುಳಿತು ಸಂಭ್ರಮಿಸಿದರು.ಪರಸ್ಥಳದಿಂದ ಬಂದಂತ ಭಕ್ತರಿಗೆ ದೇವಸ್ಥಾನದ ವತಿಯಿಂದ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.ಯಾದಗಿರಿ ಸಿಪಿಐ ಸುನಿಲ್ ಮೂಲಿಮನಿ ಮಾರ್ಗದರ್ಶನದ ಮೇರೆಗೆ ವಡಗೇರಾ ಪೊಲೀಸ್ ಠಾಣೆಯ ಪಿಎಸ್ಐ ಮೈಬುಬ ಅಲಿ ನೇತೃತ್ವದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು.

# ಬೆಂಗಳೂರು:ದಲಿತ ವಿಚಾರ ಸಂಕಿರಣ ಫೆ. 3ರಂದು



• ಮಲ್ಲಮ್ಮ ನುಡಿ ವಾರ್ತೆ,ಹುಮನಾಬಾದ :

ನಗರದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಭಾರತೀಯ ದಲಿತ ಪ್ಯಾಂಥರ್ ಸಂಘಟನೆ ವತಿಯಿಂದ ಬೆಂಗಳೂರು ನಗರದಲ್ಲಿ ಆಯೋಜಿಸಿರುವ ಭೀಮಾ ಕೋರೆಗಾಂವ ವಿಜಯೋತ್ಸವ ಮತ್ತು ದಲಿತರ ಮುಂದಿರುವ ಸವಾಲುಗಳ ವಿಚಾರ ಸಂಕಿರಣ ಕಾರ್ಯಕ್ರಮದ ಭಿತ್ತಿ ಪತ್ರವನ್ನು ಮಾಜಿ ಸಚಿವ ರಾಜಶೇಖರ ಬಿ.ಪಾಟೀಲರವರು ಬಿಡುಗಡೆ ಮಾಡಿದರು.

ಬಳಿಕ ಭಾರತೀಯ ದಲಿತ ಪ್ಯಾಂಥರ್ ಸಂಘಟನೆ ತಾಲೂಕ ಅಧ್ಯಕ್ಷ ಗಣಪತಿ ಅಷ್ಟೋರೆ ಮಾತನಾಡಿ, ಪ್ರಸ್ತುತ ನಾಗರಿಕ ಜಗತ್ತಿನಲ್ಲಿ ದಲಿತ ಸಮುದಾಯಗಳ ಜನರ ಮುಂದಿರುವ ಸವಾಲು ಅರಿತುಕೊಳ್ಳಲು ಹಾಗೂ ಜಾಗೃತಿ ಮೂಡಿಸಲು ಬೆಂಗಳೂರು ನಗರದ ಕುಮಾರ ಕೃಪಾ ರಸ್ತೆಯ ಗಾಂಧಿ ಭವನದಲ್ಲಿ ಫೆ. 3ರಂದು ಬೆಳಗ್ಗೆ 11 ಗಂಟೆಗೆ ಭೀಮಾ ಕೋರೆಗಾಂವ ವಿಜಯೋತ್ಸವ ಮತ್ತು ದಲಿತರ ಮುಂದಿರುವ ಸವಾಲುಗಳ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಹೀಗಾಗಿ ಈ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಭಾರತೀಯ ದಲಿತ ಪ್ಯಾಂಥರ ಸಂಘಟನೆ ತಾಲ್ಲೂಕು ಅಧ್ಯಕ್ಷ ಗಣಪತಿ ಅಷ್ಟೋರೆ ರವರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ವೈಜಿನಾಥ ಸಿಂಧೆ , ಶಿವಾನಂದ ಕಟ್ಟಿಮನಿ, ಸಿದ್ಧಾರ್ಥ ಜಾನವೀರ, , ಗೌತಮ ಜಾನವೀರ, ಅನಂತ ಮಾಳಗೆ, ಕೈಲಾಸ ಮೇಟಿ, ವಿಶಾಲ್ ಸಿಂಧನಕೇರಾ, ರಾಹುಲ್ ಅನುಕುಣಿ, ಗೌತಮ್, ಸಾಗರ್, ಯೋಗಿ, ಅಜಯ್, ಆದರ್ಶ, ಜಾಗು ಸೇರಿ ಅನೇಕರಿದ್ದರು.

# ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ

• ಮಲ್ಲಮ್ಮ ನುಡಿ ವಾರ್ತೆ, ಬಸವಕಲ್ಯಾಣ :



ನಗರದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯರು ವಿಜಯ್ ಸಿಂಗ್ ಅವರು 54 ನೇ ಜನ್ಮದಿನದ ನಿಮಿತ್ತವಾಗಿ ಅವರ ಅಭಿಮಾನಿಗಳು, ಕಾಂಗ್ರೆಸ್ ಪಕ್ಷದ ಮುಖಂಡರುಗಳು ಸೇರಿದಂತೆ ಹಲವು ಗಣ್ಯರು ತಾಲೂಕು ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ, ಹಣ್ಣು ಹಂಪಲು ವಿತರಿಸಿ ಜನ್ಮ ದಿನ ಆಚರಣೆ. ಆಚರಿಸಲಾಯಿತು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ನೀಲಕಂಠ ರಾಠೋಡ್. ಬಸವರಾಜ ಸ್ವಾಮಿ, ಅರ್ಜುನ್ ಕನಕ, ದಿಲೀಪ್ ಕುಮಾರ್ ಶಿಂಧೆ, ಶರಣು ಅಲಗುಡ, ಡಿಕೆ ದಾವೂದ್, ಶಿವಕುಮಾರ್ ಬಿರಾದಾರ, ರವೀಂದ್ರ ಬೋರಹಳೆ, ನಗರಸಭೆ ಮಾಜಿ ಅಧ್ಯಕ್ಷರು ಎಂಡಿ. ಸಫೀರುದ್ದೀನ್, ಮನೋಹರ್ ಮೈಸೇ, ಪಿಂಟು ಕಾಂಬಳೆ, ಗಿರೀಶ್ ತಂಬೋಳೆ, ಜಗನ್ನಾಥ್ ಪಾಟೀಲ್, ಮನೋಜ್ ಮಾಶೆಟ್ಟೆ. ಸಿದ್ದು ಬೋರ್ಗೆ, ರಾಮ್ ಜಾಧವ್, ಮೂಸಾ ಕೆ.ಬಿ.ಎನ್, ಅನಿಲ್ ಸೋಮವಂಶಿ, ಚಂದ್ರಕಾಂತ್ ಮೇತ್ರೆ, ಲತಾ ಹಾರಕೂಡೆ. ಸವಿತಾ ಕಾಂಬ್ಳೆ, ಅನ್ನಪೂರ್ಣಬಾಯಿ ಬಾಗ್ ಹಿಪ್ಪರಗ, ಆರತಿ ರಾಠೋಡ್ , ಯಾಸ್ಮಿನ್, ನಾಗನಾಥ ಮೇತ್ರೆ, ಯುವರಾಜ್ ಬೆಂಡೆ, ಪಪ್ಪು ಉದನೆ, ಸಂತೋಷ್ ಗಡಿ ಗೌಂಡಗಾಂವ್, ಜಬಿ ನವಾಜ್, ಜಾಬೇರ್, ಈಶ್ವರ ಸೋನಾರ್, ತಹೇಸಿನ್ ಅಲಿಜಮಾದಾರ್, ಸದಾನಂದ ಬಿರಾದಾರ್, ಎಂಡಿ ಖಾದೀರುದ್ದಿನ್, ಅನಂತ ವಾಡೇಕರ್, ನಿತಿನ್ ಠಾಕೂರ್, ವಿಷ್ಣು ಇಸಾಜಿ, ಸೇರಿದಂತೆ, ಮುಖಂಡರು, ಯುವ ಕಾಂಗ್ರೆಸ್ ಮುಖಂಡರು, ಅಭಿಮಾನಿಗಳು ಉಪಸ್ಥಿತರಿದ್ದರು

# ಕಿಟ್ಟಾ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 77.ನೇಯ ಗಣರಾಜ್ಯೋತ್ಸವ ಆಚರಣೆ.



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:

ತಾಲೂಕಿನ ಕಿಟ್ಟಾ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಜನೆವರಿ 26.ರಂದು 77.ನೇಯ ಗಣರಾಜ್ಯೋತ್ಸವವನ್ನುಸಂಭ್ರಮದಿಂದ ಆಚರಿಸಲಾಯಿತು. ಈ ವೇಳೆ ಸಾಮಾಜಿಕ ಕಾರ್ಯಕರ್ತರಾದ ಮಾರುತಿ ಪುಲೆ ಕಿಟ್ಟಾ ಅವರಿಗೆ ಸನ್ಮಾನಿಸಲಾಯಿತು.ಈಸಂದರ್ಭದಲ್ಲಿ ರೈತ ಮುಖಂಡರಾದ ವೀರಾರಡ್ಡಿ ಪಾಟೀಲ. ಮುಖ್ಯ ಗುರುಗಳಾದ ಸೋಮನಾಥ ಬೇಲೂರೆ. ಶಿಕ್ಷಕರಾದ ಮಾರುತಿ ಮಂಗನಾಳೆ. ಸಾವಿತ್ರಿ ಬಾಯಿ ಪುಲೆ ಶಿಕ್ಷಕಿಯರ ಸಂಘದ ತಾಲೂಕಾ ಘಟಕದ ಅಧ್ಯಕ್ಷೆ ವಿಜಯಲಕ್ಷ್ಮಿ ಪಂಚಾಳ. ಎಸ್. ಡಿ. ಎಮ್. ಸಿ. ಅಧ್ಯಕ್ಷರಾದ ರಮೇಶ ಮಂಠಾಳೆ. ಬಾಬುರಾವ ಒಂಟೆ. ಬಸವರಾಜ ಹುಡೆ. ರಾಧಿಕಾ ತಾಂದಳೆ. ಹಣಮಂತ ಸಸ್ತಾಪುರೆ. ಸಂತೋಷ ವೀರಣ್ಣೋರ್. ಶಾಲೆಯ ಮಕ್ಕಳು. ಗ್ರಾಮದ ಪ್ರಮುಖರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಮಕ್ಕಳಿಂದ ಸಾಂಸ್ಕೃತಿಕ ಚಟುವಟಿಕೆಗಳು ನಡೆದವು.

# ಸೌಜನ್ಯತೆ ಸೌಹಾರ್ದತೆಯಿಂದ ಎತ್ತರದ ವ್ಯಕ್ತಿತ್ವ ಸಾಧ್ಯ ಹಾರಕೂಡ ಶ್ರೀ.



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :

ಸೌಜನ್ಯತೆ, ಸೌಹಾರ್ದತೆ, ವಿನಮ್ರತೆ ಹಾಗೂ ಕಿಂಕರ ಭಾವ ಯಾರಲ್ಲಿರುವುದೊ ಅಂತಹವರು ಎತ್ತರದ ವ್ಯಕ್ತಿತ್ವಸಾಧಿಸಿಕೊಳ್ಳಬಲ್ಲರು ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹತ್ಯಾಳ ತಾಂಡದ ಶ್ರೀ ದುರ್ಗಾದೇವಿ ಮಂದಿರದ ಕಳಸಾರೋಹಣ ಅಂಗವಾಗಿ ಆಯೋಜಿಸಿದ ಧರ್ಮ ಸಭೆಯ ದಿವ್ಯ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು,

ನಂಬಿಕೆಗೆ ಅರ್ಹವಾದ ಬಂಜಾರ ಸಮಾಜ ಧರ್ಮ ಮತ್ತು ದೇವರಲ್ಲಿ ಅಪಾರ ನಿಷ್ಠೆ ಹೊಂದಿದ್ದು, ಶಕ್ತಿಯ ಅಧಿದೇವತೆಯಾದ ದುರ್ಗಾ ಮಾತೇಯನ್ನು ಶ್ರದ್ಧೆಯಿಂದ ಆರಾಧಿಸುವ ಸಾತ್ವಿಕ ಸಮಾಜವಾಗಿದೆ.

ಯಾರು ತಂದೆ ತಾಯಿ ಗುರು ಹಿರಿಯರ ಸೇವೆ ಮಾಡುವರು ಅವರೇ ಧನ್ಯರು, ಹೀಗಾಗಿ ನಮ್ಮ ಕಾಯ ಅಳಿದರು ನಾವು ಮಾಡಿರುವ ಸತ್ಯ ಶುದ್ಧ ಕಾಯಕ ಜನಮಾನಸದಲ್ಲಿ ಶಾಸ್ವತವಾಗಿರಬೇಕು.

ಹತ್ಯಾಳ ತಾಂಡಾದ ಜನತೆ ಮಾಡಿರುವ ಈ ಸತ್ಕಾರ್ಯದಿಂದಾಗಿ ಸೇವಾಲಾಲ್ ಮಹಾರಾಜ ದುರ್ಗಾ ಮಾತೆ ಹಾಗೂ ಹಾರಕೂಡ ಧೀಶನ ಕೃಪೆ ವರ್ಷಧಾರೆಯಾಗಿ ಹರಿದು ಬರಲಿ ಎಂದು ಶುಭ ಹಾರೈಸಿದರು.

ಪೂಜ್ಯ ಶಂಕರಆಯಿ, ಪೂಜ್ಯ ಪರ್ವತಾ ದೇವಿ, ಪೂಜ್ಯ ವಿಲಾಸ ಮಹಾರಾಜ, ಪೂಜ್ಯ ರಂಗರಾವ ಮಹಾರಾಜ, ಕಾಡ ಅಧ್ಯಕ್ಷ, ಬಾಬು ಹೊನ್ನನಾಯಕನಾಯಕ, ಸದಾನಂದ ಪಾಟೀಲ ಪಾಲ್ಗೊಂಡಿದ್ದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಸತೀಶ ರಾಠೋಡ ಸ್ವಾಗತಿಸಿ, ನಿರೂಪಿಸಿದರು.

# ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಹೆಚ್ಚಿನ ಸೌಲಭ್ಯ ಒದಗಿಸುವ ಭರವಸೆ



ಎಂ ದೊಡ್ಡ ಬಸವರಾಜ

• ಮಲ್ಲಮ್ಮ ನುಡಿ ವಾರ್ತೆ,ಸಿಂಧನೂರು:

ಇಲ್ಲಿನ ಪ್ರತಿಷ್ಠಿತ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷರಾಗಿ ಎಂ.ದೊಡ್ಡಬಸವರಾಜ್ ಹಾಗೂ ಉಪಾಧ್ಯಕ್ಷರಾಗಿ ಸಿದ್ದನಗೌಡ ಮಾಟೂರು ಅವರು ಮೂರನೇ ಅವಧಿ( ಹ್ಯಾಟ್ರಿಕ್ )ಗೆ ಅವಿರೋಧ ಆಯ್ಕೆಯಾಗುವ ಮೂಲಕ ದಾಖಲೆ ಬರೆದಿದ್ದಾರೆ.

ಇಲ್ಲಿನ ಪಿಎಲ್ ಡಿ ಬ್ಯಾಂಕ್ ಕಚೇರಿಯಲ್ಲಿ ಚುನಾವಣಾಧಿಕಾರಿ ಹಾಗೂ ತಹಶೀಲ್ದಾರ್ ಅರುಣಕುಮಾರ್ ದೇಸಾಯಿ ಚುನಾವಣಾ ಪ್ರಕ್ರಿಯೆ ನಡೆಸಿ ಅವಿರೋಧ ಆಯ್ಕೆಯನ್ನು ಘೋಷಿಸಿದರು. ಪಿಎಲ್ ಡಿ ಬ್ಯಾಂಕಿನ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಂದು ನಾಮಪತ್ರ ಸಲ್ಲಿಕೆಯಾದ ಹಿನ್ನೆಲೆಯಲ್ಲಿ ಅವಿರೋಧ ಆಯ್ಕೆಯನ್ನು ಪ್ರಕಟಿಸಲಾಯಿತು.

ಪಿಎಲ್ ಡಿ ಬ್ಯಾಂಕಿನ 63 ವರ್ಷಗಳ ಇತಿಹಾಸದಲ್ಲೇ ಇದೇ ಪ್ರಥಮವಾಗಿ ಮೂರನೇ ಅವಧಿಗೆ ಸತತ ಅಧ್ಯಕ್ಷರಾಗಿ, ಅವಿರೋಧವಾಗಿಯೇ ಆಯ್ಕೆಯಾದ ಮೊದಲಿಗರು ಎಂಬ ಕೀರ್ತಿಗೂ ಎಂ.ದೊಡ್ಡಬಸವರಾಜ್ ಪಾತ್ರರಾದರು.

ಗೆಲುವು ಸಾಧಿಸಿದ ಬಳಿಕ ಮಾತನಾಡಿ, ರೈತರು ಹಾಗೂ ಎಲ್ಲ ನಿರ್ದೇಶಕರು, ಹಿರಿಯ ಸಹಕಾರದೊಂದಿಗೆ ಬ್ಯಾಂಕ್ ಮುನ್ನೆಡೆಸಿಕೊಂಡು ಹೋಗುವ ಜವಾಬ್ದಾರಿಯನ್ನು ನನಗೆ ವಹಿಸಿದ್ದು, ಈ ಕೆಲಸವನ್ನು ಸಮರ್ಥವಾಗಿ ನಿಭಾಯಿಸುತ್ತೇನೆ.

ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು. ಮುಖ್ಯವಾಗಿ ಅವಕಾಶ ವಂಚಿತರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. 2026 ರಿಂದ 2031 ರವರೆಗೆ ಆಡಳಿತ ಉತ್ತಮವಾಗಿ ಕಾರ್ಯನಿರ್ವಹಿಸಲಿದೆ ಎಂದು ಭರವಸೆ ನೀಡಿದರು.

**ನಿರ್ದೇಶಕರೂ ಅವಿರೋಧ ಆಯ್ಕೆ:**

ಪಿಎಲ್ ಡಿ ಬ್ಯಾಂಕಿಗೆ ಎಲ್ಲ ನಿರ್ದೇಶಕರೂ ಕೂಡ ಅವಿರೋಧವಾಗಿಯೇ ಆಯ್ಕೆಯಾಗಿದ್ದಾರೆ.

ಸಾಲಗುಂದಾ ಕ್ಷೇತ್ರದಿಂದ ನಿರ್ದೇಶಕರಾಗಿ ಕೆ.ಕರಿಲಿಂಗಪ್ಪ, ಗುಡುದೂರು ಕ್ಷೇತ್ರದಿಂದ ರಮೇಶ ಅಮರಪ್ಪ, ಮಾಡಸಿರವಾರದಿಂದ ರಾಮಣ್ಣ ಗಿಣಿವಾರ, ಜವಳಗೇರಾದ ರೇವಣಸಿದ್ದಪ್ಪ, ಬಳಗಾನೂರು ಕ್ಷೇತ್ರದಿಂದ ಲಿಂಗಪ್ಪ, ಕುನ್ನಟಗಿಯ ವೆಂಕಣ್ಣ ತಿಪ್ಪನಹಟ್ಟಿ, ಹುಡಾದಿಂದ ರಮೇಶ ಮುಕ್ಕುಂದಾ, ವಲ್ಕಂದಿನ್ನಿ ಕ್ಷೇತ್ರದಿಂದ ಹನುಮಂತಮ್ಮ ಮಣ್ಣಿಕೇರಿ ಕ್ಯಾಂಪ್, ಗೋರೆಬಾಳದಿಂದ ಶಿವಪ್ಪ ಸಾಸಲಮರಿ, ತುರುವಿಹಾಳದಿಂದ ಲಲಿತಮ್ಮ ಉಮಲೂಟಿ, ಜಾಲಿಹಾಳದಿಂದ ಹೇಮಾವತಿ ಭೀಮರಾಜ ಕ್ಯಾಂಪ್, ಕೆ.ಬಸಾಪರ ಕ್ಷೇತ್ರದ ಈರಣ್ಣ ಅವರೂ ಕೂಡ ನಿರ್ದೇಶಕರಾಗಿ ಅವಿರೋಧ ಆಯ್ಕೆಗೊಂಡರು.

ಎಪಿಎಂಸಿ ಮಾಜಿ ಅಧ್ಯಕ್ಷ ಕೆ.ಭೀಮಣ್ಣ, ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ವೆಂಕೋಬ ನಾಯಕ, ನಗರ ಮಂಡಲ ಅಧ್ಯಕ್ಷ ಸಿದ್ರಾಮೇಶ ಮನ್ನಾಪುರ, ಸಿಂಧನೂರು ಕೃಷಿ ಪತ್ತಿನ ಸಹಕಾರಿ ನಿ.ಅಧ್ಯಕ್ಷ ಅಮರೇಶ ಅಂಗಡಿ, ಸಹಾಯಕ ಚುನಾವಣಾಧಿಕಾರಿ ಕಿರಣಕುಮಾರ್ , ಪಿಎಲ್ ಡಿ ಬ್ಯಾಂಕ್ ಮ್ಯಾನೇಜರ್ ಮಲ್ಲಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವೈದ್ಯಕೀಯ ವಿಜ್ಞಾನ ಸಂಸ್ಥೆ –ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶ್ರಮದಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:



ರಾಷ್ಟೀಯ ಸ್ವಚ್ಛತಾ ದಿನದ ಅಂಗವಾಗಿ ಶುಕ್ರವಾರ ದಿ:30 ರಂದು ಬೆಳಿಗ್ಗೆ 8 ಗಂಟೆಗೆ ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆ ಹಾಗೂ ಬೋಧಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶ್ರಮದಾನ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಶ್ರೀ ಮರುಳಸಿದ್ಧಾರಾಧ್ಯ ಅವರು ಹೇಳಿದರು. ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಜಿಲ್ಲಾ ಆಸ್ಪತ್ರೆ ಹಾಗೂ ಆರೋಗ್ಯ ಕ್ಷೇತ್ರದ ವ್ಯಾಪ್ತಿಯಲ್ಲಿ ಶುಚಿತ್ವ ಕಾಪಾಡುವ ಉದ್ದೇಶದಿಂದ ಈ ಶ್ರಮದಾನ ಆಯೋಜಿಸಿದ್ದು,

ಅಂದು ಬೆಳಿಗ್ಗೆ 8 ರಿಂದ 9 ಗಂಟೆಯವರೆಗೆ ಶ್ರಮದಾನ ನಡೆಯಲಿದೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಪೋಲಿಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯೀಮ್ಸ, ನ್ಯಾಯವಾದಿಗಳ ಸಂಘ, ಗೃಹರಕ್ಷಕ ದಳ, ಎನ್ಎಸ್ಎಸ್

ಘಟಕ, ಇವರ ಸಹಯೋಗದಲ್ಲಿ ಈ ಶ್ರಮದಾನ ಆಯೋಜಿಸಿದ್ದು ಈ ಇಲಾಖೆ ಸಿಬ್ಬಂದಿಗಳು ಶ್ರಮದಾನ ನೀಡಲಿದ್ದಾರೆ ಎಂದು ಹೇಳಿದರು. ರಾಷ್ಟೀಯ ಲೋಕ್ ಅದಾಲತ್ 2026 ಈ ವರ್ಷದ ಮೊದಲ ರಾಷ್ಟೀಯ ಲೋಕ್ ಅದಾಲತ್ ಬರುವ ಮಾರ್ಚ್ 14 ರಂದು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ರಾಷ್ಟೀಯ ಲೋಕ್ ಅದಾಲತ್ ನಲ್ಲಿ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣ ಗೋಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ ಪಡಿಸಲಾಗುತ್ತಿದ್ದು, ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಸದುಪಯೋಗಪಡೆದುಕೊಳ್ಳುವಂತೆ ತಿಳಿಸಿದರು. ಇ– ಸಮನ್ಸ್ ಜಾರಿಯಲ್ಲಿ ಯಾದಗಿರಿ ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮವಾಗಿದೆ, ಜಿಲ್ಲಾ ಪೋಲಿಸ್ ಇಲಾಖೆಯ ಸಹಕಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು ಇ–ಸಮನ್ಸ್, ನೋಟಿಸ್, ವಾರೆಂಟ್ ಜಾರಿಯಲ್ಲಿ ರಾಜ್ಯ ದಲ್ಲಿಯೇ ಈ ಜಿಲ್ಲೆ ಪ್ರಥಮ ಸ್ಥಾನ ಪಡೆದಿದೆ ಎಂದು ಹೇಳಿದರು. ಜಿಲ್ಲೆಯ ವಿವಿಧ ಪ್ರಕರಣಗಳ ಮೇಲೆ ಶೇ 41 ರಷ್ಟು ಸಮನ್ಸ್ ಜಾರಿಯಾಗಿದೆ. ಶೇ 90 ರಷ್ಟು ವಿಸ್ತರಣೆಯಾಗಿದೆ. ಹಿಂದಿನ ಲೋಕ ಅದಾಲತ್ ಯಶಸ್ವಿಯಾಗಿ ನೆರವೇರಲು ಪೋಲಿಸ್ ಇಲಾಖೆ ಸಹಕಾರ ಅಪಾರವಾಗಿದೆ. ಈ ಸಂದರ್ಭದಲ್ಲಿ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಮಹೇಶ್ ಬಿರಾದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರತಿಭಟನೆಗೆ ಸ್ಪಂದಿಸಿದ ಅಧಿಕಾರಿಗಳು ಹೃದಯ ತಜ್ಞರ ನೇಮಕ ಕರವೇ ಅಭಿನಂದನೆ



• **ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರು:**

ಜನವರಿ 13 ರಂದು ಸಾರ್ವಜನಿಕ ಆಸ್ಪತ್ರೆಗೆ ಹೃದಯ ರೋಗ ತಜ್ಞರನ್ನು ನೇಮಕ ಮಾಡಬೇಕೆಂದು ಆಗ್ರಹಿಸಿ ನಮ್ಮ ಸಂಘಟನೆಯು ಅರೆಬೆತ್ತಲೆ ಮೆರವಣಿಗೆ ಮಾಡಲಾಯಿತು.

ಸಾರ್ವಜನಿಕ ಆಸ್ಪತ್ರೆಯಲ್ಲಿ ಹೃದಯ ರೋಗ ತಜ್ಞರ ಕೊರತೆ ಇರುವುದರಿಂದ, ಹೃದಯ ಸಮಸ್ಯೆಗಳಿಂದ ಬಳಲುವ ರೋಗಿಗಳು ಖಾಸಗಿ ಆಸ್ಪತ್ರೆಗಳತ್ತ ಹೋಗಬೇಕಾಗಿದ್ದು, ಇದರಿಂದ ಭಾರೀ ಆರ್ಥಿಕ ಹೊರೆ ಎದುರಿಸುತ್ತಿದ್ದಾರೆ. ತುರ್ತು ಸಂದರ್ಭದಲ್ಲಿ ತಕ್ಷಣ ಚಿಕಿತ್ಸೆ ಸಿಗದೆ ಜೀವಾಪಾಯ ಉಂಟಾಗುವ ಘಟನೆಗಳೂ ನಡೆಯುತ್ತಿವೆ.

ಬಡ ಮತ್ತು ಸಾಮಾನ್ಯ ಜನರ ಹಿತದೃಷ್ಟಿಯಿಂದ, ಸಾರ್ವಜನಿಕ ಆಸ್ಪತ್ರೆಯಲ್ಲಿ ಶಾಶ್ವತವಾಗಿ ಹೃದಯ ರೋಗ ತಜ್ಞರನ್ನು ನೇಮಕ ಮಾಡುವುದು ಅತ್ಯಂತ ಅಗತ್ಯವಾಗಿದೆ. ಇದರಿಂದ ಸಮಯಕ್ಕೆ ಸರಿಯಾದ ಚಿಕಿತ್ಸೆ ದೊರೆಯುವುದರೊಂದಿಗೆ ಅನಾವಶ್ಯಕ ಸಾವುಗಳನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ. ಅಲ್ಲದೇ ಕಿವಿ, ಮೂಗು, ಗಂಟಲು ತಜ್ಞರು ಇಲ್ಲದೇ ರೋಗಿಗಳು ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮನವಿ ಸಲ್ಲಿಸಲಾಯಿತು.

ನಮ್ಮ ಪ್ರತಿಭಟನೆ ಹಾಗೂ ಮನವಿಗೆ ಸ್ಪಂದಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಹೃದಯ ರೋಗ ತಜ್ಞರನ್ನು ನೇಮಕ ಮಾಡಿದ್ದು, ಬುಧುವಾರ ಬೆಳಿಗ್ಗೆ ಹೃದಯ ರೋಗ ತಜ್ಞರು ಅಧಿಕಾರ ಸ್ವೀಕರಿಸಿದರು. ಪ್ರಯುಕ್ತ ನಮ್ಮ ಸಂಘಟನೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಸ್ವಾಗತಿಸಲಾಯಿತು. ಅಲ್ಲದೇ ಮನವಿಗೆ ಸ್ಪಂಧಿಸಿದ ಅಧಿಕಾರಿ ಹಾಗೂ ಜನಪ್ರತಿನಿಧಿಗಳು ಅಭಿನಂದನೆಗಳು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕು ಅಧ್ಯಕ್ಷ ಜಿಲಾನಿಪಾಷಾ, ರವಿಕುಮಾರ ಬರಗುಡಿ, ಅಜೀಜ್ ಪಾಷಾ, ಮೋಸಿನ್ ಖಾನ್, ಅಲ್ಲಾವುದ್ದೀನ್, ತಿಮ್ಮನಗೌಡ, ಮಲ್ಲಣ್ಣ, ಮರೆಪ್ಪ, ಬಾಬು, ವಿರೇಶ ಹಿರೇಮಠ, ಪ್ರಭುಗೌಡ, ಪರಮಣ್ಣ, ಪ್ರಭು ಕಾಳಾಪೂರು, ರಾಜು ನಾಯಕ, ಶ್ರೀನಿವಾಸ ಸೇರಿ ಇತರರು ಇದ್ದರು.

#### ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರಕ್ಕೆ ಜಿ.ಪಂ ಸಿಇಓ ಚಾಲನೆ

# ಗ್ರಾ, ಪಂ, ಮಟ್ಟದಿಂದ ಸರಿಯಾದ ಮಾಹಿತಿ ನೀಡಿ: ಈಶ್ವರ ಕುಮಾರ್

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**



ಜಿಲ್ಲಾ ಮಾನವ ಅಭಿವೃದ್ಧಿ–2025 ಮತ್ತು ಸಮಗ್ರ ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿಯೋಜನೆ–2031ರವರೆಗೆ ವರದಿ ತಯಾರಿ–ಕೆಗೆ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಪೂರಕವಾದ ವರದಿ ತಯಾರಿಕೆಗಾಗಿ ಜಿಲ್ಲೆಯ ಪ್ರತಿಯೊಂದು ಗ್ರಾಮ ಪಂಚಾಯತಿ ಮಟ್ಟದಿಂದ ಸರಿಯಾದ ಮಾಹಿತಿಯನ್ನು ನೀಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ಜನವರಿ 29ರ ಗುರುವಾರ ದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ–2031 ವರದಿಗಳ ತಯಾರಿಕೆ ಕುರಿತು ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯು ಮಹತ್ವಾಕಾಂಕ್ಷೆ ಜಿಲ್ಲೆಯಾಗಿದೆ. ಅಲ್ಲದೆ ಇಲ್ಲಿನ ಎರಡು ತಾಲೂಕುಗಳು ಬ್ಲಾಕ್ ಮಹತ್ವಾಕಾಂಕ್ಷೆ ಜಿಲ್ಲೆಯಾಗಿದ್ದು, ಜಿಲ್ಲೆಯಲ್ಲಿನ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಫಲಿತಾಂಶ, ಆರೋಗ್ಯ, ಕೃಷಿ ಕ್ಷೇತ್ರ ಸೇರಿದಂತೆ ಇತರೆ ಕ್ಷೇತ್ರದಲ್ಲಿ ಹೇಗೆ ವರದಿಯನ್ನು ತಯಾರಿಸಬೇಕೆಂದು ತರಬೇತಿ ಕಾರ್ಯಾಗಾರದಲ್ಲಿ ಮಾಹಿತಿ ನೀಡಲಾಗುತ್ತದೆ. ಎಲ್ಲಾ ಅಧಿಕಾರಿಗಳು ಸರಿಯಾಗಿ ತಿಳಿದುಕೊಳ್ಳಬೇಕು ಎಂದರು.

ಮಾಹಿತಿ ನೀಡುವ ಸಂಬಂಧದಲ್ಲಿ ಕೆಳಮಟ್ಟದ ಅಧಿಕಾರಿ ನೀಡುವ ಮಾಹಿತಿಯನ್ನು ಕ್ರಾಸ್ ಚೆಕ್ ಮಾಡಬೇಕು. ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಜಿಲ್ಲೆಯ ಜನರ ಕಲ್ಯಾಣ, ಶಿಕ್ಷಣ, ಆರೋಗ್ಯ ಮತ್ತು ಆದಾಯದಂತಹ ಅಂಶಗಳನ್ನು ಅಳೆಯಲು ಬಹಳ ಮುಖ್ಯವಾದ ವರದಿಯಾಗಿದ್ದು, ಎಲ್ಲಾ ಇಲಾಖೆ ಅಧಿಕಾರಿಗಳು ವರದಿ ತಯಾರಿಕೆ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿಯನ್ನು ನೀಡುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಸಹಕರಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಂದ ಸೂಚಿಸಿದರು.

ಈ ವೇಳೆ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಿರಿಯ ನಿರ್ದೇಶಕ ಹಾಗೂ ಸರ್ಕಾರದ ಪದನಿಮಿತ್ತ ಜಂಟಿ ನಿರ್ದೇಶಕ ಬಸವರಾಜು ಎಸ್. ಮಾತನಾಡಿ, ಜಿಲ್ಲೆಗಳ ಮಾನವ ಅಭಿವೃದ್ಧಿ 2025 ಸಿದ್ಧಪಡಿಸಲು ಎಲ್ಲಾ 31 ಜಿಲ್ಲೆಗಳಲ್ಲಿಯೂ ತರಬೇತಿ ನಡೆಸಲಾಗುವುದು. ಆರೋಗ್ಯ, ಶಿಕ್ಷಣ ಹಾಗೂ ಜನಗಳ ಜೀವನ ಮಟ್ಟದ ಮೇಲೆ ಅಭಿವೃದ್ಧಿಯ ಅಂಶಗಳು ಒಳಪಟ್ಟಿದೆ. 2015ರ ನಂತರ ಈ ಕುರಿತು ವರದಿ ಮಂಡನೆಯಾಗಿಲ್ಲ. ವಿವಿಧ ಮುಖ್ಯ ಇಲಾಖೆಗಳ ಜೊತೆಗೂಡಿ ಈ ವರದಿಯನ್ನು ತಯಾರಿಸಲು ಸಹಕರಿಸಬೇಕು ಎಂದು ಕೋರಿದರು.

ರಾಜ್ಯ ಸರ್ಕಾರದ ಗ್ಯಾರೆಂಟಿ ಯೋಜನೆಗಳು ಜನಸಾಮಾನ್ಯರ ಮೇಲೆ ಬೀರಿರುವ ಪ್ರಭಾವ, ಜಿಲ್ಲೆ ಅಳವಡಿಸಿಕೊಂಡಿರುವ ಉತ್ತಮ ಅಭ್ಯಾಸಗಳು, ಇತರ ಜಿಲ್ಲೆಗಳಿಂದ ತೆಗೆದುಕೊಳ್ಳಬಹುದಾದ ಒಳ್ಳೆಯ ಮಾದರಿಗಳು ಸಹ ಅಭಿವೃದ್ಧಿ ದೃಷ್ಟಿಯಿಂದ ಮುಖ್ಯವೆನಿಸಿವೆ. ಆದ್ಯಾಗಿಯೂ ಲಿಂಗ ತಾರತಮ್ಯ, ನಿರುದ್ಯೋಗ, ಬಡತನ ಜನರನ್ನು ಕಾಡುತ್ತಿದೆ. ಈ ವರದಿ ಸಲ್ಲಿಸುವ ಕುರಿತು ಜಿಲ್ಲಾ ಮಟ್ಟದಲ್ಲಿಯೂ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತ ಸಿಇಒ ನೇತೃತ್ವದಲ್ಲಿ ಸಮಿತಿ ಸಹ ರಚಿಸಲಾಗಿದೆ. ಇದರಿಂದ ಅಭಿವೃದ್ಧಿ ಪೂರಕವಾದ ಅಂಶಗಳು ಬೆಳಕಿಗೆ ಬರುತ್ತದೆ ಎಂದರು.

ವಸ್ತುಸ್ಥಿತಿ ವರದಿಗೆ ಸಹಕಾರ ಅಗತ್ಯ: ಜಿಲ್ಲಾ ಮಾನವ ಅಭಿವೃದ್ಧಿ ವರದಿಗೆ ಅತ್ಯಂತ ಮಹ್ವತ್ವವಾದ ಮೌಲ್ಯವಿದೆ. ಇದು ದೀರ್ಘ, ಆರೋಗ್ಯಕರ ಮತ್ತು ಸೃಜನಾತ್ಮಕ ಜೀವನ ನಡೆಸಲು, ಶಿಕ್ಷಣ ಪಡೆಯಲು ಮತ್ತು ಯೋಗ್ಯ ಜೀವನ ಮಟ್ಟಕ್ಕೆ ಬೇಕಾದ ಸಂಪನ್ಮೂಲಗಳನ್ನು ಹೊಂದಲು ಅವಕಾಶ ನೀಡುತ್ತದೆ. ಹಾಗಾಗಿ ಅಧಿಕಾರಿಗಳು ತಾವು ತಯಾರಿಸುವ ವರದಿಯಿಂದ ಜಿಲ್ಲೆಯ ಅಭಿವೃದ್ಧಿ ಅವಲಂಬಿತವಾಗಿರುತ್ತದೆ. ವಸ್ತುಸ್ಥಿತಿ ವರದಿ ತಯಾರಿಕೆಗೆ ಅಧಿಕಾರಿಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಕರ್ನಾಟಕ ವಿಶ್ವವಿದ್ಯಾಲಯದ ಲೀಡ್ ಏಜೆನ್ಸಿ ಡಾ.ಜಗದ್ದೀಶ್, ಡಾ.ಕುಮಾರ್, ಜಿಲ್ಲಾ ಪಂಚಾಯತ್ ಯೋಜನಾ ಅಂದಾಜು ಮತ್ತು ಮೌಲ್ಯ ಮಾಪನಾಧಿಕಾರಿ ರಾಘವೇಂದ್ರ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ವ್ಯಸನ ಮುಕ್ತರಾಗಿ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಳ್ಳಿ:ಪ್ರಿಯದರ್ಶಿನಿ



• **ಮಲ್ಲಮ್ಮನುಡಿ ವಾರ್ತೆ ಕೊಪ್ಪಳ:**

ನಗರದ ಸುರಭೀ ಸಮಗ್ರ ವ್ಯಸನ ಮುಕ್ತ ಕೇಂದ್ರದಲ್ಲಿ ಗಣರಾಜ್ಯೋತ್ಸವದ ಅಂಗವಾಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಮಹಾತ್ಮ ಗಾಂಧಿಜಿ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ದೇಶ ಭಕ್ತ ರಾಯಣ್ಣ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಪುಷ್ಪ ಸಮರ್ಪಿಸುವ ಮೂಲಕ ಕಾರ್ಯಕ್ರಮಕ್ಕೆ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಚಾಲನೆ ನೀಡಿದರು.

ನಾವೆಲ್ಲಾ ವಿವಿಧತೆಯಲ್ಲಿ ಏಕತೆಯನ್ನು ಸಾರುವ ಭಾರತದ ದೇಶದ ನಾಗರೀಕರು, ನಮಗೆ ಮೂಲಭೂತ ಹಕ್ಕನ್ನು ಸಂವಿಧಾನದ ಮೂಲಕ ನೀಡಿ ಸಮಾಜದಲ್ಲಿ ಸಮಾನತೆ ನೆಲೆಸಲು ಸಾಕಷ್ಟು ಮಹಾತ್ಮರು ಶ್ರಮಿಸಿದ್ದಾರೆ. ಅವರ ಆದರ್ಶಗಳನ್ನು ಅರಿತು ಪುಸ್ತಕ ಓದುವ ಹವ್ಯಾಸ ರೂಢಿಸಿಕೊಂಡು ವ್ಯಸನಮುಕ್ತರಾಗಿ ಉತ್ತಮ ನಾಗರಿಕರಾಗಿ ಎಂದರು.

ಸಾಹಿತಿ ಬಿ.ಎನ್.ಹೊರಪೇಟಿ, ಯಲ್ಲಾಲಿಂಗ ಕತ್ತಿ, ಹೊನ್ನಕೇರಪ್ಪ ಹಡಪದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಇದೇ ವೇಳೆ ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಸುರಭೀ ಸಮಗ್ರ ವ್ಯಸನ ಮುಕ್ತ ಕೇಂದ್ರಕ್ಕೆ ಕಥೆ,ಕಾದಂಬರಿ,ನಾಟಕ, ಜೀವನ ಚರಿತ್ರೆಯನ್ನೊಳಗೊಂಡಂತೆ 50 ಕ್ಕೂ ಹೆಚ್ಚು ಪುಸ್ತಕಗಳನ್ನು ಚಿಕಿತ್ಸಕರ ಮನಪರಿವರ್ತನೆಗಾಗಿ ನೀಡಿ ದಿನನಿತ್ಯವೂ ಓದಲು ಸಲಹೆ ನೀಡಲಾಯಿತು. ಇದೇ ವೇಳೆ ಯೋಜನಾ ನಿರ್ದೇಶಕ ಬರಮಪ್ಪ, ಪ್ರಶಾಂತ ಮತ್ತು ಚಿಕಿತ್ಸಕರು,ಸಿಬ್ಬಂದಿ ವರ್ಗದವರು ಉಪಸ್ಥಿತಿ ಇದ್ದರು.



ಬಳ್ಳಾರಿ: ಜಿಲ್ಲಾ ಪೊಲೀಸ್ ಇಲಾಖೆ, ಸಂಚಾರಿ ಪೊಲೀಸ್ ಇಲಾಖೆ, ಕಾನೂನು ಸೇವೆಗಳು ಪ್ರಾಧಿಕಾರ ಹಾಗೂ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್, ಜಿಲ್ಲಾ ಘಟಕ ಬಳ್ಳಾರಿ ವತಿಯಿಂದ ಇಂದು ನಗರದಲ್ಲಿ ರಸ್ತೆ ಸುರಕ್ಷಾ ಜಾಥ ನಡೆಸಲಾಯಿತು.ಜಾತವನ್ನು ಆಡಿಷನಲ್ ಎಸ್. ಪಿ ರವಿಕುಮಾರ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನ ರಾಜ್ಯ ಸಹಾಯಕ ಆಯುಕ್ತರಾದ ಮಲ್ಲೇಶ್ವರಿ ಜುಜಾರೆ, ಚಂದ್ರಶೇಖರ್ ರೆಡ್ಡಿ, ಕೆಎಂ ಶಂಭುನಾಥ್, ಜಯರಾಜ್, ಧೀರಜ್ ಖಾದರ್ ಬಿ,ಶಶಿಕಲಾ, ಸುಜಾತಾ, ಪುಷ್ಪ ಚಂದ್ರಶೇಖರ್ ಸಂಚಾರಿ ಪೊಲೀಸ್ ಅಧಿಕಾರಿ ಅಯ್ಯನಗೌಡ ಪಾಟೀಲ್ ಸೇರಿದಂತೆ ಇತರರಿದ್ದರು. ಈ ಜಾತದಲ್ಲಿ ನೂರಾರು ಜನ ಸ್ಕೌಟ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಗ್ರಾಹಕರ ಕುಂದು ಕೊರತೆ ಸಭೆ

ರಾಯಚೂರು : ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗ ಅಧೀಕ್ಷಕ ಅಭಿಯಂತರರು ಇವರ ಅಧ್ಯಕ್ಷತೆಯಲ್ಲಿ ಫೆಬ್ರವರಿ 10 ಬೆಳಗ್ಗೆ 10ಗೆ ಗ್ರಾಹಕರ ಕುಂದು ಕೊರತೆ ಸಂವಾದ ಸಭೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯುತ್ ಗ್ರಾಹಕರು ಹಾಜರಾಗಿ ವಿದ್ಯುತ್ ದೂರುಗಳ ಬಗ್ಗೆ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ

ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.06ರಂದು ಶ್ವಾನಗಳ ಪ್ರದರ್ಶನ

ರಾಯಚೂರು : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರಾಣಿದಯಾ ಸಂಘ,ಕೃ.ವಿ.ವಿ, ಪಶುಪಾಲನಾ ಇಲಾಖೆ ಹಾಗೂ ಕರ್ನಾಟಕ ಪಶುವೈದ್ಯಕೀಯ ಸಂಘ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನಲ್ಲಿ ಫೆ.06ರಂದು ನಗರದ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯ ಆವರಣದಲ್ಲಿ ಶ್ವಾನಗಳ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ನಾಗರಿಕರು ಹಾಗೂ ಶ್ವಾನ ಪ್ರಿಯರು ಭಾಗವಹಿಸುವಂತೆ ಕೋರಲಾಗಿದೆ.

ಈ ಪ್ರದರ್ಶನದಲ್ಲಿ ಭಾಗವಹಿಸಿದ ಎಲ್ಲಾ ಶ್ವಾನಗಳಿಗೆ ಉಚಿತವಾಗಿ ರೇಬೀಸ್ ಲಸಿಕೆಯನ್ನು ಹಾಕಲಾಗುವುದು ಎಂದು ಪಶುಪಾಲನಾ ಇಲಾಖೆ ಇಲಾಖೆಯ ಉಪನಿರ್ದೇಶಕರಾದ ಡಾ.ಪೋಮಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾರ್ಡ್ ಸಮಿತಿಗಳನ್ನು ರಚಿಸಲು ಅರ್ಜಿ ಆಹ್ವಾನ

ಕಲಬುರಗಿ: ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಾ 55 ವಾರ್ಡ್‌ಗಳಿಗೆ ವಾರ್ಡ್ ಸಮಿತಿಗಳನ್ನು ರಚಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ವಾರ್ಡ್ ಸಮಿತಿ ಸದಸ್ಯನಾಗಿ ಅರ್ಜಿ ಸಲ್ಲಿಸುವವರು, ಸಂಬಂಧಪಟ್ಟ ವಾರ್ಡ್ ವ್ಯಾಪ್ತಿಯಲ್ಲಿ ಮತದಾರನಾಗಿ ನೋಂದಾಯಿತನಾಗಿರಬೇಕು. ವಾರ್ಡ್‌ನ್ನು ಪ್ರತಿನಿಧಿಸುವಂತಹ ಮಹಾನಗರ ಪಾಲಿಕೆಯ ಸದಸ್ಯನು ವಾರ್ಡ್ ಸಮಿತಿಯ ಅಧ್ಯಕ್ಷನಾಗಿರತಕ್ಕದ್ದು. ಇತರ ಹತ್ತು ಸದಸ್ಯರು ಮಹಾನಗರ ಪಾಲಿಕೆಯಿಂದ ನಾಮ ನಿರ್ದೇಶಿತರಾಗಿರಬೇಕು.

ಕರ್ನಾಟಕ ಪೌರ ನಿಗಮಗಳ ಅಧಿನಿಯಮ–1976ರ ಕಲಂ: 13 ಎಚ್ ರನ್ವಯ ಹಾಗೂ ಸರ್ಕಾರದ ನಿರ್ದೇಶನದ ಮೇರೆಗೆ ಕಲಬುರಗಿ ಮಹಾನಗರಪಾಲಿಕೆಯ ವಾರ್ಡ್‌ಗಳಲ್ಲಿ ವಾರ್ಡ್ ಸಮಿತಿಗಳನ್ನು ರಚಿಸಬೇಕಾಗಿದೆ.

# ನರೇಗಾ ರದ್ದುಗೊಳಿಸಿ ವಿಬಿ ಜಿ ರಾಮ್ ಜಿ ಜಾರಿ ಖಂಡನೆ ಎಸ್‌ಯುಸಿಐ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**




ಕೇಂದ್ರ ಸರ್ಕಾರ ಜಾರಿ ಮಾಡಿರುವ ವಿಬಿ ಜಿ ರಾಮ್ ಜಿ ಮಸೂದೆಯನ್ನು ತಕ್ಷಣವೇ ರದ್ದುಪಡಿಸಿ, ಗ್ರಾಮೀಣ ಜನರ ಬದುಕಿಗೆ ಆಸರೆಯಾಗಿರುವ ಮಹಾತ್ಮಗಾಂಧಿ ನರೇಗಾ ಉದ್ಯೋಗ ಖಾತ್ರಿ ಯೋಜನೆಯನ್ನು ಮರು ಸ್ಥಾಪಿಸಬೇಕೆಂದು ಆಗ್ರಹಿಸಿ ಸೋಷಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ವತಿಯಿಂದ ಗುರುವಾರ ಕೊಪ್ಪಳದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಜಿಲ್ಲಾ ಮಟ್ಟದ ಪ್ರತಿಭಟನೆ ನಡೆಸಲಾಯಿತು. ಈ ವೇಳೆ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಮುಖಂಡ ಶರಣು ಗಡ್ಡಿ ಅವರು, 2005ರಲ್ಲಿ ಜಾರಿಯಾದ ನರೇಗಾ ಯೋಜನೆಯು ಗ್ರಾಮೀಣ ಜನತೆ ಉದ್ಯೋಗಕ್ಕಾಗಿ ಪಟ್ಟಣಗಳಿಗೆ ವಲಸೆ ಹೋಗುವುದನ್ನು ತಡೆಯುವಲ್ಲಿ ಮಹತ್ವದ ಪಾತ್ರ ವಹಿಸಿತ್ತು. ಆದರೆ ಈಗ ಅದೇ ಯೋಜನೆಯನ್ನು ವಿಬಿ ಜಿ ರಾಮ್ ಜಿ ಎಂಬ ಹೆಸರಿನಲ್ಲಿ ಅದರ ಮೂಲ ಸ್ವರೂಪವನ್ನೇ ಬದಲಾಯಿಸಿ ಉದ್ಯೋಗ ಖಾತ್ರಿಯನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಇದು ಗ್ರಾಮೀಣ ಬದುಕಿನ ಮೇಲೆ ನಡೆಯುತ್ತಿರುವ ಘೋರ ದಾಳಿಯಾಗಿದೆ ಎಂದು ಆರೋಪಿಸಿದರು.

ಅಗತ್ಯ ವಸ್ತುಗಳ ಬೆಲೆ ಏರಿಕೆ, ಕೃಷಿ ಉತ್ಪಾದನಾ ಸಾಮಗ್ರಿಗಳ ದುಬಾರಿ ಬೆಲೆ ಹಾಗೂ ಪ್ರಾಕೃತಿಕ ವಿಕೋಪಗಳಿಂದ ರೈತರು ಮತ್ತು ಕೃಷಿ ಕಾರ್ಮಿಕರು ತೀವ್ರ ಸಂಕಷ್ಟದಲ್ಲಿರುವ ಈ ಸಂದರ್ಭದಲ್ಲಿ ನರೇಗಾ ಯೋಜನೆಯನ್ನು ದುರ್ಬಲಗೊಳಿಸುವುದು ಸಂಪೂರ್ಣ ಜನವಿರೋಧಿ ನೀತಿಯಾಗಿದೆ ಎಂದರು. ದೇಶದ 12 ಕೋಟಿಗೂ ಅಧಿಕ ಗ್ರಾಮೀಣ ಜನತೆ ಈ ಯೋಜನೆಯ ಮೇಲೆ ಅವಲಂಬಿತರಾಗಿದ್ದು, ವಿಶೇಷವಾಗಿ ಮಹಿಳೆಯರಿಗೆ ಕನಿಷ್ಠ ಆರ್ಥಿಕ ಭದ್ರತೆ ಒದಗಿಸಿದ್ದ ನರೇಗಾ ಯೋಜನೆಯನ್ನು ರದ್ದುಪಡಿಸಿದರೆ ನಿರುದ್ಯೋಗ ಮತ್ತು ವಲಸೆ ಸಮಸ್ಯೆಗಳು ಮತ್ತಷ್ಟು ತೀವ್ರಗೊಳ್ಳಲಿವೆ ಎಂದು ಎಚ್ಚರಿಸಿದರು.

ಹೊಸ ಯೋಜನೆಯಡಿ ಕೂಲಿ ಹಣದ ಜವಾಬ್ದಾರಿಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಹಂಚಿಕೆ ಮಾಡಲಾಗಿದ್ದು, ಕೇಂದ್ರ ಸರ್ಕಾರ ಶೇಕಡಾ 60 ಹಾಗೂ ರಾಜ್ಯ ಸರ್ಕಾರ ಶೇಕಡಾ 40ರಷ್ಟು ಕೂಲಿ ಹಣ ನೀಡಬೇಕಾಗಿದೆ. ಆದರೆ ಈ ವ್ಯವಸ್ಥೆಯಿಂದ ಎರಡೂ ಸರ್ಕಾರಗಳ ನಡುವೆ ಹೊಣೆಗಾರಿಕೆ ತಳ್ಳಾಟ ಉಂಟಾಗಿ, ಕೂಲಿ ಕಾರ್ಮಿಕರ ದುಡಿಮೆಯ ಹಣವೇ ಅಪಾಯಕ್ಕೆ ಸಿಲುಕಿದೆ. ಕಾರ್ಮಿಕರು ಬೆವರು ಸುರಿಸಿ ದುಡಿದರೂ ಸಮಯಕ್ಕೆ ಕೂಲಿ ಹಣ ಸಿಗುವ ಖಾತ್ರಿ ಉಳಿದಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಇದಕ್ಕಿಂತಲೂ ಗಂಭೀರ ಸಂಗತಿಯೆಂದರೆ, ರಾಜ್ಯ ಸರ್ಕಾರ ಈಗಾಗಲೇ ಹಣಕಾಸಿನ ಕೊರತೆಯನ್ನು ಮುಂದಿಟ್ಟು ಹೆಚ್ಚುವರಿ ಹಣ ಬಿಡುಗಡೆಗೆ ಅಸಮರ್ಥತೆ ವ್ಯಕ್ತಪಡಿಸಿದೆ. ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ–ರಾಜ್ಯ ಸರ್ಕಾರಗಳ ನಡುವೆ ಹಣ ಬಿಡುಗಡೆ ವಿಳಂಬವಾದರೆ ಅದರ ಸಂಪೂರ್ಣ ಹೊರೆ ಗ್ರಾಮೀಣ ಕೂಲಿ ಕಾರ್ಮಿಕರ ಮೇಲೇ ಬೀಳಲಿದೆ. ಇದರಿಂದ ಉದ್ಯೋಗ ಖಾತ್ರಿ ಯೋಜನೆಯ ಮೂಲ ಆಶಯವೇ ಹಾಳಾಗಿ, ನಿರುದ್ಯೋಗ, ಬಡತನ ಹಾಗೂ ವಲಸೆ ಸಮಸ್ಯೆಗಳು ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆ ಇದೆ ಎಂದು ಹೇಳಿದರು.

ಪ್ರತಿಭಟನಾಕಾರರು ವಿಬಿ ಜಿ ರಾಮ್ ಜಿ ಕಾಯ್ದೆಯನ್ನು ತಕ್ಷಣವೇ ಹಿಂಪಡೆಯಬೇಕು, ನರೇಗಾ ಉದ್ಯೋಗ ಖಾತ್ರಿ ಯೋಜನೆಯನ್ನು ಮರು ಸ್ಥಾಪಿಸಬೇಕು ಹಾಗೂ ಗ್ರಾಮೀಣ ಕೂಲಿ ಕಾರ್ಮಿಕರಿಗೆ ವಾರ್ಷಿಕ 200 ದಿನಗಳ ಉದ್ಯೋಗ ಒದಗಿಸಿ ದಿನಗೂಲಿ 600 ರೂ ನಿಗದಿಪಡಿಸಬೇಕು ಎಂದು ಆಗ್ರಹಿಸಿದರು. ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಗ್ರಾಮೀಣ ಬದುಕಿನ ರಕ್ಷಣೆಗೆ ಫೆಬ್ರವರಿ 12ರಂದು, ಗುರುವಾರ ನಡೆಯಲಿರುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರವನ್ನು ಬೃಹತ್ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಶರಣು ಪಾಟೀಲ್, ಶಾರದಾಗಡ್ಡಿ, ಮಂಗಳೇಶ್ ರಾಥೋಡ್, ದ್ಯಾಮಣ್ಣ ಡೊಳ್ಳಿನ, ಈರಪ್ಪ, ಲಕ್ಷ್ಮಣ, ಮುದಿಯಪ್ಪ, ಮಂಜುನಾಥ, ಸತ್ಯನಾರಾಯಣ ಸೇರಿದಂತೆ ಅನೇಕ ಪಕ್ಷದ ಕಾರ್ಯಕರ್ತರು ಹಾಗೂ ಗ್ರಾಮೀಣ ಕೂಲಿ ಕಾರ್ಮಿಕರು ಭಾಗವಹಿಸಿದ್ದರು.

# ಅಲ್ಬರ್ಟ ಜಾನ್ ಕಾಣೆ: ಪತ್ತೆಗೆ ನೇತಾಜಿ ನಗರ ಪೊಲೀಸರ ಮನವಿ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**



ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಲಕ್ಷ್ಮಣ ಲೇಔಟ್ ನಿವಾಸಿಯಾದ ಅಲ್ಬರ್ಟ ಜಾನ್ ತಂದೆ ಜಾನ್ ಬಾಸ್ಕರ್ (41) ಎಂಬ ಯುವಕ ಜನವರಿ 08ರ ಬೆಳಿಗ್ಗೆ 05 ಗಂಟೆಯ ಸುಮಾರಿಗೆ ಟಿಫಿನ್ ತೆಗೆದುಕೊಂಡು ಬರುತ್ತೇನೆ ಅಂತಾ ಹೇಳಿ ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಠಾಣೆಯಲ್ಲಿ ಅಪರಾಧ ಸಂಖ್ಯೆ:04/2026 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಚಹರೆ ಪಟ್ಟಿ: ವಯಸ್ಸು: 41, 5.6 ಫೀಟ್ ಎತ್ತರ, ದುಂಡು ಮುಖ, ಸಧೃದ ಮೈ ಕಟ್ಟು, ಸಾದ ಕೆಂಪು ಮೈ ಬಣ್ಣ, ತಲೆಯಲ್ಲಿ ಕಪ್ಪು ಬಣ್ಣದ ಕೂದಲು, ಕುರುಚಲ ಗಡ್ಡ, ಬಲಗಡೆ ಕಪ್ಪು ಬಣ್ಣದ ನರ್ಲೇ, ಗಾಢಕಂದು ಬಣ್ಣದ ಪ್ಯಾಂಟ್, ತಿಳಿ ಹಸಿರು ಬಣ್ಣದ ತುಂಬು ತೋಳಿನ ಶರ್ಟ ಧರಿಸಲಾಗಿದ್ದು, ತೆಲುಗು, ಹಿಂದಿ, ಇಂಗ್ಲೀಷ ಹಾಗೂ ಕನ್ನಡ ಭಾಷೆ ಮಾತನಾಡುತ್ತಾರೆ.

ಈ ಚಹರೆವುಳ್ಳ ಮನುಷ್ಯ ಕಂಡಲ್ಲಿ ಮತ್ತು ಸುಳಿವು ಸಿಕ್ಕಲ್ಲಿ ನೇತಾಜಿ ನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532–240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂ: 08532–235635, 08532–235100, 9480803800 ಅಥವಾ ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803846, ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803831ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುರುಮಠಕಲ್ ಪಟ್ಟಣದಲ್ಲಿ ಹಿಂದೂ ಸಮ್ಮೇಳನ ಬೃಹತ್ ಶೋಭಾಯಾತ್ರೆ

• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್:**



ಹಿಂದೂಧರ್ಮದ ಏಕತೆ, ಸಂಸ್ಕೃತಿ ಉಳಿವು ಮತ್ತು ಎಲ್ಲರಲ್ಲೂ ದೇಶ ಧರ್ಮದ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ನಾಳೆ ಜನವರಿ 31 ಶನಿವಾರದಂದು ಅದ್ದೂರಿಯಾಗಿ ಹಿಂದೂ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಪನ್ನಾಲಾಲ್ ಪಟೇಲ್ ಹೇಳಿದರು.

ಗುರುಮಠಕಲ್: ಹಿಂದೂ ಸಮಾಜವು ಕೇವಲ ಧರ್ಮವಲ್ಲದೆ ಸಮಾಜದ ಏಕತೆ, ಸಂಸ್ಕೃತಿ ಉಳಿವು ಮತ್ತು ಎಲ್ಲರಲ್ಲೂ ದೇಶ ಭಕ್ತಿ ಮತ್ತು ಧರ್ಮದ ಕುರಿತಾದ ಜಾಗೃತ ಮನೋಭಾವ ಮೂಡಿಸುವ. ಅಲ್ಲದೆ ಭಾರತದ ಅಖಂಡತೆ ಕಾಪಾಡುವ ನಿಟ್ಟಿನಲ್ಲಿ ನಾಳೆ ಜನವರಿ 31 ಶನಿವಾರದಂದು ಅದ್ದೂ–ರಿಯಾಗಿ ಹಿಂದೂ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಗುರುಮಠಕಲ್ ತಾಲ್ಲೂಕು ಹಿಂದೂ ಸಮ್ಮೇಳನ ಆಯೋಜನೆ ಸಮಿತಿ ಅಧ್ಯಕ್ಷ ಪನ್ನಾಲಾಲ್ ಪಟೇಲ್ ಪತ್ರಿಕಾ ಗೋಷ್ಠಿಯಲ್ಲಿ ಕರಪತ್ರ ಬಿಡಿಗಡೆ ಮಾಡಿ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಮ್ಮೇಳನದ ಶೋಭಾಯಾತ್ರೆ ಮಧ್ಯಾಹ್ನ 3ಗಂಟೆಗೆ ನಗರೇಶ್ವರ ದೇವಸ್ಥಾನದಿಂದ ಭವ್ಯವಾಗಿ ಪ್ರಾರಂಭ ವಾಗುವುದು. ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಪ್ರದರ್ಶನಗಳು, ಡೊಳ್ಳು ಕುಣಿತ ಹಾಗೂ ವಾದ್ಯಗಳ ಮೂಲಕ ಭಾರತ ಮಾತೆಯ ಭಾವಚಿತ್ರ ಮತ್ತು ವಿವಿಧ ಮಹಾ ಪುರುಷರ ಭಾವಚಿತ್ರಗಳ ಕಟೌಟಗಳನ್ನು ಪ್ರದರ್ಶಿಸಲಾಗುವುದು. ಈ ಮೆರವಣಿಗೆಯಲ್ಲಿ ಮಠಾಧೀಶರು, ಗಣ್ಯರು, ಊರಿನ ಸಾರ್ವಜನಿಕರು, ಮಹಿಳೆಯರು ಮಕ್ಕಳು ಪಾಲ್ಗೊಳ್ಳಲಿದ್ದು, ರಾಮನಗರದಲ್ಲಿ ಸಾಯಂಕಾಲ 5 ಗಂಟೆಗೆ ಶೋಭಾಯಾತ್ರೆ ಸಮಾಪ್ತಿಗೊಳ್ಳುವುದು ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ಮಲ್ಲಿಕಾರ್ಜುನ ಸ್ವಾಮಿ ಗುರುಗಳು, ಜಗದ್ಗಿರಿ ಬೆಟ್ಟ ವಹಿಸಲಿದ್ದು, ವಿಶೇಷ ಉಪನ್ಯಾಸ ನೀಡಲು ವಕ್ತಾರರಾಗಿ ಮಲ್ಲಿಕಾರ್ಜುನ ಬಾಳಿಕಾಯಿ ಅಗಮಿಸುತ್ತಿದ್ದಾರೆ ಹಾಗೂ ವಿವಿಧ ಸಮಾಜ ಮುಖಂಡರು, ಹಿಂದೂ ಹಿತೈಷಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ ಎಂದು ಸಮಿತಿ ಉಪಾಧ್ಯಕ್ಷರಾದ ಪಂಡರಿ ದೊಡ್ಲಾ ಹೇಳಿದರು.

ಮುಂದುವರೆಸಿ ಈ ಸಮ್ಮೇಳನದ ಶೋಭಾಯಾತ್ರೆಯಲ್ಲಿ ಸುಮಾರು 2 ಸಾವಿರ ಜನರು ಸೇರುವ ನೀರೀಕ್ಷೆ ಇದ್ದು ಎಲ್ಲರಿಗೂ ಪ್ರಸಾದ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮದ ಪ್ರಮುಖ ಬಸಪ್ಪ ಸಂಜನೋಳ, ಸಂಚಾಲಕ ಶ್ರೀನಿವಾಸ ಯಾದವ್, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಹಿರೇಮಠ, ಗುರುರಾಜ್ ಜೋಶಿ, ವಿವಿಧ ಸಮಾಜ ಮುಖಂಡರಾದ ರಾಜ ರಮೇಶ್ ಗೌಡ, ಶಿವಾನಂದ ಬೂದಿ, ಕೆ.ದೇವದಾಸ, ಸತ್ಯನಾರಾಯಣ ತಿವಾರಿ, ಭೀಮಶಪ್ಪ ಗುಡಿಸೆ, ಮೋಹನ್ ಬುರಬುರೆ, ಅಶೋಕ್ ಶನಿವಾರಂ, ಕಿಶೋರ್ ಢಗೆ, ಪ್ರವೀಣ ಪಟೇಲ್, ನಾರಾಯಣ ಮಜ್ಜಿಗೆ ಇನ್ನಿತರರು ಹಾಜರಿದ್ದರು.

# ಯುವ ಸಮುದಾಯ ಉದ್ಯಮ ಆರಂಭಿಸಲು ಮುಂದಾಗಬೇಕು: ಸೋಮಶೇಖರ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಯುವ ಸಮುದಾಯ ಸರ್ಕಾರದ ಯೋಜನೆಗಳನ್ನು ಪಡೆದುಕೊಂಡು ಉದ್ಯಮ ಆರಂಭಿಸುವಂತರಾಗಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ ಅವರು ಹೇಳಿದರು.

ಗುರುವಾರ, ನಗರದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ಆವರಣದಲ್ಲಿ ಪ್ರಧಾನಮಂತ್ರಿಗಳ ಉದ್ಯೋಗ ಸೃಷ್ಟಿ ಕಾರ್ಯಕ್ರಮದಡಿ ಹಮ್ಮಿಕೊಂಡಿದ್ದ 10 ದಿನಗಳ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಾಳ್ಮೆ, ಆತ್ಮವಿಶ್ವಾಸ, ಧೈರ್ಯದಿಂದ ಹೊಸ ಉದ್ಯೋಗಗಳನ್ನು ಪ್ರಾರಂಭಿಸುವ ಮೂಲಕ ಆರ್ಥಿಕವಾಗಿ ಬೆಳೆಯಬೇಕು. ಬಳಿಕ ಇತರರಿಗೂ ಉದ್ಯೋಗ ನೀಡಲು ಮುಂದಾಗಬೇಕು ಎಂದು ಮಾರ್ಗದರ್ಶನ ನೀಡಿದರು.

ಕೆನರಾ ಬ್ಯಾಂಕ್ ನ ವ್ಯವಸ್ಥಾಪಕ ಶ್ಯಾಮ್ ಅವರು ಮಾತನಾಡಿ, ಒಂದು ಉದ್ಯಮ ಸ್ಥಾಪಿಸಲು ಸಾಲ ಪಡೆದು-ಕೊಂಡು ಸರಿಯಾಗಿ ಮರುಪಾವತಿ ಮಾಡಿದರೆ ಇನ್ನೂ ಹೆಚ್ಚಿನ ಸಾಲ ಪಡೆದುಕೊಳ್ಳಲು ಅವಕಾಶವಿರುತ್ತದೆ ಎಂದು ತಿಳಿಸಿದರು

ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕ ರಾಜೇಸಾಬ್ ಎಚ್ ಎರಿಮನಿ ಅವರು ಮಾತನಾಡಿ, ಕಾರ್ಯಕ್ಷೇತ್ರದಲ್ಲಿ ಪರಿಪೂರ್ಣತೆಯಿಂದ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಕೆಎಸ್ಐಡಿಸಿ ಎಜಿಎಂ ಮಲ್ಲಿಕಾರ್ಜುನ, ಸಂಸ್ಥೆಯ ಉಪನ್ಯಾಸಕರಾದ ಜಡೇಶ, ದಿನೇಶ ಕುಮಾರ, ಸಿದ್ದಲಿಂಗಮ್ಮ, ಸಂತೋಷ ಕುಮಾರ, ಪರಮೇಶ ಹಾಗೂ ಯಶಸ್ವಿ ಉದ್ಯಮಿಗಳು ಮತ್ತು 30 ಜನ ಶಿಬಿರಾರ್ಥಿಗಳು ಇದ್ದರು.

# ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಫೆ.01 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರಾದ ಈ.ತುಕರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯ ಸಭೆ ಸಂಸದ ಡಾ.ಸೈಯದ್ ನಾಸೀರ್ ಹುಸೇನ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಕಂಪ್ಲಿ ಶಾಸಕ ಜೆ.ಎನ್.ಗಣೇಶ್, ಸಿರುಗುಪ್ಪ ಶಾಸಕ ಬಿ.ಎಂ ನಾಗರಾಜ್, ಸಂಡೂರು ಶಾಸಕ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟಿಲ, ಶಶೀಲ್ ಜಿ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್, ಮಹಾಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನಿರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ ಣ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾದಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಎನ್. ಧನುಂಜಯ ಹಮಲ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕುರುಗೋಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ತಿಪ್ಪೇರುದ್ರ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ದೊಡ್ಡಯ್ಯ ವಿ.ಕಲ್ಲೂರು ತಂಡದಿಂದ ವಚನ ಸಂಗೀತ ಕಾರ್ಯಕ್ರಮ ಇರಲಿದೆ.

ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ ಪೆನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಮಂಜುನಾಥ್ ಪಿ.ಎಸ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್ ಅವರು ತಿಳಿಸಿದ್ದಾರೆ.

# ಚರ್ಚಾಸ್ಪರ್ಧೆ ಪ್ರೊ.ಜೋಸ್ ಅಭಿಪ್ರಾಯ ವೈಯಕ್ತಿಕ ಮಾಹಿತಿ ಸಂರಕ್ಷಣೆ ಸವಾಲು



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಇಂದಿನ ತಂತ್ರಜ್ಞಾನ ಯುಗದಲ್ಲಿ ವೈಯಕ್ತಿಕ ಮಾಹಿತಿಯನ್ನು ಸಂರಕ್ಷಿಸಿಕೊಳ್ಳುವುದು ದೊಡ್ಡ ಸವಾಲಾಗಿ ಪರಿಣಮಿಸಿದೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಇಂಗ್ಲೀಷ್ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ರಾಬರ್ಟ್ ಜೋಸ್ ಅವರು ಹೇಳಿದರು.

ಗುರುವಾರ, ವಿವಿ ಯ ಡಾ.ಬಿ.ಆರ್ ಅಂಬೇಡ್ಕರ್ ಸಭಾಂಗಣದಲ್ಲಿ ವಿವಿಯ ಆಂತರಿಕ ದೂರು ಸಮಿತಿ (ಐಸಿಸಿ) ಯಿಂದ ಆಯೋಜಿಸಿದ್ದ ಚರ್ಚಾಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಐ ತಂತ್ರಜ್ಞಾನದ ಮೂಲಕ ಅನೇಕ ತೊಂದರೆ ಅನುಭವಿಸುವ ಪರಿಸ್ಥಿತಿ ಮಾನವನಿಗೆ ಎದುರಾಗಿದೆ. ಸ್ತ್ರೀ ಸಮಾನತೆಯಿಂದ ಇಂದು ಮಹಿಳೆಯರು ಹಲವಾರು ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿದ್ದಾರೆ. ಪ್ರಸ್ತುತವಾಗಿ ಪುರುಷ ಕ್ರಾಂತಿ ಆಗಬೇಕಿದೆ ಎಂದು ಅಭಿಪ್ರಾಯಪಟ್ಟರು.

ವಿವಿಯ ರಸಾಯನಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ.ಅರುಣ್ ಕುಮಾರ ಲಗಶೆಟ್ಟಿ ಅವರು ಮಾತನಾಡಿ, ದೇಶದಲ್ಲಿ ಮಹಿಳಾ ಕಾನೂನುಗಳು ಬಲಿಷ್ಠವಾಗಿದ್ದು, ಸಮಾಜದಲ್ಲಿ ಮಹಿಳೆಯರನ್ನು ಗೌರವಿಸುವ ಮನೋಭಾವನೆ ಬೆಳೆಸಿಕೊಳ್ಳುವ ಅಗತ್ಯತೆ ಇದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕರು ಮತ್ತು ಐಸಿಸಿ ನಿರ್ದೇಶಕರಾದ ಪ್ರೊ.ಗೌರಿ ಮಾಣಿಕ್ ಮಾನಸ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ 'ಸೈಬರ್ ಭದ್ರತಾ ವ್ಯವಸ್ಥೆಗಳು ಸೇವಾ ಸ್ಥಳದಲ್ಲಿ ಪೋಶ್ ಕಾಯ್ದೆಯ ಅನುಷ್ಠಾನ ಮತ್ತು ಬಲಪಡಿಸುವಿಕೆಯಲ್ಲಿ ಪರಿಣಾಮಕಾರಿಯಾಗಿವೆಯೆ?" ಎಂಬ ವಿಷಯದ ಕುರಿತು ಚರ್ಚಾಸ್ಪರ್ಧೆ ಜರುಗಿತು.

ಲೈಂಗಿಕ ಕಿರುಕುಳ ತಡೆಗಟ್ಟುವಿಕೆ ಕುರಿತು ಪ್ರಮಾಣವಚನವನ್ನು ಪ್ರೊ.ಮೇಧಾವಿನಿ ಕಟ್ಟಿ ಅವರು ಬೋಧಿಸಿದರು.

ಕಾರ್ಯಕ್ರಮದಲ್ಲಿ ತೀರ್ಪುಗಾರರಾಗಿ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಉದಯಕುಮಾರ್ ಖಡ್ಕೆ ವೇದಿಕೆಯಲ್ಲಿದ್ದರು. ವಿಶ್ವವಿದ್ಯಾಲಯದ ವಿವಿಧ ನಿಕಾಯಗಳ ಡೀನರು, ಮುಖ್ಯಸ್ಥರುಗಳು, ಬೋಧಕ-ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕುರೇಕುಪ್ಪ ಪುರಸಭೆ ವತಿಯಿಂದ ಎಸ್‌ಸಿಎಸ್‌ಪಿ ಯೋಜನೆಯಡಿ 2019-2020 ನೇ ಸಾಲಿನ ಬಾಕಿ ಉಳಿದ ಮೊತ್ತದಲ್ಲಿ ಪಕ್ಕಾ ಮನೆ ನಿರ್ಮಾಣ, ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ಬೇಕಾದ ದಾಖಲೆ:**

ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಇತ್ತೀಚಿನ ಭಾವಚಿತ್ರ, ಮನೆ/ನಿವೇಶನಕ್ಕೆ ಸಂಬಂಧಿಸಿದ ತೆರಿಗೆ ರಶೀದಿ, ನಮೂನೆ-03, ಹಕ್ಕು ಪತ್ರ, ನೋಂದಾಯಿತ ದಾಖಲೆ ಪತ್ರಗಳ ಜೆರಾಕ್ಸ್ ಪ್ರತಿ ಅರ್ಜಿಯೊಂದಿಗೆ ಲಗತ್ತಿಸಬೇಕು. ಅರ್ಜಿ ಸಲ್ಲಿಸಲು ಫೆ.18 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಾರ್ಯಾಲಯ ಅಥವಾ ದೂ.08395-295601 ಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಚ್ಛತಾ ದಿನಾಚರಣೆ

ಬಳ್ಳಾರಿ:ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜ.30 ರಂದು ಬೆಳಿಗ್ಗೆ 07.30 ಗಂಟಗೆ ನಗರದ ತಾಳೂರು ರಸ್ತೆಯ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಮಹಾತ್ಮಾ ಗಾಂಧೀಜಿ ಹುತಾತ್ಮ ದಿನಾಚರಣೆ



• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ:**

ಮಹಾತ್ಮಾ ಗಾಂಧೀಜಿ ಹುತಾತ್ಮರಾದ ಇಂದು ಜ.30 ರಂದು ಸೌಹಾರ್ದ ಸಂಕಲ್ಪ ದಿನವನ್ನಾಗಿ ಆಚರಿಸಲು ಬೆಳಿಗ್ಗೆ 11 ಗಂಟೆಗೆ ಸತ್ಯಾಗ್ರಹ ಸ್ಮಾರಕ ಭವನದ ಗಾಂಧಿ ಪ್ರತಿಮೆ ಎದುರು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶಾಂತಾರಾಮ ನಾಯಕ ತಿಳಿಸಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಜಿಲ್ಲಾ ಪ್ರವಾಸ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಜ.31 ರಂದು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಜ.31 ರಂದು ಬೆಳಿಗ್ಗೆ 09 ರಿಂದ 11 ಗಂಟೆಯವರೆಗೆ ಸಂಡೂರು ಪಟ್ಟಣದ ಗುರುಭವನದಲ್ಲಿ ಸಂಡೂರು ತಾಲ್ಲೂಕಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲಾ ಮಕ್ಕಳೊಂದಿಗೆ ಸಂವಾದ ನಡೆಸುವರು.ಅದೇ ದಿನ ಬಳ್ಳಾರಿ ನಗರಕ್ಕೆ ಆಗಮಿಸಿ, ಮಧ್ಯಾಹ್ನ 01 ರಿಂದ 03 ಗಂಟೆಯವರೆಗೆ ಜಿಲ್ಲಾ ಪಂಚಾಯತ್ ನ ಹಳೆಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶಾಲಾ ಮಕ್ಕಳು, ಪೋಷಕರು ಹಾಗೂ ಶಾಲಾಭಿವೃದ್ಧಿ, ಮೇಲುಸ್ತುವಾರಿ ಸಮಿತಿಯ ಸದಸ್ಯರೊಂದಿಗೆ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಭಾಗವಹಿಸುವರು.ಬಳಿಕ ಮಧ್ಯಾಹ್ನ 03 ರಿಂದ ಸಂಜೆ 04 ಗಂಟೆಯ ವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಗರ್ಭಧಾರಣಾ ಪೂರ್ವ ಮತ್ತು ಪ್ರಸವ ಪೂರ್ವ ಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆಯ ನಿಷೇಧ) ಅಧಿನಿಯಮ-1994 ರ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸುವರು.

ಸಂಜೆ 04 ರಿಂದ 05 ಗಂಟೆಯವರೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕದ ಕಾರ್ಯ ವೈಖರಿಗಳ ಕುರಿತು ಪ್ರಗರಿ ಪರಿಶೀಲನಾ ಸಭೆ ನಡೆಸುವರು.

ಬಳಿಕ ವಾಸ್ತವ್ಯ ಮಾಡುವರು.

ಫೆ.01 ರಂದು ವಿಜಯನಗರ ಜಿಲ್ಲೆಗೆ ಪ್ರಯಾಣಿಸುವರು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಕಾರ್ಯದರ್ಶಿ ತಿಳಿಸಿದ್ದಾರೆ.

# ಇಎಸ್‌ಐಸಿ: ಜ.31 ರ ವರೆಗೆ ನೋಂದಣಿಗೆ ಅವಕಾಶ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆಯಡಿ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾಯಿಕೊಳ್ಳಲು ಜ.31 ರ ವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಕಲಬುರಗಿ ಪ್ರಾದೇಶಿಕ ಕಚೇರಿಯ ಜಂಟಿ ನಿರ್ದೇಶಕ ಯುವರಾಜ ಎಸ್.ವಿ ಅವರು ತಿಳಿಸಿದ್ದಾರೆ.

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆಯು ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ಇದರಡಿ ನೋಂದಾಯಿಸಿಕೊಳ್ಳಲು 31ನೇ ಡಿಸೆಂಬರ್ 2025 ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಇ ಅಡಿ ಇನ್ನು ನೋಂದಣಿಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಇರುವ ಅವಧಿಯನ್ನು ಜ.31 ರ ವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಈ ಯೋಜನೆಯಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಂ-ು ಬೇಡಿಕೆಯಿಲ್ಲದೆ ನೋಂದಣಿಗೆ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ.

ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೇ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರು ಇಎಸ್‌ಐ ಕಾಯ್ದೆಯಡಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಚೇತನ್ ಕ್ರೀಡಾಪಟು ಅಪೂರ್ವ ಸಾಧನೆ



• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ ಹೊಸಪೇಟೆ:**

5 ನೇ ರಾಷ್ಟ್ರೀಯ ಪ್ಯಾರಾ ಥ್ರೋಬಾಲ್ ಪಂದ್ಯಾವಳಿಯಲ್ಲಿ ರಾಷ್ಟ್ರೀಯ ಚಾಂಪಿಯನ್ ಆಗಿ ಹೊರಹೊಮ್ಮಿದ ತಂಡದ ಆಟಗಾರರಾದ ಪಿ.ಸಿ ಶಾಂತ ಅವರು ಮೈಸೂರಿನ ಸಂತ ಫಿಲೋಮಿನಾ ಕಾಲೇಜು ನಡೆದ ದಿ.24, 25, 26 ಜನವರಿ 2026 ವಿಕಲಚೇತನರ ಕೂಟದ ಅಡಿಯಲ್ಲಿ 5ನೇ ರಾಷ್ಟ್ರೀಯ ಪ್ಯಾರಾ ಥ್ರೋಬಾಲ್ ಪಂದ್ಯಾವಳಿಯಲ್ಲಿ ತಾಲೂಕಿನ ಹನುಮನಹಳ್ಳಿ ಗ್ರಾಮದ ಪಿ.ಸಿ ಶಾಂತ ಕರ್ನಾಟಕ ತಂಡ ಚಾಂಪಿಯನ್ ಆಗಿದ್ದು, ಪ್ರಥಮ ಸ್ಥಾನ ಪಡೆಯುವ ಮೂಲಕ ವಿಜಯನಗರ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ.

ಪ್ರತಿಭೆಗಳಿಗೆ ಆರ್ಥಿಕ ಸಂಕಷ್ಟ; 2026ರಲ್ಲಿ ಮೈಸೂರಿನಲ್ಲಿ ನಡೆದ 5ನೇ ರಾಷ್ಟ್ರೀಯ ಪ್ಯಾರಾ ಥ್ರೋಬಾಲ್ ಚಾಂಪಿಯನ್ ಶಿಪ್ನಲ್ಲಿ ಬೆಳ್ಳಿ ಪದಕ ವಿಜೇತ ತಂಡದಲ್ಲಿ ಇವರೆಲ್ಲಾ ಆಡಿದ್ದರು ಅಂತಾರಾಷ್ಟ್ರೀಯ ಮಟ್ಟದ ಥ್ರೋಬಾಲ್ ಚಾಂಪಿಯನ್ ಶಿಪ್ನಲ್ಲೂ ಚಾಂಪಿಯನ್ ಆಗುವ ಹುಮ್ಮಸ್ಸಿನಲ್ಲಿದ್ದಾರೆ. ಆದರೆ, ಅಂತರ ರಾಷ್ಟ್ರೀಯ ತೆರಳಲು ಇವರಿಗೆ ಆರ್ಥಿಕ ಸಂಕಷ್ಟ ಎದುರಾಗಿದೆ. ದಾನಿಗಳು ನೆರವು ನಮಗೆ ಬೇಕಿದೆ ಎಂದು ಕೇಳಿಕೊಂಡಿದ್ದಾರೆ.

ನಮಗೂ ಸಾಧಿಸುವ ಛಲ ಇದೆ; ತಂಡದ ಕ್ರೀಡಾಪಟು ಆದ ಪಿ ಸಿ ಶಾಂತ ಪತ್ರಕರ್ತ

ರೊಂದಿಗೆ ಜೊತೆ ಮಾತನಾಡಿ, ಎಲ್ಲ ಆಟಗಾರರು ನಾವು ಬಡತನದ ಪರಿಸ್ಥಿತಿಯಲ್ಲಿದ್ದೇವೆ. ಸಾಮಾನ್ಯ ಆಟಗಾರರಿಗೆ ಸರ್ಕಾರ ಸಾಕಷ್ಟು ಸಹಕಾರ ನೀಡುತ್ತದೆ. ಕ್ರಿಕೆಟ್ ಆಟಗಾರರಿಗೆ ಕೋಟ್ಯಂತರ ರೂ. ವ್ಯಯಿಸುತ್ತಾರೆ. ವಿಕಲಚೇತನರು ಎಂದರೆ ಯಾಕೋ ಬೇರೆ ರೀತಿ ನೋಡಲಾಗುತ್ತಿದೆ. ನಮ್ಮಲ್ಲೂ ಸಾಧನೆ ಮಾಡುವ ಹಂಬಲ, ದೇಶಕ್ಕೆ ಕೀರ್ತಿ ತರುವ ಛಲವಿದೆ. ದಯವಿಟ್ಟು ನಮಗೆ ಸಹಾಯ ಮಾಡುವಂತೆ ಕೇಳಿಕೊಂಡರು.

# ಮುಟ್ಟಿನ ಕುರಿತು ಮುಕ್ತ ಮಾತು ಮಕ್ಕಳಿಗೆ ಅರಿವು ಸ್ವಚ್ಛತೆ ತರಬೇತಿ



• **ಮಲ್ಲಮ್ಮ ನುಡಿ ವಾರ್ತೆ ಕುಕನೂರು:**

ತಾಲೂಕಿನ ಹಿರೇಬಿಡನಾಳ ಹಾಗೂ ಚಿಕ್ಕಬಿಡನಾಳ ಗ್ರಾಮಗಳಲ್ಲಿ ಇಕೊ ಫೌಂಡೇಶನ್ ಫಾರ್ ಸಸ್ಟೇನಬಲ್ ಅಲ್ಟರ್ನೇಟಿವ್ಸ್ ಸಂಸ್ಥೆಯ ವತಿಯಿಂದ ಮಕ್ಕಳಿಗೆ ಜೀವನ ಕೌಶಲ್ಯ ಕಾರ್ಯಕ್ರಮದ ಭಾಗವಾಗಿ ಹೆಣ್ಣುಮಕ್ಕಳ ಮುಟ್ಟಿನ ಸ್ವಚ್ಛತೆ ಹಾಗೂ ಅರಿವು ಕುರಿತು ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾದ ಶೀಲಾ ಹಾಲಕುರಿಕೆ ಹಾಗೂ ಭಾರತಿ ಗುಡ್ಲಾನೂರ ಅವರು "ಘನತೆಯಿಂದ ಮುಟ್ಟಾಗೋಣ" ಎಂಬ ಘೋಷವಾಕ್ಯದೊಂದಿಗೆ ಚಾಲನೆ ನೀಡಿದರು. ಮುಟ್ಟಾಗುವುದು ಅಸಹ್ಯ ಅಥವಾ ಮೈಲಿಗೆಯಲ್ಲ, ಅದು ಪ್ರತಿಯೊಬ್ಬ ಹೆಣ್ಣುಮಗುವಿನ ಸಹಜ ಜೈವಿಕ ಪ್ರಕ್ರಿಯೆಯಾಗಿದೆ ಎಂದು ವಿವರಿಸಿದರು. ಮುಟ್ಟಿನ ಕುರಿತು ಮುಜುಗರ ಪಡದೆ, ಭಯವಿಲ್ಲದೆ, ಮುಕ್ತವಾಗಿ ಮಾತನಾಡುವ ಮನೋಭಾವ ಮಕ್ಕಳಲ್ಲಿ ಬೆಳೆಸಬೇಕಿದೆ ಎಂದು ಹೇಳಿದರು.

ಮುಟ್ಟಿನ ಸಮಯದಲ್ಲಿ ನೋವು ಹಾಗೂ ಆರೋಗ್ಯ ಸಮಸ್ಯೆಗಳಿದ್ದರೂ ಹೇಳಿಕೊಳ್ಳಲಾಗದೆ ಅನೇಕ ಹೆಣ್ಣುಮಕ್ಕಳು ಸಮಾಜದ ನಕಾರಾತ್ಮಕ ದೃಷ್ಟಿಕೋನಕ್ಕೆ ಒಳಗಾಗುತ್ತಿರುವುದು ಆತಂಕಕಾರಿ ಸಂಗತಿ ಎಂದು ಅವರು ತಿಳಿಸಿದರು. ಇದರ ಪರಿಣಾಮವಾಗಿ ಕೆಲ ಹೆಣ್ಣುಮಕ್ಕಳು ಶಿಕ್ಷಣದಿಂದಲೂ ವಂಚಿತರಾಗುತ್ತಿರುವುದು ಗಮನಾರ್ಹವಾಗಿದ್ದು, ಮುಟ್ಟಿನ ಸಮಸ್ಯೆಗಳನ್ನು ಮುಚ್ಚಿಡದೆ ಮುಕ್ತವಾಗಿ ಹಂಚಿಕೊಳ್ಳುವ ಸಂಸ್ಕೃತಿ ಬೆಳೆಸಬೇಕೆಂದು ಸಲಹೆ ನೀಡಿದರು.

# ಸಂವಿಧಾನ ಜಾಗೃತಿ ಸಮಾವೇಶಕ್ಕೆ ಅನುಮತಿ ನೀಡಬೇಡಿ : ವೆಂಕಟೇಶ್ ಮನವಿ




• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಭೀಮ್ ಆರ್ಮಿ ಸಂಘಟನೆಯ ಪದಾಧಿಕಾರಿ ಎಂದು ಹೇಳಿಕೊಂಡು ರಘು ಎನ್ನುವರು ಭೀಮ ಆರ್ಮಿ ಸಂಘಟನೆಯಿಂದ ಉಚ್ಚಾಟಿತರಾದವರು ಅವರು ಸಂಘಟನೆಯ ಹೆಸರನ್ನು ಹೇಳಿಕೊಂಡು ಯಾವುದೇ ಕಾರ್ಯಕ್ರಮವನ್ನು ಸಮಾವೇಶವನ್ನು ಸಭೆಯನ್ನು ನಡೆಸುವಂತಿಲ್ಲ, ಅವರು ಕೈಗೊಳ್ಳುವ ಯಾವುದೇ ಕಾರ್ಯಕ್ರಮಕ್ಕೂ ಭೀಮ್ ಆರ್ಮಿ ಸಂಘಟನೆ ಜಿಲ್ಲೆ ಮತ್ತು ರಾಜ್ಯ ಘಟಕದ ಪದಾಧಿಕಾರಿಗಳ ಸಹಮತ ಇರುವುದಿಲ್ಲ ಅವರು ನಾಳೆ ನಗರದ ಬುಡ ಕಚೇರಿ ಹತ್ತಿರದ ಕೆಇಬಿ ಫಂಕ್ಷನ್

ಹಾಲ್‌ನಲ್ಲಿ ನಡೆಸಲು ಉದ್ದೇಶಿಸಿರುವ ರಾಜ್ಯಮಟ್ಟದ ಸಂವಿಧಾನ ಜಾಗೃತಿ ಸಮಾವೇಶಕ್ಕೆ ನೀಡಿರುವ ಅನುಮತಿಯನ್ನು ರದ್ದುಪಡಿಸಬೇಕೆಂದು ಭೀಮ್ ಆರ್ಮಿ ಸಂಘಟನೆಯ ಜಿಲ್ಲಾ ಅಧ್ಯಕ್ಷ ಕೆ.ವೆಂಕಟೇಶ್ ಒತ್ತಾಯಿಸಿದರು. ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಈ ಕುರಿತು ಪತ್ರಿಕಾಗೋಷ್ಠಿಯನ್ನು ನಡೆಸಿ ಮಾತನಾಡಿ ಭೀಮ್ ಆರ್ಮಿ ಎಂಬ ಹೆಸರಿನಲ್ಲಿ ಆಯೋಜಿಸಲಾಗಿರುವ ಈ ಕಾರ್ಯಕ್ರಮಕ್ಕೆ ಸಂಘಟನೆಯ ರಾಜ್ಯ ಅಧ್ಯಕ್ಷರು ಹಾಗೂ ಜಿಲ್ಲಾ ಅಧ್ಯಕ್ಷರಿಂದ ಯಾವುದೇ ಅನುಮತಿ ಅಥವಾ

ಸಮಾಲೋಚನೆ ನಡೆಸಲಾಗಿಲ್ಲ. ಕಾರ್ಯಕ್ರಮವನ್ನು ಆಯೋಜಿಸುತ್ತಿರುವವರು ಭೀಮ್ ಆರ್ಮಿಗೆ ಸಂಬಂಧಿಸದ ಕೆಲವರು ಸಂಘಟನೆಯ ಹೆಸರು ಮತ್ತು ಪದಾಧಿಕಾರಿಗಳ ಹೆಸರನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ,

ಈ ಬೆಳವಣಿಗೆಯಿಂದ ರಾಜ್ಯದ ವಿವಿಧ ಜಿಲ್ಲೆಗಳ ಭೀಮ್ ಆರ್ಮಿ ಪದಾಧಿಕಾರಿಗಳು ಮತ್ತು ಕಾರ್ಯಕರ್ತರಲ್ಲಿ ತೀವ್ರ ಅಸಮಾಧಾನ ಉಂಟಾಗಿದ್ದು, ಕಾರ್ಯಕ್ರಮ ಅವಕಾಶ ನೀಡಿದಲ್ಲಿ ಸಂಘರ್ಷ ಸಂಭವಿಸುವ ಸಾಧ್ಯತೆ ಇದೆ, ಇದರಿಂದ ಸಾರ್ವಜನಿಕ ಮತ್ತು ಕಾನೂನು ಸುವ್ಯವಸ್ಥೆಗೆ ದಕ್ಕೆ ಉಂಟಾಗುವ ಸಂಭವ ಎದುರಾಗಬಹುದು ಎಂದು ಜಿಲ್ಲಾ ಪೊಲೀಸ್ ಇಲಾಖೆಗೆ ದೂರನ್ನು ಸಲ್ಲಿಸಿ ಎಚ್ಚರಿಸಿದ ಅವರು, ಯಾವುದೇ ಕಾರಣಕ್ಕೂ ಈ ಸಮಾವೇಶವನ್ನು ನಡೆಸಲು ಪೊಲೀಸರು ಮತ್ತು ಇತರ ಇಲಾಖೆಯ ಅಧಿಕಾರಿಗಳು ಅನುಮತಿ ನೀಡಬಾರದು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಘವೇಂದ್ರ, ಇಮ್ರಾನ್ನ್ , ಮಲ್ಲಿಕಾರ್ಜುನ, ವಕೀಲರಾದ ಕೆ.ಪ್ರಕಾಶ್, ಕಿಶೋರ್, ಪ್ರವೀಣಕುಮಾರ್, ಖಲಂದರ್ ಸೇರಿದಂತೆ ಇತರರಿದ್ದರು.

# ಮುಡಿಗೇರಿಸಿಕೊಂಡ ಕುವರ ಪ್ರಶಾಂತ ಕನ್ನೂರಕರ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**




ಎಡೆದೊರೆನಾಡು ರಾಯಚೂರು ಜಿಲ್ಲಾ ಉತ್ಸವ–2026 ನಿಮತ್ತ ಜನವರಿ 28ರಂದು ರಾಯಚೂರನಲ್ಲಿ ನಡೆದ ರಾಜ್ಯ ಮಟ್ಟದ ಪುರುಷರ ದೇಹದಾರ್ಢ್ಯ ಸ್ಪರ್ಧೆಯಲ್ಲಿ ಬೆಳಗಾವಿ ಜಿಲ್ಲೆಯ ದೇಹದಾರ್ಢ್ಯ ಪಟು ಪ್ರಶಾಂತ ಕನ್ನೂರಕರ ಅವರು ಮಿಸ್ಟರ್ ರಾಯಚೂರು ಉತ್ಸವ–2026ರ ಕಿರೀಟವನ್ನು ಮುಡಿಗೇರಿಸಿಕೊಂಡರು.

ಬೆಳಗಾವಿಯ ಮತ್ತೊಬ್ಬ ದೇಹದಾರ್ಢ್ಯ ಪಟು ಪ್ರತಾಪ ವಿಠ್ಠಲ್ ಕಲಕುಂದ್ರಿಕರ ಅವರು ರನರ್ ಆಫ್ ಆಗಿ ಹೊರಹೊಮ್ಮಿದರು.

ರಾಯಚೂರಿನ ವೃಷಭ್ ವಶಿಷ್ಠ ಅವರು ಬೆಸ್ಟ್ ಪೋಜರ್ ಸ್ಥಾನಕ್ಕೆ ತೃಪ್ತಿಪಟ್ಟರು.

ವಿಜೇತರಿಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ, ಮಹಾನಗರ ಪಾಲಿಕೆ ಕಮಿಷನರ್ ಜುಬಿನ್ ಮೋಹಪಾತ್ರ, ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘದ ಅಧ್ಯಕ್ಷರಾದ ಮಂಜುನಾಥ ಹಾನಗಲ್, ಸಂಘದ ಫೌಂಡರ್ ಹಾಗೂ ಕಾರ್ಯದರ್ಶಿ ಸುಧಾಕರ ಕುರುಡಿ ಅವರು ವಿಜೇತರಿಗೆ ಟ್ರಾಫಿ, ಮೆಡಲ್, ಪ್ರಮಾಣ ಪತ್ರ ಮತ್ತು ಕ್ರಮವಾಗಿ ಪ್ರಥಮ ಬಹುಮಾನ 30,000 ರೂ., ದ್ವಿತೀಯ ಬಹುಮಾನ 10,000 ರೂ ಹಾಗೂ ತೃತೀಯ ಬಹುಮಾನ 5000 ರೂ.ಗಳನ್ನು ನೀಡಿ ಸನ್ಮಾನಿಸಿ ಗೌರವಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಸಹಯೋಗದಲ್ಲಿ ನಗರದ ಮಹಾತ್ಮ ಗಾಂಧೀ ಜಿಲ್ಲಾ ಕ್ರೀಡಾಂಗಣದಲ್ಲಿ ಈ ದೇಹದಾರ್ಢ್ಯ ಸ್ಪರ್ಧೆ ನಡೆಯಿತು.

ಗಂಗಾಧರ ಎಂ., ಶಂಕರ ಪಿಲ್ಲೆ, ಮೈಬೂಬ್, ಸುಧಾಕರ, ಸುನೀಲ್ ರಾವುತ್, ಕಿರಣಕುಮಾರ, ಸಬರುದ್ದೀನ್ ಪಾಶಾ ಸೇರಿದಂತೆ ಇನ್ನಿತರರು ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು. 55 ಕೆ.ಜಿ., 60 ಕೆ.ಜಿ., 65 ಕೆ.ಜಿ., 70 ಕೆ.ಜಿ., 75 ಕೆ.ಜಿ., 80 ಕೆ.ಜಿ. ಮತ್ತು 80+ ಕೆ.ಜಿ ಸೇರಿದಂತೆ ಒಟ್ಟು ಏಳು ವಿಭಾಗದಲ್ಲಿ ಸ್ಪರ್ಧೆ ನಡೆಯಿತು. ಪ್ರತಿ ವಿಭಾಗದಲ್ಲಿ ವಿಜೇತರಾದ ತಲಾ ಐದು ಸ್ಪರ್ಧಾಳುಗಳಿಗೆ ಕ್ರಮವಾಗಿ 15,000, 5000, 4000, 3000 ಮತ್ತು 2000 ರೂ ನಗದು ಬಹುಮಾನ, ಪ್ರಮಾಣ ಪತ್ರ ಮತ್ತು ಮೆಡಲ್ ನೀಡಿ ಸತ್ಕರಿಸಲಾಯಿತು.

ಪೂರ್ಣಪಂದ್ಯ ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಜಿಪಂ ಸಿಇಓ: ದೇಹದಾರ್ಢ್ಯ ಸ್ಪರ್ಧೆಯು ಜನವರಿ 28ರ ರಾತ್ರಿ 7.30ಕ್ಕೆ ಆರಂಭವಾಯಿತು. ಜಿಪಂ ಸಿಇಓ ಮಹಾನಗರ ಪಾಲಿಕೆಯ ಆಯುಕ್ತರು, ಅಪರ ಜಿಲ್ಲಾಧಿಕಾರಿಗಳು ಹಾಗೂ ಇನ್ನಿತರ ಅಧಿಕಾರಿಗಳೊಂದಿಗೆ

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು, ಪಂದ್ಯ ವೀಕ್ಷಕರ ಸಾಲಿನಲ್ಲಿ ಕುಳಿತು ಪಂದ್ಯ ಆರಂಭದಿಂದ ರಾತ್ರಿ 10.30ರವರೆಗೆ ಸತತ 3 ಗಂಟೆ ಸಮಯ ದೇಹದಾರ್ಢ್ಯ ಸ್ಪರ್ಧೆಯ ವೀಕ್ಷಣೆ ನಡೆಸಿ ಸ್ಪರ್ಧಾಳುಗಳಿಗೆ ಹುರಿದುಂಬಿಸಿದರು.

ಉತ್ಸವದ ಬಗ್ಗೆ ಸಲಹೆ ಕೇಳಲು ಜಿಲ್ಲಾಡಳಿತದಿಂದ ನಡೆಸಿದ ಸಂಘ ಸಂಸ್ಥೆಗಳ, ಗಣ್ಯರ, ನಾಗರಿಕರ, ಬುದ್ಧಿಜೀವಿಗಳ, ಸಾಹಿತಿಗಳ, ಕಲಾವಿದರ ಮೊದಲ ಸಭೆಯಲ್ಲಿ ಕೇಳಿ ಬಂದ ಸಲಹೆಯಂತೆ ನಾವು ರಾಜ್ಯಮಟ್ಟದ ದೇಹದಾರ್ಢ್ಯ ಸ್ಪರ್ಧೆ ಆಯೋಜನೆ ಮಾಡಿ ಕ್ರೀಡಾಸಕ್ತರಿಗೆ ಸ್ಫೂರ್ತಿ ನೀಡಿದ್ದೇವೆ ಎಂದು ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾಧಿಕಾರಿಗಳು ಅಭಿಪ್ರಾಯ ಹಂಚಿಕೊಂಡರು. ಸಮಾರಂಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಡಿವೈಎಸ್ಪಿ ಶಾಂತವೀರ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ತಹಸೀಲ್ದಾರ ಸುರೇಶ ವರ್ಮಾ, ಅಮರೇಶ ಬಿರಾದಾರ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಡಿಎಚ್ ಒ ಡಾ.ಸುರೇಂದ್ರ ಬಾಬು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ಸೇರಿದಂತೆ ಇನ್ನಿತರರು ಇದ್ದರು. ಡಾ.ದಂಡಪ್ಪ ಬಿರಾದಾರ ನಿರೂಪಿಸಿದರು.

## ಮೃತ ಶರೀರ ಆಧಾರಿತ ಶಸ್ತ್ರ ಚಿಕಿತ್ಸಾ ಕಾರ್ಯಾಗಾರ

# ಶಸ್ತ್ರ ಚಿಕಿತ್ಸಾ ತಜ್ಞರಿಗೆ ತರಬೇತಿಯ ಅಗತ್ಯವಿದೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**




ವೈದ್ಯಕೀಯ ಕ್ಷೇತ್ರದಲ್ಲಿ ಶಸ್ತ್ರಚಿಕಿತ್ಸೆ ಅತ್ಯಂತ ಸೂಕ್ಷ್ಮ ಕಾರ್ಯವಿಧಾನವಾಗಿದೆ. ಈ ಕ್ಷೇತ್ರದಲ್ಲಿ ವೈದ್ಯರು ಪರಿಣಿತಿಯನ್ನು ಸಾಧಿಸಲು ಅವರಿಗೆ ಹೆಚ್ಚಿನ ತರಬೇತಿಯ ಅಗತ್ಯವಿದೆ ಎಂದು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ.ಚರಂತಿಮಠ ಹೇಳಿದರು. ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನಲ್ಲಿ ಆಯೋಜಿಸಿದ್ದ ಮೃತ ಶರೀರ ಆಧಾರಿತ ಶಸ್ತ್ರ ಚಿಕಿತ್ಸಾ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ವೈದ್ಯಕೀಯ ಕ್ಷೇತ್ರದಲ್ಲಿ ಮೃತ ಶರೀರವನ್ನು ಶಸ್ತ್ರ ಚಿಕಿತ್ಸಾ ತರಬೇತಿಗಾಗಿ ಉಪಯೋಗಿಸುತ್ತಿರುವುದು ಹೊಸ ವಿಧಾನವಾಗಿದೆ. ಈ ವಿಧಾನವು ಚಿಕಿತ್ಸಾ ತಜ್ಞರು ಪರಿಣತಿ ಹೊಂದಲು ಉಪಯುಕ್ತವಾಗಿದೆ. ತಲೆಬುರುಡೆ ಆಧಾರಿತ ಶಸ್ತ್ರಚಿಕಿತ್ಸೆ ಕಾರ್ಯಾಗಾರ ಉತ್ತರ ಕರ್ನಾಟಕದಲ್ಲಿ ಪ್ರಥಮ ಬಾರಿಗೆ ಆಯೋಜಿಸುತ್ತಿರುವುದು ಅಭಿಮಾನದ ಸಂಗತಿ. ಕರ್ನಾಟಕ ಮಾತ್ರವಲ್ಲದೆ ಬೇರೆ ರಾಜ್ಯಗಳ ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ವೈದ್ಯರು ಇಲ್ಲಿ ತರಬೇತಿ ಪಡೆಯುತ್ತಿರುವರು ಎಂದರು. ಕುಮಾರಿ ಅಂಜಲಿ ಮತ್ತು ರಿಚಾ ಅವರ ಪ್ರಾರ್ಥನೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಸ್ವಾಗತಿಸಿ ಮೃತ ಶರೀರ ಆಧಾರಿತ ಶಸ್ತ್ರ ಚಿಕಿತ್ಸಾ ಕೌಶಲ ಪ್ರಯೋಗಾಲಯದ ಕುರಿತು ಮಾತನಾಡಿದರು.

ಅನಾಟಮಿ ವಿಭಾಗದ ಮುಖ್ಯಸ್ಥ ಡಾ.ಸಂಜೀವ ಕೊಳಗಿ ಪ್ರಾಸ್ತಾವಿಕ ಮಾತನಾಡಿ 50 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಸ್ಥಾಪಿಸಲಾದ ಮೃತ ಶರೀರ ಆಧಾರಿತ ಶಸ್ತ್ರ ಚಿಕಿತ್ಸಾ ಕೌಶಲ ಪ್ರಯೋಗಾಲಯದಲ್ಲಿ ಇದುವರೆಗೆ 20 ಕ್ಕೂ ಹೆಚ್ಚು ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಕಾರ್ಯಾಗಾರದಲ್ಲಿ ಮೃತ ಶರೀರದ ತಲೆ ಬುರುಡೆಯ ಕೆಳಭಾಗದಲ್ಲಿ ಶಸ್ತ್ರಚಿಕಿತ್ಸೆ ತರಬೇತಿ ನೀಡಲಾಗುತ್ತಿದೆ ಎಂದರು.

ಕಾರ್ಯಾಗಾರವನ್ನು ಎಸ್.ಎನ್.ಮೆಡಿಕಲ್ ಕಾಲೇಜಿನ ಅನಾಟಮಿ ಮತ್ತು ಇ.ಎನ್.ಟಿ ವಿಭಾಗ ಹಾಗೂ ಹುಬ್ಬಳ್ಳಿಯ ದಂಡಿ ಅಂತರಾಷ್ಟ್ರೀಯ ಕಲಿಕಾ ಕೇಂದ್ರ ಇವುಗಳ ಸಹಯೋಗದಲ್ಲಿ ಆಯೋಜಿಸಲಾಗಿತ್ತು. ಕಾರ್ಯಾಗಾರದಲ್ಲಿ ವಿವಿಧ ರಾಜ್ಯಗಳಿಂದ ಮತ್ತು ನೆರೆಯ ರಾಷ್ಟ್ರಗಳಿಂದ ಸುಮಾರು 50 ಶಸ್ತ್ರ ಚಿಕಿತ್ಸಾ ತಜ್ಞರು ಪಾಲ್ಗೊಂಡಿದ್ದರು. ರಾಜ್ಯದ ವಿವಿಧ ವೈದ್ಯಕೀಯ ಸಂಸ್ಥೆಗಳ ಇ.ಎನ್.ಟಿ ತಜ್ಞ ವೈದ್ಯರು ಮತ್ತು ಎಸ್.ಎನ್.ಮೆಡಿಕಲ್ ಕಾಲೇಜಿನ ಡಾ.ಸಂಜೀವ ಕೊಳಗಿ ಹಾಗೂ ಡಾ.ಸಿ.ಎಸ್.ಹಿರೇಮಠ ಸಂಪನ್ಮೂಲ ವ್ಯಕ್ತಿಗಳಾಗಿ ಶಿಬಿರಾರ್ಥಿಗಳಿಗೆ ತರಬೇತಿ ನೀಡಲಿರುವರು.

ಅತಿಥಿಗಳಾದ ಹುಬ್ಬಳ್ಳಿ ಕರ್ನಾಟಕ ಮೆಡಿಕಲ್ ಕಾಲೇಜಿನ ಇ.ಎನ್.ಟಿ ತಜ್ಞರಾದ ಡಾ.ರವೀಂದ್ರ ಗದಗ ಮತ್ತು ಡಾ.ಮಂಜುನಾಥ ದಂಡಿ ಮಾತನಾಡಿ, ಎಸ್.ಎನ್. ಮೆಡಿಕಲ್ ಕಾಲೇಜಿನಲ್ಲಿರುವ ಮೃತ ಶರೀರ ಆಧಾರಿತ ಶಸ್ತ್ರ ಚಿಕಿತ್ಸಾ ಕೌಶಲ ಪ್ರಯೋಗಾಲಯ ಇಡೀ ಭಾರತದಲ್ಲೇ ಅತ್ಯುತ್ತಮ ಪ್ರಯೋಗಾಲಯವಾಗಿದೆ. ದೇಶ ಮತ್ತು ವಿದೇಶಗಳಿಂದ ವೈದ್ಯರು ಇಲ್ಲಿ ತರಬೇತಿ ಪಡೆಯಲು ಬರುತ್ತಿರುವುದು ಹೆಮ್ಮೆಯ ಸಂಗತಿ. ಮುಂದಿನ ದಿನಗಳಲ್ಲಿ ಈ ಪ್ರಯೋಗಾಲಯಕ್ಕೆ ಅಂತರಾಷ್ಟ್ರೀಯ ಮಟ್ಟದ ಪ್ರಾಮುಖ್ಯತೆ ದೊರೆಯಲಿದೆ ಎಂದರು. ಇ.ಎನ್.ಟಿ ವಿಭಾಗದ ಮುಖ್ಯಸ್ಥ ಡಾ.ಸಿ.ಎಸ್.ಹಿರೇಮಠ ವಂದಿಸಿದರು. ವೇದಿಕೆಯಲ್ಲಿ ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಎನ್.ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ) ಮತ್ತು ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಉಪಸ್ಥಿತರಿದ್ದರು.

# ರಾಷ್ಟ್ರೀಯ ಮತದಾರರ ದಿನ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕಗಳು ಹಾಗೂ ರಾಜ್ಯಶಾಸ್ತ್ರ ವಿಭಾಗದ ಸಹಯೋಗದಲ್ಲಿ 'ನನ್ನ ಭಾರತ–ನನ್ನ ಮತ' ಎಂಬ ಧ್ಯೇಯವಾಕ್ಯದ 16ನೆಯ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಯಿತು. ಇದರ ಅಂಗವಾಗಿ ವಿದ್ಯಾರ್ಥಿಗಳಿಗೆ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಪ್ರಾಚಾರ್ಯ ಶ್ರೀನಿವಾಸ ನರಗುಂದ, ಎನ್‌ಎಸ್‌ಎಸ್ ಅಧಿಕಾರಿ ಎಸ್.ಎಂ.ಹಡಪದ, ಆಯ್‌ಕ್ಯೂಎಸಿ ಸಂಯೋಜಕ ಡಾ.ಎಸ್.ಎಸ್.ಹಂಗರಗಿ, ಕೀರ್ತಿ ದಾಸರ ಸಹಿತ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಪಾಲ್ಗೊಂಡರು.

# ಇಂದು ಪತ್ರಕರ್ತರಿಗೆ ಕಣ್ಣು ತಪಾಸಣಾ ಶಿಬಿರ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಪ್ರತಿಷ್ಠಿತ ಎಂ.ಎಂ.ಜೋಶಿ ಕಣ್ಣಿನ ಆಸ್ಪತ್ರೆಯ ವತಿಯಿಂದ ಜಿಲ್ಲೆಯ ಪತ್ರಕರ್ತರಿಗೆ ಹಾಗೂ ಕುಟುಂಬದವರಿಗೆ ಜ.30 ರಂದು ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ನವನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಆಸ್ಪತ್ರೆಯ ನುರಿತ ತಜ್ಞ ವೈದ್ಯರು ತಪಾಸಣೆ ನಡೆಸಲಿದ್ದು, ಬೆಳಿಗ್ಗೆ 10 ರಿಂದ ಮಧ್ಯಾಹ್ನ 2ಗಂಟೆಯವರೆಗೆ ತಪಾಸಣಾ ಶಿಬಿರ ನಡೆಯಲಿದೆ. ಶಿಬಿರದ ಸದುಪಯೋಗವನ್ನು ಜಿಲ್ಲೆಯ ಪತ್ರಕರ್ತರು ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಪ್ರಧಾನ ಕಾರ್ಯದರ್ಶಿ ಜಗದೀಶ ಗಾಣಿಗೇರ ಪ್ರಕಟಣೆಯ ಮೂಲಕ ಕೋರಿದ್ದಾರೆ.

# ಇಂದು ಸ್ವಾಮಿ ವಿವೇಕಾನಂದರ ಜಯಂತಿ



• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:**

ಒಂದು ಸಾಮಾನ್ಯ ಕೆಲಸವನ್ನು ಅತ್ಯುತ್ತಮವಾಗಿ ಮಾಡುವುದರಿಂದ ಶ್ರೇಷ್ಠ ಪ್ರತಿಫಲ ದೊರಕುತ್ತದೆ ಎಂದು ಹೇಳಿದ ಮಹಾನ್ ವ್ಯಕ್ತಿ ಸ್ವಾಮಿ ವಿವೇಕಾನಂದರ ಜಯಂತಿ ಹಾಗೂ 1993–94ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮವನ್ನು ತಾಲೂಕಿನ ನಿರ್ಣಾ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ವತಿಯಿಂದ ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದೆ ಎಂದು ಟ್ರಸ್ಟ್ ಅಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ತಿಳಿಸಿದ್ದಾರೆ. ಕಾರ್ಯಕ್ರಮದ ದಿವ್ಯ ಸಾನಿಧ್ಯ ಶ್ರೀಶ್ರೀಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ವಹಿಸಲಿದ್ದಾರೆ. ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹಾಗೂ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ಉದ್ಘಾಟಿಸಲಿದ್ದಾರೆ.

ಡಾ. ರವಿ ಸ್ವಾಮಿ ನಿರ್ಣಾ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ತಹಶೀಲ್ದಾರ್ ಮಂಜುನಾಥ್ ಪಂಚಾಳ, ಆರಕ್ಷಕ ವೃತ್ತ ನಿರೀಕ್ಷರಾದ ಶ್ರೀನಿವಾಸ ಅಲ್ಲಾಪುರ್, ಗ್ರಾಮ ಪಂಚಾಯತ್ ಅಧ್ಯಕ್ಷೆ ಗೀತಾ ಎಂ. ಜೋಗಣಿ, ಉಪಾಧ್ಯಕ್ಷ ಸಂಜೀವಕುಮಾರ್ ಕಿರಣ, ಗುಂಡುರೆಡ್ಡಿ ಜಿ. ನ್ಯಾಯವಾದಿಗಳು ಹಾಗೂ ಸ್ವಾಮಿ ವಿವೇಕಾನಂದ ಪ್ರಶಸ್ತಿ ಪುರಸ್ಕೃತ ಜೈಪಾಲರೆಡ್ಡಿ ನಾಗನಕೇರಾ, 2024–25ನೇ ಸಾಲಿನ ಸ್ವಾಮಿ ವಿವೇಕಾನಂದ ಪ್ರಶಸ್ತಿ ಪುರಸ್ಕೃತರಾದ ರವೀಂದ್ರನಾಥ ಲಾಡ್, ಕರ್ನಾಟಕ ಸೇವಾ ರತ್ನ ಪ್ರಶಸ್ತಿ ಪುರಸ್ಕೃತರಾದ ಮಾರುತಿ ಅಲ್ಲಿಪುರ್, ಕನ್ನಡ ರತ್ನ ಪ್ರಶಸ್ತಿ ಪುರಸ್ಕೃತರಾದ ಅಯೂಬ್ ಮಾಡಗಿ ವಿಶೇಷ ಸನ್ಮಾನಿತರಾಗಿ ಭಾಗವಹಿಸಲಿದ್ದಾರೆ. ಅಪ್ಪು ಸ್ವರಸಾಗರ ಮೇಲೋಡಿಸ್ ಸಂಗೀತ ಬಳಗ ಬನ್ನಳ್ಳಿ ಇವರಿಂದ ಸಾಯಂಕಾಲ 5 ಗಂಟೆಗೆ ರಸಮಂಜರಿ ಕಾರ್ಯಕ್ರಮ ಜರುಗಲಿದೆ. ಆದ ಕಾರಣ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಶಸ್ತಿಗೆ ಅರ್ಜಿ ಆಹ್ವಾನ

ಕಲಬುರಗಿ: ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ 2024–25 ಹಾಗೂ 2025–26ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರ್‌ರಾಷ್ಟ್ರ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದ ಒಳಗಿನ ಮಕ್ಕಳಿಂದ ಬಾಲಗೌರವ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಮಕ್ಕಳು ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ನಟನೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತು ಸಂಶೋಧನೆ ಯಾವುದಾದರೂ ಒಂದು ಕ್ಷೇತ್ರದಲ್ಲಿ ಅಸಾಧಾರಣ ಸಾಧನೆಯನ್ನು ಮಾಡಿ ಪ್ರಶಸ್ತಿ ಪಡೆದ ಪುರಸ್ಕೃತ ಮಗುವಾಗಿರಬೇಕು.

# ವೈದ್ಯಕೀಯ ವಿಜ್ಞಾನ ಸಂಸ್ಥೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶ್ರಮದಾನ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**



ರಾಷ್ಟ್ರೀಯ ಸ್ವಚ್ಛತಾ ದಿನದ ಅಂಗವಾಗಿ ಶುಕ್ರವಾರ ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆ ಹಾಗೂ ಬೋಧಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶ್ರಮದಾನ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಶ್ರೀ ಮರುಳಸಿದ್ಧಾರಾಧ್ಯ ಅವರು ಹೇಳಿದರು. ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಜಿಲ್ಲಾ ಆಸ್ಪತ್ರೆ ಹಾಗೂ ಆರೋಗ್ಯ ಕ್ಷೇತ್ರದ ವ್ಯಾಪ್ತಿಯಲ್ಲಿ ಶುಚಿತ್ವ ಕಾಪಾಡುವ ಉದ್ದೇಶದಿಂದ ಈ ಶ್ರಮದಾನ ಆಯೋಜಿಸಿದ್ದು,

ಅಂದು ಬೆಳಿಗ್ಗೆ 8 ರಿಂದ 9 ಗಂಟೆಯವರೆಗೆ ಶ್ರಮದಾನ ನಡೆಯಲಿದೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯೀಮ್ಸ್, ನ್ಯಾಯವಾದಿಗಳ ಸಂಘ, ಗೃಹರಕ್ಷಕ ದಳ, ಎಸ್ ಘಟಕ, ಇವರ ಸಹಯೋಗದಲ್ಲಿ ಈ ಶ್ರಮದಾನ ಆಯೋಜಿಸಿದ್ದು ಈ ಇಲಾಖೆ ಸಿಬ್ಬಂದಿಗಳು ಶ್ರಮದಾನ ನೀಡಲಿದ್ದಾರೆ ಎಂದು ಹೇಳಿದರು. ರಾಷ್ಟ್ರೀಯ ಲೋಕ್ ಅದಾಲತ್ 2026 ಈ ವರ್ಷದ ಮೊದಲ ರಾಷ್ಟ್ರೀಯ ಲೋಕ್ ಅದಾಲತ್ ಬರುವ ಮಾರ್ಚ್ 14 ರಂದು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣ ಗೋಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ ಪಡಿಸಲಾಗುತ್ತಿದ್ದು, ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಇ– ಸಮನ್ಸ್ ಜಾರಿಯಲ್ಲಿ ಯಾದಗಿರಿ ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮವಾಗಿದೆ, ಜಿಲ್ಲಾ ಪೊಲೀಸ್ ಇಲಾಖೆಯ ಸಹಕಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು ಇ– ಸಮನ್ಸ್, ನೋಟಿಸ್, ವಾರೆಂಟ್ ಜಾರಿಯಲ್ಲಿ ರಾಜ್ಯ ದಲ್ಲಿಯೇ ಈ ಜಿಲ್ಲೆ ಪ್ರಥಮ ಸ್ಥಾನ ಪಡೆದಿದೆ ಎಂದು ಹೇಳಿದರು.

ಜಿಲ್ಲೆಯ ವಿವಿಧ ಪ್ರಕರಣಗಳ ಮೇಲೆ ಶೇ 41 ರಷ್ಟು ಸಮನ್ಸ್ ಜಾರಿಯಾಗಿದೆ. ಶೇ 90 ರಷ್ಟು ವಿಸ್ತರಣೆಯಾಗಿದೆ. ಹಿಂದಿನ ಲೋಕ ಅದಾಲತ್ ಯಶಸ್ವಿಯಾಗಿ ನೆರವೇರಲು ಪೊಲೀಸ್ ಇಲಾಖೆ ಸಹಕಾರ ಅಪಾರವಾಗಿದೆ. ಈ ಸಂದರ್ಭದಲ್ಲಿ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಮಹೇಶ್ ಬಿರಾದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಿದ್ದೇಶ್ವರ ಜಾತ್ರಾ ಮಹೋತ್ಸವ, ಸಾಮೂಹಿಕ ವಿವಾಹ, ಮಹಾರಥೋತ್ಸವ



ವಿಶೇಷ ವರದಿ: ವೀರಯ್ಯ ವಿ ಹಿರೇಮಠ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ತಾಲ್ಲೂಕಿನ ಅಳವಂಡಿ ಗ್ರಾಮದಲ್ಲಿ ಶುಕ್ರವಾರ ಶ್ರೀಸಿದ್ದೇಶ್ವರನಿಗೆ ವಿಶೇಷ ಪೂಜೆ, ಮಹಾ ರುದ್ರಾಭಿಷೇಕ, ಮದ್ಯಾಹ್ನ 11ಜೊತೆ ಸರ್ವಧರ್ಮ ಸಾಮೂಹಿಕ ವಿವಾಹ ನಂತರ ಧಾರ್ಮಿಕಸಭೆ, ಸಾಯಂಕಾಲ ಶ್ರೀಸಿದ್ದೇಶ್ವರನ ಧ್ವಜ ಲೀಲಾವ ನಂತರ ಶ್ರೀಗಳಿಂದ ಮತ್ತು ಮುಖ್ಯ ಅತಿಥಿಗಳಿಂದ ಧ್ವಜಾರೋಹಣ ಕಾರ್ಯಕ್ರಮ, ನಂತರ ಶ್ರೀಸಿದ್ದೇಶ್ವರ ಮಹಾ ರಥೋತ್ಸವ ಅದ್ದೂರಿಯಿಂದ ನಡೆಯಲಿದೆ,

ಶನಿವಾರ ಬೆಳಿಗ್ಗೆ ಶ್ರೀ ಮರುಳಾರಾಧ್ಯ ಶಿವಾಚಾರ್ಯರಿಂದ ಅಯ್ಯಾಚಾರ ದೀಕ್ಷಾ ಕಾರ್ಯಕ್ರಮ, ವಿವಿಧ ಗ್ರಾಮದ ಭಕ್ತರಿಂದ ದೀಡ ನಮಸ್ಕಾರ ಹಾಗೂ ಭಕ್ತಿ ಹರಕೆ ಸಲ್ಲಿಸುವ ಕಾರ್ಯಕ್ರಮ, ಸಂಜೆ ಅಡ್ಡಪಲ್ಲಕ್ಕಿ ಉತ್ಸವ ಹಾಗೂ ಕಡುಬಿನ ಕಾಳಗ, ರಾತ್ರಿ ಮದ್ದು ಸುಡುವ ಕಾರ್ಯಕ್ರಮ ನಡೆಯಲಿದೆ ಕಾರ್ಯಕ್ರಮಕ್ಕೆ ಹರ ಗುರು ಚರ ಮೂರ್ತಿಗಳು, ಜನಪ್ರತಿನಿಧಿಗಳು, ಗ್ರಾಮದ ಮುಖಂಡರು, ಹಾಜರಿರಲಿದ್ದಾರೆ.

**ಧರ್ಮಸಭೆ:**

ಸಾನಿದ್ಯ ಶ್ರೀ.ಷ.ಬ್ರ, ಮಾನಿಹಳ್ಳಿ ಪುರವರ್ಗಮಠದ ಡಾ.ಮಳೆಯೋಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಬನ್ನಿಕೊಪ್ಪದ ಶ್ರೀ ಚಿದಾನಂದ ಮಹಾಸ್ವಾಮಿಗಳು, ಹೂವಿನಹಡಗಲಿಯ ಡಾ. ಹಿರಿಶಾಂತವಿರ ಮಹಾ ಸ್ವಾಮಿಗಳು, ಶ್ರೀಮರುಳಾರಾದ್ಯ ಶಿವಾಚಾರ್ಯರು ಶ್ರೀಸಿದ್ದೇಶ್ವರ ಮಠ, ಹಿರೇಹಡಗಲಿಯ ಶ್ರೀಸದ್ಗುರು ಶಿವಯೋಗಿ ಹಾಲಸ್ವಾಮಿಗಳು, ಕುಷ್ಟಗಿಯ ಸದಾನಂದ ಮಹಾರಾಜರು, ಕೂಲಹಳ್ಳಿ ಪರಮಪೂಜ್ಯ ಪಟ್ಟದ ಚಿನ್ಮಯ ಸ್ವಾಮಿಗಳು, ಗುಮ್ಮಗೋಳದ ಪರಮಪೂಜ್ಯ ಪಟ್ಟದ ಚಂದ್ರಶೇಖರ ಮಹಾಸ್ವಾಮಿಗಳು ಹಾಗೂ ಜನಪ್ರತಿನಿಧಿಗಳು ಮುಖಂಡರು ಭಾಗವಹಿಸಲಿದ್ದಾರೆ.



**ದಾಸೋಹ ಸೇವೆ, ವಿವಿಧ ಭಕ್ಷ್ಯ ಭೋಜನ:**

ಶ್ರೀ ಸಿದ್ದೇಶ್ವರ ಜಾತ್ರಾ ಅಂಗವಾಗಿ ಎರಡು ದಿವಸ ಭಕ್ತರಿಗೆ ವಿವಿಧ ಭಕ್ಷ್ಯ ಭೋಜನ ವ್ಯವಸ್ಥೆ ಮಾಡಲಾಗಿದೆ. ಭಕ್ತರು ದೇಣಿಗೆ ನೀಡಿದ ಬುಂದಿ, ಜಿಲೇಬಿ, ಶೇಂಗಾ ಹೋಳಿಗೆ, ರೊಟ್ಟಿ, ತರಕಾರಿ, ಕಾಳು ಪಲ್ಯ, ದಾಲ, ಅನ್ನ, ಸಾಂಬಾರ್ ಇತರ ಭೋಜನಗಳ ವ್ಯವಸ್ಥೆ ಮಾಡಲಾಗಿದೆ. ಸುಮಾರು 10 ಕೌಂಟರ್ ನಲ್ಲಿ ಭೋಜನ ವ್ಯವಸ್ಥೆ ಮಾಡಿದ್ದು. ಪುರುಷ ಹಾಗೂ ಮಹಿಳಾ ಭಕ್ತರಿಗೆ ಪ್ರತ್ಯೇಕ ಬೋಜನ ವ್ಯವಸ್ಥೆ ಮಾಡಲಾಗಿದೆ. ಜಾತ್ರಾ ಪ್ರಯುಕ್ತ ಗ್ರಾಮದಲ್ಲಿ ನಾಟಕ, ಬಯಲಾಟ ಹಾಗೂ ರಸಮಂಜರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಮತ್ತು ಗ್ರಾಮದ ಪ್ರಮುಖ ಬೀದಿ ದೇವಸ್ಥಾನಗಳು ವಿದ್ಯುತ್ ದೀಪಾಂಕಾರಗಳಿಂದ ಕಂಗೊಳಿಸುತ್ತಿವೆ. ಡೊಳ್ಳು ಮಜಲು, ಬಾಜಾ ಬಜಂತ್ರಿ ಮತ್ತು ಮಂಗಲ ವಾದ್ಯಗಳು ಜರುಗಲಿವೆ, ಉಚಿತ ರಕ್ತದಾನ, ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿದೆ.

# ವೇಮನರ ವಚನಗಳಲ್ಲಿ ಉನ್ನತ ಜೀವನದ ಸಂದೇಶ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**




ಮಹಾಯೋಗಿ ವೇಮನರ ವಚನಗಳಲ್ಲಿ ಉನ್ನತ ಜೀವನ ಹಾಗೂ ಮೌಲ್ಯಯುತ ಬದುಕು ಕಟ್ಟಿಕೊಳ್ಳುವ ಚಿಂತನೆ, ಸಂದೇಶಗಳಿವೆ ಎಂದು ಆಧ್ಯಾತ್ಮ ಚಿಂತಕ ಪ್ರದೀಪ ಗುರೂಜಿ ಹೇಳಿದರು. ತಾಲ್ಲೂಕಿನ ಬೆನಕಟ್ಟಿ ಗ್ರಾಮದಲ್ಲಿ ನಡೆದಿರುವ ಬಾಗಲಕೋಟೆ ಬಿವಿವಿ ಸಂಘದ ಅಕ್ಕಮಹಾದೇವಿ ಮಹಿಳಾ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದಲ್ಲಿ 'ವೇಮನರ ವಚನಗಳಲ್ಲಿ ಜೀವನ ಮೌಲ್ಯಗಳು' ವಿಷಯ ಕುರಿತು ಅವರು ಉಪನ್ಯಾಸ ನೀಡಿದರು. ವೇಮನರ ವಚನಗಳು ಅಂತರಾತ್ಮದ ಶುದ್ಧಿ, ನಿಸ್ವಾರ್ಥ ಸೇವೆ, ಸಮಾಜಮುಖಿ ಚಿಂತನೆ, ವ್ಯಕ್ತಿತ್ವ ವಿಕಸನ ಹಾಗೂ ಮಾನವೀಯ ಮೌಲ್ಯಗಳ ಮೂಲಕ ಉತ್ತಮ ಜೀವನಕ್ಕೆ ದಾರಿ ತೋರುತ್ತವೆ ಎಂದ ಗುರೂಜಿ, ಮನುಷ್ಯನಿಗೆ ಜೀವನ ಎಷ್ಟು ಮುಖ್ಯವೋ ಜೀವನದ ಮೌಲ್ಯಗಳೂ ಸಹ ಅಷ್ಟೇ ಮುಖ್ಯವಾಗಿವೆ ಎಂದು ಹೇಳಿದರು.

ಮುಖ್ಯ ಅತಿಥಿ ಉಪನ್ಯಾಸಕಿ ಎಸ್.ಕೆ.ಮಾಡೊಳ್ಳಿ 'ಆರೋಗ್ಯಯುತ ಸಮಾಜಕ್ಕೆ ಕುಟುಂಬದ ಪಾತ್ರ' ವಿಷಯ ಕುರಿತು ಉಪನ್ಯಾಸ ನೀಡಿ, ಪ್ರತಿ ಕುಟುಂಬಗಳ ಜನ ಸಂಸ್ಕಾರವಂತರಾಗಿ ತಮ್ಮ ಜವಾಬ್ದಾರಿಯನ್ನು ನಿರ್ವಹಿಸುವಂತಾದರೆ ಅದು ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಸಹಕಾರಿಯಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರೊ. ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತು, ಸಮಯ ಪ್ರಜ್ಞೆ, ಕೌಶಲ್ಯ ಹಾಗೂ ಆದರ್ಶತೆಯನ್ನು ಬೆಳೆಸುತ್ತದೆ ಎಂದು ಹೇಳಿದರು. ಪ್ರಗತಿಪರ ರೈತ ಭೀಮನಗೌಡ ಕಿಲಬನೂರ, ಪ್ರೊ.ವಿ.ಆರ್.ಗೌಡರ, ಪ್ರೊ.ಎಸ್.ಕೆ. ಹಿರೇಮಠ, ಎನ್.ಎಸ್.ಎಸ್. ಅಧಿಕಾರಿಗಳಾದ ಪ್ರೊ.ಮಲ್ಲಮ್ಮ ಬಾಜಪ್ಪನವರ ಹಾಗೂ ಪ್ರೊ. ಎ.ಆರ್. ಬಡಿಗೇರ ವೇದಿಕೆಯಲ್ಲಿದ್ದರು. ಅಕ್ಕಮಹಾದೇವಿ ತಂಡದ ಶಿಬಿರಾರ್ಥಿಗಳು ಎನ್.ಎಸ್.ಎಸ್. ಗೀತೆ ಹಾಡಿದರು. ಅಪೇಕ್ಷಾ ಶಿಕ್ಕೇರಿ ಸ್ವಾಗತಿಸಿದರು. ಭಾಗ್ಯ ಕಂಬಳಿ ಹಾಗೂ ಶಂಕ್ರಮ್ಮ ಮುರಗೋಡ ಪರಿಚಯಿಸಿದರು. ವಿದ್ಯಾ ಹಾಸಲಕರ್ ವರದಿ ವಾಚಿಸಿದರು. ರಾಧಿಕಾ ಹಾಗೂ ವೀಣಾ ನಿರೂಪಿಸಿದರು. ಕವಿತಾ ಮಾಲಗಿ ವಂದಿಸಿದರು.

# ಪ್ರಶಸ್ತಿಗಾಗಿ ಕೃತಿಗಳ ಆಹ್ವಾನ

ಕಲಬುರಗಿ: ಕರ್ನಾಟಕ ಬಾಲವಿಕಾಸ ಅಕಾಡೆಮಿಯು 2024ನೇ ಸಾಲಿನ (ಅಂದರೆ 2024ರ ಜನವರಿಯಿಂದ ಡಿಸೆಂಬರ್‌ವರೆಗೆ) ಹಾಗೂ 2025ನೇ (ಅಂದರೆ 2025ರ ಜನವರಿ ಯಿಂದ ರಿಂದ ಡಿಸೆಂಬರ್‌ವರೆಗೆ) ಸಾಲಿನಲ್ಲಿ ಮಕ್ಕಳ ಕ್ಷೇತ್ರದಲ್ಲಿ ರಚಿಸಲ್ಪಟ್ಟ ಆಯ್ದ ಉತ್ತಮ ಪುಸ್ತಕಗಳಿಗೆ "ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿ"ಯನ್ನು ಪ್ರದಾನ ಮಾಡಲು ಕೃತಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

2024ನೇ ಹಾಗೂ 2025ನೇ ಸಾಲಿನ ಅವಧಿಯಲ್ಲಿ ಅಂದರೆ ಜನವರಿಯಿಂದ ಡಿಸೆಂಬರ್ ತಿಂಗಳ ಅಂತ್ಯದ ಅವಧಿಯಲ್ಲಿ ಪ್ರಕಟಗೊಂಡ ಸ್ವ–ರಚಿತ ಕವನ ಸಂಕಲನ, ಕಥಾ ಸಂಕಲನ, ನಾಟಕ, (ಪಠ್ಯಾಧಾರಿತ ಬಿಟ್ಟು) ಮಕ್ಕಳ ಕಾದಂಬರಿ, ವೈಜ್ಞಾನಿಕ ಲೇಖನಗಳ ಸಂಕಲನ, ಅನುವಾದಿತ ಕೃತಿ (ಯಾವುದೇ ಪ್ರಕಾರದ ಮಕ್ಕಳ ಸಾಹಿತ್ಯ) ಮಕ್ಕಳ ಸಾಹಿತ್ಯ ವಿಮರ್ಶಾ ಕೃತಿ ಹೀಗೆ ಏಳು ಪ್ರಕಾರದ ಮಕ್ಕಳ ಸಾಹಿತ್ಯದ ಮಕ್ಕಳ ಕ್ಷೇತ್ರದಲ್ಲಿ ರಚಿಸಲ್ಪಟ್ಟ ಆಯ್ದ ಉತ್ತಮ ಕೃತಿಗಳನ್ನು ಪ್ರಶಸ್ತಿಗಾಗಿ ಸಲ್ಲಿಸಬಹುದಾಗಿದೆ. ಮಕ್ಕಳ ಕ್ಷೇತ್ರದಲ್ಲಿ ರಚಿಸಲ್ಪಟ್ಟ ಅಯ್ದ ಉತ್ತಮ ಕೃತಿಗಳನ್ನು ಇಚ್ಛೆಯುಳ್ಳ ಮಕ್ಕಳು ದಾಖಲಾತಿಗಳೊಂದಿಗೆ ಐದು ಪ್ರತಿಗಳನ್ನು 2026ರ ಫೆಬ್ರವರಿ 10ರ ಸಾಯಂಕಾಲ 5 ಗಂಟೆಯೊಳಗಾಗಿ ಕಲಬುರಗಿ ನಗರದ ಗುರುಕುಲ ಕಾಲೇಜ ಹತ್ತಿರದ ದಢೆದ ಆಸ್ಪತ್ರೆ ಆವರಣದಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸದರಿ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಕರುನಾಡಿನಲ್ಲಿ ನೆಮ್ಮದಿಯ

# ಗ್ಯಾರಂಟಿ

ಭೂ ಒಡೆತನವೀಗ

ಮತ್ತಷ್ಟು ಸರಳ, ಸುರಕ್ಷಿತ





- ಭೂ ದಾಖಲೆಗಳ ಸುರಕ್ಷತೆಗೆ ಭೂ ಸುರಕ್ಷಾ ಯೋಜನೆ ಜಾರಿ
- ಭೂ ಮಂಜೂರಾತಿ ಪಡೆದವರಿಗೆ ನನ್ನ ಭೂಮಿ ಖಾತರಿ
- ಗ್ರಾಮ ಪಂಚಾಯತ್ ಮಟ್ಟದಲ್ಲಿ ಕಡತ ವ್ಯವಹಾರಕ್ಕೆ ಡಿಜಿಟಲ್ ವ್ಯವಸ್ಥೆ
- ಫೇಸ್‌ಲೆಸ್, ಸಂಪರ್ಕರಹಿತ, ಆನ್‌ಲೈನ್ ಇ-ಖಾತಾ ಪಡೆಯುವ ವ್ಯವಸ್ಥೆ ಜಿಬಿಎ ವ್ಯಾಪ್ತಿಯಲ್ಲಿ ಜಾರಿ
- ಕಂದಾಯ ಗ್ರಾಮಗಳಾಗಿ ಪರಿವರ್ತನೆಗೊಂಡಿರುವ ಹಾಡಿ, ಹಟ್ಟಿ, ತಾಂಡಾಗಳಲ್ಲಿನ ನಿವಾಸಿಗಳಿಗೆ 94-ಡಿ, ಅಡಿ ಮೇ 20 ರಂದು ಒಂದು ಲಕ್ಷ ಡಿಜಿಟಲ್ ಹಕ್ಕುಪತ್ರಗಳ ವಿತರಣೆ
- ರಾಜ್ಯಾದ್ಯಂತ ಪೋಡಿ ದುರಸ್ತಿ ಅಭಿಯಾನ ಕೈಗೊಳ್ಳಲಾಗಿದೆ
- ಸರ್ಕಾರಿ ಜಮೀನು ರಕ್ಷಣೆಗೆ ಆನ್‌ಲೈನ್ ಗಸ್ತು ; ಲ್ಯಾಂಡ್ ಬೀಟ್ ಅಪ್ಲಿಕೇಶನ್ ಜಾರಿ
- ಮಂಜೂರಾದ ಜಮೀನುಗಳ ಪೋಡಿ, ದುರಸ್ತಿ ಕಾರ್ಯವನ್ನು ಆನ್‌ಲೈನ್ ಮುಖಾಂತರ ನಿರ್ವಹಿಸಲು ನೂತನ ತಂತ್ರಾಂಶ

ಕರ್ನಾಟಕ ನವ ನಿರ್ಮಾಣಕ್ಕೆ

## ಗ್ಯಾರಂಟಿ ಸರ್ಕಾರ...

ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ